10 March 2026 Tuesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಬದುಕಿನಲ್ಲಿ ನಮ್ಮ ಸಮಾಧಾನವೇ ಕಳೆದು ಹೋಗುವಷ್ಟು ಯಾರನ್ನೂ ಸಮಾಧಾನಿಸುವುದು, ಓಲೈಸುವುದು ಮಾಡಬಾರದು!

-ಸ್ನೇಹಾ ಆನಂದ್

info.varthaman@gmail.com



ಮಂಡ್ಯ ನಗರಸಭೆ: 123.62 ಕೋಟಿ ಆಯವ್ಯಯ ಮಂಡನೆ ಪುಟ ಸಂ. 2



ಸ್ತ್ರೀಯರು ಆರೋಗ್ಯದ ಕಡೆ ಗಮನಹರಿಸಿ: ಹೆಚ್ಚುವರಿ ಜಿಲ್ಲಾಧಿಕಾರಿ ಪುಟ ಸಂ. 3



ತುಂಬಸೋಗೆ ಗ್ರಾಮದಲ್ಲಿ: ವಿಜೃಂಭಣೆಯಿಂದ ಶನಿದೇವರ ಉತ್ಸವ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 118 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಬಡಾವಣೆ ನಿರ್ಮಾಣಕ್ಕೆ 460 ಕೋಟಿ

## ಮೈಸೂರು ಅಭಿವೃದ್ಧಿ ಪ್ರಾಧಿಕಾರದಿಂದ ಬಜೆಟ್ ಮಂಡನೆ। ಮೂಲಸೌಕರ್ಯಕ್ಕೆ ಒತ್ತು

**ಮೈಸೂರು:** ಮೈಸೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಬೊಮ್ಮೇನಹಳ್ಳಿ, ಕಮರಹಳ್ಳಿ ಹಾಗೂ ಇತರೆ ಗ್ರಾಮಗಳಲ್ಲಿ ರೈತರ ಸಹಭಾಗಿತ್ವದಲ್ಲಿ ಬಡಾವಣೆ ನಿರ್ಮಾಣ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. ಯೋಜನೆಗೆ 2026-27ನೇ ಸಾಲಿನ ಬಜೆಟ್‌ನಲ್ಲಿ 460 ಕೋಟಿ ರೂ. ಕಾಯ್ದಿರಿಸಲಾಗಿದೆ.

ಪ್ರಾಧಿಕಾರದಿಂದ ಬಡಾವಣೆ ರಚನೆ ಮಾಡಲು ಭೂಸ್ವಾಧೀನಪಡಿಸಿಕೊಂಡು ಅಭಿವೃದ್ಧಿಪಡಿಸದೇ ಇರುವ ವಿಜಯಶ್ರೀಪುರ ಮತ್ತು ಇತರೆ ಗ್ರಾಮಗಳಲ್ಲಿನ ಸುಮಾರು 90 ಎಕರೆ ಪ್ರದೇಶಗಳಲ್ಲಿ ಹೊಸದಾಗಿ ಬಡಾವಣೆ ರಚಿಸಲು ಉದ್ದೇಶಿಸಿದೆ. ಈ ಕಾಮಗಾರಿಗೆ 20.00 ರೂ. ಕೋಟಿಗಳನ್ನು ಕಾಯ್ದಿರಿಸಲಾಗಿದೆ. ಪ್ರಾಧಿಕಾರದ ವ್ಯಾಪ್ತಿಯಲ್ಲಿ ವಾಣಿಜ್ಯ ಸಂಕೀರ್ಣ, ಕ್ರೀಡಾ ಸಂಕೀರ್ಣ, ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಿದೆ. 31.90 ಕೋಟಿ ರೂ.ಗಳನ್ನು ಕಾಯ್ದಿರಿಸಲಾಗಿದೆ ಎಂದು ಎಂಡಿಎ ಆಯುಕ್ತ ರಕ್ಷಿತ್ ತಿಳಿಸಿದರು.ಪ್ರಾಧಿಕಾರದ ಕಛೇರಿ ಕಟ್ಟಡವು ಬಹು ವರ್ಷಗಳ ಕಟ್ಟಡವಾಗಿದ್ದು, ಸದರಿ ಕಟ್ಟಡವನ್ನು ನವೀಕರಿಸುವ ಕಾಮಗಾರಿಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು, 2026-27ನೇ ಸಾಲಿನಲ್ಲಿ 15.00ರೂ. ಕೋಟಿ ಮತ್ತು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ರಸ್ತೆ ಅಭಿವೃದ್ಧಿಪಡಿಸುವ ಸಂಬಂಧ ಭೂಸ್ವಾಧೀನಪಡಿಸಿಕೊಳ್ಳಲು 2026-27ನೇ ಸಾಲಿನಲ್ಲಿ 10.50ರೂ. ಕೋಟಿಗಳನ್ನು ಕಾಯ್ದಿರಿಸಲಾಗಿದೆ. ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಮಲಿನ ನೀರು ಮಾರ್ಗ, ಜಂಕ್ಷನ್ ಅಭಿವೃದ್ಧಿ, ಬೀದಿ ದೀಪ, ರಸ್ತೆ ಹಾಗೂ ಇತರೆ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು, 2026-27ನೇ ಸಾಲಿನಲ್ಲಿ 71.23ರೂ. ಕೋಟಿಗಳನ್ನು ಕಾಯ್ದಿರಿಸಲಾಗಿದೆ ಎಂದು ಹೇಳಿದರು.

ನಿಧಿ 3ರ ಅಡಿಯಲ್ಲಿ ಸಂಗ್ರಹಿಸಿದ ಕರ ಮತ್ತು ಉಪಕರಗಳಲ್ಲಿ ನೀರು ಸರಬರಾಜು ಯೋಜನೆಗಳ ಅನುಷ್ಠಾನ, ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಆಯಾ ಸ್ಥಳೀಯ ಸಂಸ್ಥೆಗಳಿಗೆ ವರ್ಗಾವಣೆ, ಪ್ರಾಧಿಕಾರದಿಂದ ವರ್ತುಲ ರಸ್ತೆಗಳ ರಚನೆ, ಮತ್ತು ಅಭಿವೃದ್ಧಿಗಾಗಿ ಬಳಸಿಕೊಳ್ಳಲು ಕೊಳಚೆ ಪ್ರದೇಶಗಳ ಸುಧಾರಣೆ ಮತ್ತು ಉನ್ನತೀಕರಣಕ್ಕಾಗಿ ಕೊಳಚೆ ಪ್ರದೇಶಾಭಿವೃದ್ಧಿ ಮಂಡಳಿಗೆ ವರ್ಗಾವಣೆ ಇವುಗಳಿಗಾಗಿ ರೂ.7046,75 ಲಕ್ಷಗಳನ್ನು ವೆಚ್ಚ ಮಾಡಲು ಅಂದಾಜಿಸಲಾಗಿದೆ. ಅಸ್ತಿತ್ವದಲ್ಲಿರುವ ಕೆರೆಗಳ ಪುನರುಜ್ಜೀವನ, ನೀರಿನ ಟ್ಯಾಂಕ್ ಗಳ ರಚನೆ, ಕಲ್ಯಾಣಿಗಳು/ಬಾವಿಗಳ ಪುನರುಜ್ಜೀವನ, ಯಾವುದೇ ಜಲ ಮೂಲಗಳ ಲಭ್ಯವಿಲ್ಲದ ಕಡೆ ಸಂಭಾವ್ಯ ಜಲ ಮೂಲಗಳಿಗೆ ಸಂಪರ್ಕ ಕಲ್ಪಿಸಲು ನೈಸರ್ಗಿಕ ನಾಲೆಗಳನ್ನು ಮಾಡುವುದು ಮತ್ತು ಅಂತರ್ಜಲ ಮರು ಪೂರಣಕ್ಕಾಗಿ ರೂ. 6421.26 ಲಕ್ಷಗಳನ್ನು ವೆಚ್ಚ ಪುಟ 2ಕ್ಕೆ



### ಕೆರೆ ಪುನರುಜ್ಜೀವನ

ನಗರದ ಇಲವಾಲ ಗ್ರಾಮದ ಕೆರೆ, ಸಾಹುಕಾರಹುಂಡಿ ಕೆರೆ, ಬೊಮ್ಮೇನಹಳ್ಳಿ ಕೆರೆ, ಕೂರ್ಗಳ್ಳಿ ಕಲ್ಯಾಣಿ, ಭುಗತಗಳ್ಳಿ, ಚಿಕ್ಕಹಳ್ಳಿ, ನಾಡನಹಳ್ಳಿ ವ್ಯಾಪ್ತಿಯಲ್ಲಿನ ಕೆರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊ ಳ್ಳಲು ಉದ್ದೇಶಿಸಿದ್ದು, 2026-27ನೇ ಸಾಲಿನಲ್ಲಿ ರೂ.64.21 ಕೋಟಿಗಳನ್ನು ಕಾಯ್ದಿರಿಸಲಾಗಿದೆ. ನಗರದ ಹೊರ ಪರಿಧಿ ರಸ್ತೆ ನಿರ್ಮಾಣ ಕಾಮಗಾ ರಿಯ ಡಿ.ಪಿ.ಲರ ಕೈಗೊಳ್ಳಲು ಉದ್ದೇಶಿಸಿದ್ದು, 2026-27ನೇ ಸಾಲಿನಲ್ಲಿ ರೂ.7.43 ಕೋಟಿ ಗಳನ್ನು ಕಾಯ್ದಿರಿಸಲಾಗಿದೆ. ಕುಡಿಯುವ ನೀರು ಒದಗಿಸಲು ಕಬಿನಿ ನೀರು ಸರಬರಾಜು ಯೋಜನೆಯ 2ನೇ ಹಂತದ ಉನ್ನತೀಕರಣ ಕಾಮಗಾರಿ ನಂದಿ ಕೈಗೊಳ್ಳಲು ಉದ್ದೇಶಿಸಿದ್ದು, 2026-27ನೇ ಸಾಲಿನಲ್ಲಿ 3.50 ರೂ. ಕೋಟಿಗಳನ್ನು ಕಾಯ್ದಿರಿಸಲಾಗಿದೆ ಎಂದರು.

### 220.72 ಕೋಟಿ ಆದಾಯ

ಮೈಸೂರು: ಮೈಸೂರು ಅಭಿವೃದ್ಧಿ ಪ್ರಾಧಿಕಾರ ಪ್ರಸಕ್ತ ಆರ್ಥಿಕ ವರ್ಷದ ಬಜೆಟ್‌ನಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಒತ್ತು ನೀಡಿದ್ದು, ಒಟ್ಟಾರೆ ಈ ಬಾರಿ ಬಜೆಟ್‌ನ ಒಟ್ಟು ಗಾತ್ರ 871 ಕೋಟಿ ರೂಪಾಯಿಗಳಾಗಿದೆ. ಈ ಸಂಬಂಧ ಮೈಸೂರು ಅಭಿವೃದ್ಧಿ ಪ್ರಾಧಿಕಾರ(ಎಂಡಿಎ)ದ ಸಭಾಂಗಣದಲ್ಲಿ ಎಡಿಎಂ ಅದ್ಯಕ್ಷರೂ ಆಗಿರುವ ಜಿಲ್ಲಾಧಿಕಾಡಿ ಡಾ.ಜಿ.ಲಕ್ಷ್ಮಿಕಾಂತ ರೆಡ್ಡಿ ಅಧ್ಯಕ್ಷತೆಯಲ್ಲಿ ನಡೆದ 2026-27ನೇ ಸಾಲಿನ ಅಯವ್ಯಯ ಬಜೆಟ್ ಸಭೆಯಲ್ಲಿ ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಕೆ.ಆರ್.ರಕ್ಷಿತ್ ಬಜೆಟ್ ಓದಿದರು. 2025-26ನೇ ಆರ್ಥಿಕ ವರ್ಷದಲ್ಲಿ ಎಲ್ಲಾ ಮೂಲಗಳಿಂದ ಕ್ರೋಢೀಕರಿಸಲು ಉದ್ದೇಶಿಸಲಾಗಿದ್ದ ಒಟ್ಟು ಅಂದಾಜು ಸಂಪನ್ಮೂಲ 87154.30 ಲಕ್ಷಗಳಾಗಿದ್ದು ಹಾಗೂ ಒಟ್ಟು ಅಂದಾಜು ವೆಚ್ಚ 54849.59 ಲಕ್ಷಗಳ ಆಯವ್ಯಯಕ್ಕೆ ಪರಿಷ್ಕರಿಸಲಾಗಿದೆ.

## ವರ್ತಮಾನ ಸಂಕ್ಷಿಪ್ತ

### ನಾನೇ ಪ್ರಾದೇಶಿಕ ಪಕ್ಷ ಕಟ್ಟುವೆ

**ಭ್ರಷ್ಟ ಕುಟುಂಬ ಇರುವವರೆಗೂ ಬಿಜೆಪಿಗೆ ಹೋಗಲ್ಲ: ಶಾಸಕ ಯತ್ನಾಳ್**

**ನವದೆಹಲಿ:** ನಾನೇ ಪ್ರಾದೇಶಿಕ ಪಕ್ಷ ಮಾಡಿ 2028ಕ್ಕೆ ಅಧಿಕಾರಕ್ಕೆ ಬಂದು ಮುಖ್ಯಮಂತ್ರಿ ಆಗುವೆ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

ದೆಹಲಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬಿಜೆಪಿ ಹೈಕಮಾಂಡ್ ನಾಯಕರನ್ನೂ ಭೇಟಿ ಮಾಡಲು ನಾನು ದೆಹಲಿಗೆ ಬಂದಿಲ್ಲ. ಯಾರ ಕಾಲಿಗೂ ಬಿದ್ದು ಪಕ್ಷ ಸೇರಿಸಿಕೊಳ್ಳಿ ಅಂತಾ ಕೇಳಲ್ಲ. ನಾನೇ ಪ್ರಾದೇಶಿಕ ಪಕ್ಷ ಮಾಡ್ತೀನಿ. 2028ಕ್ಕೆ ನಮ್ಮ ಪಕ್ಷ ಅಧಿಕಾರಕ್ಕೆ ಬರಲಿದೆ. ನಾನೇ ಮುಖ್ಯಮಂತ್ರಿ ಆಗ್ತಿನಿ. ನಮ್ಮ ಪಕ್ಷ ಅಧಿಕಾರಕ್ಕೆ ಬರಲಿದೆ. ಯಾರೇ ಏನೇ ಸರ್ವೆ ಮಾಡಿದರೂ ಅಧಿಕಾರಕ್ಕೆ ಬರಲಿದೆ. ಜೆಸಿಬಿ ಆಗುತ್ತೋ? ಏನಾಗುತ್ತೋ? ನೋಡೋಣ ಎಂದು ಹೇಳಿದರು. ಪುಟ 2ಕ್ಕೆ



### ಆರ್‌ಎಸ್‌ಎಸ್ ನಿಷೇಧ ಭ್ರಮೆ: ಸಚಿವ ಸತೀಶ್ ಜಾರಕಿಹೊಳಿ

**ಬೆಂಗಳೂರು:** ಆರ್‌ಎಸ್‌ಎಸ್ ಅನ್ನು ಇದುವರೆಗೆ ಯಾರೂ ನಿಷೇಧ ಮಾಡಿಲ್ಲ. ನಿಷೇಧ ಮಾಡುವುದಾಗಿ ಯಾರೂ ಹೇಳಿಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಅಭಿಪ್ರಾಯಪಟ್ಟರು.

ಆರ್‌ಎಸ್‌ಎಸ್ ಅನ್ನು ನಿಷೇಧಿಸುತ್ತೇವೆ ಎಂದು ಯಾರಾದರೂ ಅಂದುಕೊಂಡಿದ್ದರೆ ಅದು ಭ್ರಮೆ ಎಂಬ ಮಾಜಿ ಸಂಸದ ಅನಂತ ಕುಮಾರ್ ಹೆಗಡೆ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ನಮ್ಮ ಸರ್ಕಾರ ಅಥವಾ ಯಾವುದೇ ಸರ್ಕಾರ ಆರ್ ಎಸ್ ಎಸ್ ಅನ್ನು ನಿಷೇಧಿಸುವ ಬಗ್ಗೆ ಎಲ್ಲೂ ಹೇಳಿಲ್ಲ. ಅದರ ಬಗ್ಗೆ ಚರ್ಚೆ ಮಾಡುವುದು ಅನಗತ್ಯ ಎಂದರು. ಪುಟ 2ಕ್ಕೆ



### ಇಲ್ಲಿ ಡಿಕೆಶಿ ಪರ ನಾವಿದ್ದೇವೆ!

**ಬೆಂಗಳೂರು:** ದೆಹಲಿಗೆ ತೆರಳಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಪರವಾಗಿ ನಾವಿದ್ದೇವೆ. ಅವರು ನಾಳೆಯೇ ಬಂದರೂ ಏನೂ ತೊಂದರೆ ಇಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಡಿಸಿಎಂ ಡಿಕೆಶಿ ದೆಹಲಿಯಲ್ಲೇ ಉಳಿದಿರುವ ವಿಚಾರವಾಗಿ ಪ್ರತಿಕ್ರಿಸಿದರು. ಡಿಸಿಎಂ ಪರವಾಗಿ ಇಲ್ಲಿ ನಾವಿದ್ದೇವೆ. ನಾವು ಇಲ್ಲಿ ನೋಡಿಕೊಳ್ಳುತ್ತೇವೆ ಎಂದರು.

ಭಾನುವಾರ ಖಾಸಗಿ ಕಾರ್ಯಕ್ರಮದ ನಿಮಿತ್ತ ದೆಹಲಿಗೆ ಡಿ.ಕೆ ಶಿವಕುಮಾರ್ ತೆರಳಿದ್ದರು. ಇಂದು ಸೋಮವಾರ ಪುಟ 2ಕ್ಕೆ



### ಲೋಕಾಯುಕ್ತ ಬಲೆಗೆ ಬಿದ್ದ ಜಿಲ್ಲಾಸ್ಪತ್ರೆ ತಜ್ಞವೈದ್ಯೆ, ಸಿಬ್ಬಂದಿ

**ತುಮಕೂರು:** ನೇತ್ರ ಶಸ್ತ್ರಚಿಕಿತ್ಸೆ ಮಾಡಿ ಲೆನ್ಸ್ ಅಳವಡಿಸಲು 6 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದ ಜಿಲ್ಲಾಸ್ಪತ್ರೆ ವೈದ್ಯೆ ಸವಿತಾ, ಸಹಾಯಕನಾದ ಹೊರಗುತ್ತಿಗೆ ನೌಕರ ಮನೋಜ್ ಸೋಮವಾರ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ನಗರದ ಉಪ್ಪಾರಹಳ್ಳಿಯ ಆಟೊ ಚಾಲಕ ಅವಿನಾಶ್ ಅವರು ತಾಯಿ ಮಂಗಳಮ್ಮ ಅವರನ್ನು ಕಣ್ಣಿನ ಶಸ್ತ್ರಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಕರೆತಂದಿದ್ದರು. ತಜ್ಞ ವೈದ್ಯೆ ಸವಿತಾ ಕಣ್ಣು ಪರೀಕ್ಷಿಸಿ ಶಸ್ತ್ರಚಿಕಿತ್ಸೆ ಮಾಡಲು ಪುಟ 2ಕ್ಕೆ






### ವೃದ್ಧೆ ಕೊಲೆ ಮಾಡಿ ಚಿನ್ನಾಭರಣ ಕಳವು

**ಚಾಮರಾಜನಗರ:** ಚಿನ್ನದಾಸೆಗೆ ವೃದ್ಧೆಯನ್ನು ಕೊಲೆ ಮಾಡಿ ಚಿನ್ನದ ಸರ, ಓಲೆ, ನಗದನ್ನು ಕಳ್ಳತನ ಮಾಡಿರುವ ಘಟನೆ ಯಳಂದೂರು ತಾಲೂಕಿನ ಬನ್ನಿಸಾರಿಗೆ ಗ್ರಾಮದಲ್ಲಿ ನಡೆದಿದೆ. ಸಿದ್ದಮ್ಮ (70) ಮೃತ ದುರ್ದೈವಿ. ಮನೆಯಲ್ಲಿದ್ದ 20 ಗ್ರಾಂ ಚಿನ್ನದ ಸರ, 10 ಗ್ರಾಂ ಓಲೆ, 50 ಸಾವಿರ ನಗದು ಕಳವಾಗಿದೆ. ರಾತ್ರಿ ಮಲಗಿದ ವೇಳೆ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

ನಿನ್ನೆ ರಾತ್ರಿ ಕರೆ ಮಾಡಿ ಮಾತಾಡಿದ್ದೆ. ಊಟ ಮಾಡಿ ನಮ್ಮ ತಾಯಿ ಮಲಗಿದ್ದಳು. ಬೆಳಗ್ಗೆ ಪಕ್ಕದ ಮನೆಯವರು ಪುಟ 4ಕ್ಕೆ




# ಮೈಸೂರು ಸಿಲ್ಕ್ ಫ್ಯಾಕ್ಟರಿ ಮುಚ್ಚಲ್ಲ

## ವಿಪಕ್ಷ ನಾಯಕರ ಪ್ರಶ್ನೆಗೆ ಸಚಿವ ಕೆ.ವೆಂಕಟೇಶ್ ಪ್ರತಿಕ್ರಿಯೆ

**ಬೆಂಗಳೂರು:** ಟಿ.ನರಸೀಪುರದಲ್ಲಿರುವ ಕೆಎಸ್‌ಐಸಿ ಘಟಕವನ್ನು ಮುಚ್ಚುವುದಿಲ್ಲ. ಅಲ್ಲಿ ಸ್ಟೇಡಿಯಂ ಕಟ್ಟಲ್ಲ. ಆ ಜಾಗ ಕೊಡುವ ಚಿಂತನೆಯನ್ನು ಕೈಬಿಡಲು ಸರ್ಕಾರ ತೀರ್ಮಾನ ಮಾಡಿದೆ ಎಂದು ಸಚಿವ ಕೆ.ವೆಂಕಟೇಶ್ ಸ್ಪಷ್ಟಪಡಿಸಿದರು.

ಟಿ.ನರಸೀಪುರ ರೇಷ್ಮೆ ನೂಲು ತಯಾರಿಕಾ ಘಟಕ ಮುಚ್ಚುವ ವಿಚಾರವನ್ನು ಪ್ರಸ್ತಾಪಿಸಿದ ವಿಪಕ್ಷ ನಾಯಕ ಆರ್.ಅಶೋಕ್ ಅವರು, ಟಿ.ನರಸೀಪುರ ರೇಷ್ಮೆ ನೂಲು ತಯಾರಿಕಾ ಘಟಕ ಮುಚ್ಚಲು ಹೊರಟ ಸರ್ಕಾರದ ನಡೆ ಸರಿಯಲ್ಲ. ಟಿ.ನರಸೀಪುರದಲ್ಲಿ ರೇಷ್ಮೆ ನೂಲು ತೆಗೆಯುವ ಘಟಕ ಮುಚ್ಚಲು ಸರ್ಕಾರ ಹೊರಟಿದೆ. ಸರ್ಕಾರ ಇಲ್ಲಿ ಕ್ರೀಡಾ ಸ್ಟೇಡಿಯಂ ಮಾಡಲು ಯೋಜಿಸಿದೆ. ಸರ್ಕಾರ ತನ್ನ ತೀರ್ಮಾನ ಕೈಬಿಡಬೇಕು ಎಂದು ಅಶೋಕ್ ಆಗ್ರಹಿಸಿದರು. ಇದಕ್ಕೆ ಸಚಿವ ಬೈರತಿ ಸುರೇಶ್ ದನಿಗೂಡಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ, ಸಚಿವ ಕೆ. ವೆಂಕಟೇಶ್ ಅಲ್ಲಿ ಸ್ಟೇಡಿಯಂಗೆ ಜಾಗ ಇದೆ ಅಂತ ಯಾರೋ ಸಿಎಂಗೆ ಮಿಸ್ ಗೈಡ್ ಮಾಡಿದ್ದಾರೆ. ಬಳಿಕ ಅವರಿಗೆ ಅದು ಗೊತ್ತಾಗಿದೆ. ಆ ಜಾಗ ಕೊಡುವ ಚಿಂತನೆಯನ್ನು ಕೈ ಬಿಡಲು







### ರೇಷ್ಮೆ ಸೀರೆಗೆ ಬೇಡಿಕೆ ಹೆಚ್ಚಳ

**ಬೆಂಗಳೂರು:** ಮೈಸೂರು ರೇಷ್ಮೆ ಸೀರೆಗಳ ಉತ್ಪಾದನೆ ಹೆಚ್ಚಿಸಲು ಪ್ರಯತ್ನಿಸಲಾಗುತ್ತಿದೆ. ರೇಷ್ಮೆ ಸೀರೆಗಳನ್ನು ಆನ್‌ಲೈನ್‌ನಲ್ಲಿ ಮಾರಾಟ ನಿಲ್ಲಿಸಿ ಸ್ಥಳೀಯವಾಗಿ ಮಾರಾಟ ಮಾಡುವ ಚಿಂತನೆ ಇದೆ ಎಂದು ಸಚಿವ ಕೆ.ವೆಂಕಟೇಶ್ ತಿಳಿಸಿದರು.

ವಿಧಾನಸಭೆಯಲ್ಲಿ ಸೋಮವಾರ ಮೈಸೂರು ರೇಷ್ಮೆ ಸೀರೆಗಳ ಕುರಿತು ಚರ್ಚೆ ನಡೆಯಿತು. ಪ್ರಶ್ನೋತ್ತರ ಅವಧಿಯಲ್ಲಿ ರೇಷ್ಮೆ ಸೀರೆಗಳ ಮಾರಾಟ, ಉತ್ಪಾದನೆ ಮತ್ತು ಮಾರಾಟ ಪ್ರಕ್ರಿಯೆ ಸರಳಗೊಳಿಸುವ ಸಂಬಂಧ ಶಾಸಕ ಟಿ.ಎಸ್.ಶ್ರೀವತ್ಸ ಅವರು ವಿಷಯ ಪ್ರಸ್ತಾಪಿಸಿದರು. ಇದಕ್ಕೆ ಉತ್ತರಿಸಿದ ಸಚಿವ ಕೆ.ವೆಂಕಟೇಶ್, ಮೈಸೂರು ರೇಷ್ಮೆ ಸೀರೆಗಳಿಗೆ ಬೇಡಿಕೆ ಹೆಚ್ಚುತ್ತಿದೆ.

# ರೂಪಾಯಿ ಮೌಲ್ಯ ಕುಸಿತ

**ನವದೆಹಲಿ:** ಕಚ್ಚಾ ತೈಲ ಬೆಲೆಯಲ್ಲಿ ತೀವ್ರ ಏರಿಕೆ ಮತ್ತು ಡಾಲರ್‌ಗೆ ಬೇಡಿಕೆ ಹೆಚ್ಚಳದಿಂದಾಗಿ ಸೋಮವಾರ ಅಮೆರಿಕದ ಡಾಲರ್ ಎದುರು ಭಾರತದ ರೂಪಾಯಿ ಮೌಲ್ಯ ಸಾರ್ವಕಾಲಿಕ ಕನಿಷ್ಠ ಮಟ್ಟಕ್ಕೆ ಕುಸಿದಿದೆ.

ಡಾಲರ್ ಎದುರು ರೂಪಾಯಿ ಮೌಲ್ಯ 92.20ಕ್ಕೆ ಆರಂಭವಾಗಿ, ಆರಂಭಿಕ ವಹಿವಾಟಿನಲ್ಲಿ ಪ್ರತಿ ಯುಎಸ್ ಡಾಲರ್‌ಗೆ 92.528 ರೂ.ಗೆ ಮತ್ತಷ್ಟು ದುರ್ಬಲಗೊಂಡಿದೆ. ಅಮೆರಿಕ-ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದಿಂದ ಕಚ್ಚಾ ತೈಲವನ್ನು ಬ್ಯಾರೆಲ್‌ಗೆ 118 ಡಾಲರ್‌ಗೆ ಏರಿದೆ. ಇದು ರೂಪಾಯಿ ಮೇಲೆ ಒತ್ತಡ ಹೇರಿದೆ ಎಂದು ವಿಶ್ಲೇಷಿಸಲಾಗಿದೆ.

ಕಚ್ಚಾ ತೈಲ ಬೆಲೆಯ ತೀವ್ರ ಏರಿಕೆಯಿಂದ ದೇಶೀಯ ಕರೆನ್ಸಿ ಒತ್ತಡವನ್ನು ಎದುರಿಸುತ್ತಿದೆ ಎಂದು ಕರೆನ್ಸಿ ತಜ್ಞರು ತಿಳಿಸಿದ್ದಾರೆ. ಸೋಮವಾರ ಕಚ್ಚಾ ತೈಲ ಬೆಲೆ ಶೇ.25ರಷ್ಟು ಏರಿಕೆಯಾಗಿ ಪ್ರತಿ ಬ್ಯಾರೆಲ್‌ಗೆ 116 ಡಾಲರ್‌ಗಳಿಗೆ ತಲುಪಿದೆ. ಕಚ್ಚಾ ತೈಲದ ಬೆಲೆ ಏರಿಕೆಯಿಂದಾಗಿ ಡಾಲರ್‌ಗೆ ಬೇಡಿಕೆ ಹೆಚ್ಚಾಗಿದೆ. ಇದರಿಂದಾಗಿ ರೂಪಾಯಿ ಮೇಲೆ ಒತ್ತಡ ಹೇರಲಾಗಿದೆ ಎನ್ನಲಾಗಿದೆ.



# ಶಾಸಕರ ಪಿಎ ಆತ್ಮಹತ್ಯೆ

**ಬೆಂಗಳೂರು:** ಚನ್ನಗಿರಿ ಶಾಸಕ ಬಸವರಾಜ್ ಶಿವಗಂಗಾ ಅವರ ಆಪ್ತ ಸಹಾಯಕರಾಗಿದ್ದ ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಉಪ್ಪಾರಪೇಟೆ ಬಳಿಯ ಲಾಡ್ಜ್‌ನಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಮೃತನನ್ನು ದಾವಣಗೆರೆಯ ಶಿವಕುಮಾರ್ ಎಂದು ಗುರುತಿಸಲಾಗಿದೆ.

ಮೃತ ಶಿವಕುಮಾರ್ ಚನ್ನಗಿರಿ ಶಾಸಕ ಬಸವರಾಜ್ ಶಿವಗಂಗಾ ಪಿಎ ಆಗಿ ಕೆಲಸ ಮಾಡುತ್ತಿದ್ದರು. ಕೈತುಂಬಾ ಸಾಲ ಮಾಡಿಕೊಂಡಿದ್ದರು. ಕೆಲವು ದಿನಗಳ ಹಿಂದೆಯಷ್ಟೇ ಕೆಲಸದಿಂದ ತೆಗೆಯಲಾಗಿತ್ತು. ಘಟನೆ ನಡೆದ ದಿನ ಹೆಂಡತಿಗೆ ವಿಡಿಯೋ ಕಾಲ್ ಮಾಡಿ ನನಗೆ ಜೀವನ ಸಾಕಾಗಿದೆ ಸಾಯುತ್ತೀನಿ ಎಂದು ಹೇಳಿದ್ದರು ಎನ್ನಲಾಗಿದೆ. ನಗರದ ಲಾಡ್ಜೊಂದರಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ಕಾಡಾನೆ ದಾಳಿ: ಮಹಿಳೆ ಸಾವು

**ಮಡಿಕೇರಿ:** ಹಾಡಹಗಲೇ ಕಾಡಾನೆ ದಾಳಿ ಪರಿಣಾಮ ಮಹಿಳೆಯೊಬ್ಬರು ದಾರುಣವಾಗಿ ಮೃತಪಟ್ಟ ಘಟನೆ ಕೊಡಗು ಜಿಲ್ಲೆಯ ಕುಶಾಲನಗರ ತಾಲೂಕಿನ ನಂಜರಾಯಪಟ್ಟಣ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಾಳೆಗುಂಡಿ ಗಿರಿಜನ ಹಾಡಿಯಲ್ಲಿ ನಡೆದಿದೆ.

ಗ್ರಾಮ ಪಂಚಾಯತಿ ಮಾಜಿ ಸದಸ್ಯೆ ಹಾಡಿಯ ನಿವಾಸಿ ಜಲಜಾಕ್ಷಿ ಮೃತ ದುರ್ದೈವಿ. ಸೋಮವಾರ ಬೆಳಗ್ಗೆ 10 ಗಂಟೆ ಸಮಯದಲ್ಲಿ ಅರಣ್ಯ ಉತ್ಪನ್ನಗಳ ಸಂಗ್ರಹಕ್ಕೆ ತಮ್ಮ ಮನೆಯಂಗಳದ ಆಸುಪಾಸಿನ ಅರಣ್ಯಕ್ಕೆ ತೆರಳಿ ಸೀಗೆ ಹೆರಕುತ್ತಿದ್ದಾಗ ಧಾವಿಸಿದ ಕಾಡಾನೆ ಒಂದೇ ಸಮನೆ ದಾಳಿ ನಡೆಸಿದೆ ಎನ್ನಲಾಗಿದೆ. ಸ್ಥಳಕ್ಕೆ ಕುಶಾಲನಗರ ಅರಣ್ಯಾಧಿಕಾರಿಗಳು ಧಾವಿಸಿ ಮಹಜರು ನಡೆಸಿದ್ದಾರೆ.

ಘಟನೆ ಸಂಬಂಧಿಸಿದಂತೆ ಗ್ರಾಮೀಣ ಭಾಗದ ಜನರು ಅರಣ್ಯ ಇಲಾಖೆಯ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಈ ಭಾಗದಲ್ಲಿ ದಿನನಿತ್ಯ ಕಾಡಾನೆಗಳ ಉಪಟಳ ಹೆಚ್ಚಾಗಿದೆ. ಮನೆಯಿಂದ ಯಾರೂ ಹೊರಗೆ ಬರಲಾಗದ ವಾತಾವರಣ ನಿರ್ಮಾಣವಾಗಿದೆ. ಅರಣ್ಯ ಇಲಾಖೆ ಸಿಬ್ಬಂದಿ ಕಾಡಾನೆಗಳನ್ನು ಓಡಿಸಲು ಮುಂದಾಗುವುದಿಲ್ಲ. ಹೀಗಾಗಿ ದಿನನಿತ್ಯ ಪ್ರಾಣಭಯದಲ್ಲೇ ಓಡಾಟ ನಡೆಸುವ ಅನಿವಾರ್ಯತೆ ಎದುರಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.




# ದಂಪತಿ ನೇಣಿಗೆ ಶರಣು: ಬದುಕುಳಿದ 2 ವರ್ಷದ ಮಗು

**ಮಂಡ್ಯ:** ಕೌಟುಂಬಿಕ ಕಲಹದ ಹಿನ್ನೆಲೆಯಲ್ಲ 2 ವರ್ಷದ ಮಗುವಿನ ಕತ್ತು ಹಿಸುಕಿ, ಬಳಿಕ ದಂಪತಿ ನೇಣು ಶರಣಾಗಿದ್ದಾರೆ. ಆದರೆ ಅಸ್ವಸ್ಥಗೊಂಡಿದ್ದ ಮಗು ಅದೃಷ್ಟವಶಾತ್ ಬದುಕುಳಿದಿರುವ ಘಟನೆ ಮಂಡ್ಯದ ಕೆ.ಆರ್.ಪೇಟೆಯಲ್ಲಿ ನಡೆದಿದೆ.

ಹೊಸಕೋಟೆ ಗ್ರಾಮದ ದರ್ಶನ್, ದಿವ್ಯಶ್ರೀ ನೇಣಿಗೆ ಶರಣಾದ ದಂಪತಿ. ತಮ್ಮ ಎರಡು ವರ್ಷದ ಮಗುವನ್ನು ಕತ್ತು ಹಿಸುಕಿ ಕೊಲೆ ಮಾಡಲು ಯತ್ನಿಸಿದ್ದಾರೆ. ಮಗು ಸತ್ತಿದೆ ಎಂದು ಭಾವಿಸಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ತಿಳಿದುಬಂದಿದೆ.

ದಂಪತಿ ಕಳೆದ ಮೂರು ವರ್ಷದ ಹಿಂದೆ ವಿವಾಹವಾಗಿದ್ದರು. ದಂಪತಿಗೆ ಎರಡು ವರ್ಷದ ಮಗುವಿತ್ತು. ಕೆ.ಆರ್.ಪೇಟೆ ಜಯನಗರ ಬಡಾವಣೆ ಮನೆಯೊಂದರಲ್ಲಿ ದಂಪತಿ ಬಾಡಿಗೆಗೆ ಇದ್ದರು. ಸೋಮವಾರ ಬೆಳಿಗ್ಗೆ ಪುಟ 2ಕ್ಕೆ



# ಹೂಡಿಕೆದಾರರ 30 ಲಕ್ಷ ಕೋಟಿ ನಷ್ಟ

## * ಮಧ್ಯಪ್ರಾಚ್ಯ ಯುದ್ಧದಿಂದ ಕರಗಿದ ಹೂಡಿಕೆದಾರರ ಸಂಪತ್ತು

**ಮುಂಬೈ:** ಇರಾನ್ ಮತ್ತು ಇಸ್ರೇಲ್, ಅಮೆರಿಕ ನಡುವಿನ ಯುದ್ಧದಿಂದ ಷೇರುಮಾರುಕಟ್ಟೆ ಮೇಲೆ ಗಂಭೀರ ಪರಿಣಾಮ ಬೀರಿದೆ. ಯುದ್ಧ ಆರಂಭವಾದ ದಿನದಿಂದ ಈವರೆಗೂ ಹೂಡಿಕೆದಾರರ ಬರೋಬ್ಬರಿ 30 ಲಕ್ಷ ಕೋಟಿ ಕರಗಿಹೋಗಿದೆ.

ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಇರಾನ್ ಮತ್ತು ಅಮೆರಿಕ ನಡುವಿನ ಯುದ್ಧದಿಂದ ಭಾರತೀಯ ಷೇರುಗಳ ತೀವ್ರ ಮಾರಾಟಕ್ಕೆ ಕಾರಣವಾಗಿದೆ. ಫೆಬ್ರವರಿಯಲ್ಲಿ ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಹೊಸ ಪುಟ 2ಕ್ಕೆ



### ಕರಾವಳಿ ಬಂದರು ಬಿಕೋ

**ಕಾರವಾರ:** ಕರ್ನಾಟಕದ ಕರಾವಳಿಯ ವಾಣಿಜ್ಯ ಬಂದರಿಗೆ ಮಧ್ಯಪ್ರಾಚ್ಯದ ಯುದ್ಧದಿಂದ ದೊಡ್ಡ ಹೊಡೆತ ಬಿದ್ದಿದೆ. ಕಾರವಾರದ ವಾಣಿಜ್ಯ ಬಂದರಿನಲ್ಲಿ ಇರಾಕ್ ಹಾಗೂ ಮಧ್ಯಪ್ರಾಚ್ಯ ದೇಶದಿಂದ ಬರುವ ಕಚ್ಚಾ ಡಾಂಬರ್, ಡಿಸೇಲ್, ಪಾಮ್ ಆಯಿಲ್‌ಗಳ ಸರಬರಾಜು ಬಂದ್ ಆಗಿದೆ. ವಾಣಿಜ್ಯ ಬಂದರು ಶಿಪ್ ಪುಟ 4ಕ್ಕೆ

### 100 ಡಾಲರ್ ದಾಟಿದ ಕಚ್ಚಾತೈಲ

**ಟೆಹ್ರಾನ್:** ಅಮೆರಿಕ, ಇಸ್ರೇಲ್ ಮತ್ತು ಇರಾನ್ ಸಂಘರ್ಷದಿಂದ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆಯಲ್ಲಿ ಭಾರೀ ಏರಿಕೆಯಾಗಿದೆ. ಪ್ರತಿ ಬ್ಯಾರಲ್‌ಗೆ ಬೆಲೆ 100 ಡಾಲರ್ ಗಡಿ ದಾಟಿದೆ. ಪುಟ 4ಕ್ಕೆ

# 29 ಕೋಟಿ ಮೌಲ್ಯದ ಚಿನ್ನಾಭರಣ ವಶ

## ಹಲವು ದರೋಡೆ, ಕಳವು ಪ್ರಕರಣ ಪತ್ತೆ: ಆರೋಪಿಗಳ ಬಂಧನ

**ಮೈಸೂರು:** ಮೈಸೂರು ಜಿಲ್ಲಾ ಪೊಲೀಸರು ಎರಡು ತಿಂಗಳಲ್ಲಿ ಕಾರ್ಯಾಚರಣೆ ನಡೆಸಿ ಹಲವು ಪ್ರಕರಣ ಪತ್ತೆ ಮಾಡಿದ್ದಾರೆ. ನಗದು, ಚಿನ್ನಾಭರಣ, ವಾಹನ ಸೇರಿದಂತೆ 29 ಕೋಟಿಗೂ ಹೆಚ್ಚು ಬೆಲೆಯ ವಸ್ತುಗಳನ್ನು ವಶಕ್ಕೆ ಪಡೆದಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು, ಈ ವರ್ಷದ ಜನವರಿಯಿಂದ ಫೆಬ್ರವರಿವರೆಗೆ 01 ಡಕಾಯಿತಿ, 2 ಸುಲಿಗೆ, 7 ಮನೆ ಕಳ್ಳತನ, 5 ವಾಹನ ಕಳ್ಳತನ. 8 ಸಾಮಾನ್ಯ ಕಳ್ಳತನ, 1 ಜಾನುವಾರು ಪ್ರಕರಣ ಪತ್ತೆ ಮಾಡಿ ಒಟ್ಟು ರೂ.29.97.788 ಮೌಲ್ಯದ ಮಾಲುಗಳನ್ನು ವಶಪಡಿಸಿಕೊಳ್ಳಲಾಗಿದೆ. ಒಟ್ಟು 9 ಪ್ರಕರಣಗಳಲ್ಲಿ 279 ಗ್ರಾಂ ಚಿನ್ನದ ಒಡವೆಗಳು ಮತ್ತು 1 ಪ್ರಕರಣದಲ್ಲಿ 30 ಗ್ರಾಂ ಬೆಳ್ಳಿಯ ಕಾಲು ಚೈನು ಸಾಮಾಗ್ರಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಇವುಗಳ ಒಟ್ಟು ಅಂದಾಜು ಮೌಲ್ಯ 10,46,800 ರೂ.ಗಳಾಗಿದೆ ಎಂದು ತಿಳಿಸಿದರು.

ಒಟ್ಟು 5 ಪ್ರಕರಣಗಳಲ್ಲಿ 3,76,989 ಪುಟ 2ಕ್ಕೆ



### ಚಿನ್ನದಂಗಡಿ ದರೋಡೆ ಪತ್ತೆ

ಮೈಸೂರು: ಹುಣಸೂರಿನಲ್ಲಿ ಇತ್ತೀಚೆಗೆ ನಡೆದಿದ್ದ ಚಿನ್ನದ ಅಂಗಡಿ ದರೋಡೆ ಪ್ರಕರಣವನ್ನು ಜಿಲ್ಲಾ ಪೊಲೀಸರು ಪತ್ತೆಹಚ್ಚಿದ್ದಾರೆ ಎಂದು ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕರಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಚಿನ್ನದಂಗಡಿ ದರೋಡೆ ಪ್ರಕರಣದಲ್ಲಿ ಒಟ್ಟು 11 ಆರೋಪಿಗಳು ಭಾಗಿಯಾಗಿದ್ದರು. ಪುಟ 4ಕ್ಕೆ

ಮೊದಲ ಪುಟದಿಂದ

## 30 ಲಕ್ಷ ಕೋಟಿ ನಷ್ಟ

ಸುತ್ತಿನ ಸಂಘರ್ಷ ಪ್ರಾರಂಭವಾದಾಗಿನಿಂದ ಸುಮಾರು 30 ಲಕ್ಷ ಕೋಟಿ ರೂ. ಹೂಡಿಕೆದಾರರ ಸಂಪತ್ತನ್ನು ಅಳಿಸಿಹಾಕಿದೆ.

ಇದು ವಿಶ್ವದ ಮೂರನೇ ಅತಿದೊಡ್ಡ ಕಚ್ಚಾ ತೈಲ ಆಮದುದಾರ ರಾಷ್ಟ್ರ ಭಾರತದ ಮೇಲೂ ಗಂಭೀರ ಪರಿಣಾಮ ಬೀರಿದೆ. ಫೆಬ್ರವರಿ 28ರಂದು ಇರಾನ್ ಯುದ್ಧ ಪ್ರಾರಂಭವಾದಾಗಿನಿಂದ ಭಾರತೀಯ ಷೇರು ಮಾರುಕಟ್ಟೆ ಗಣನೀಯ ಪ್ರಮಾಣದಲ್ಲಿ ಕುಸಿದಿದೆ. ಅಂದು 463 ಲಕ್ಷ ಕೋಟಿಗಳಷ್ಟಿದ್ದ ಮಾರುಕಟ್ಟೆ ಬಂಡವಾಳ ಮಾರ್ಚ್ 6 ಹೊತ್ತಿಗೆ 444 ಲಕ್ಷ ಕೋಟಿಗೆ ಇಳಿಕೆಯಾಗಿತ್ತು. ಅಂದರೆ ಬರೊಬ್ಬರಿ 19 ಲಕ್ಷ ಕೋಟಿ ಕುಸಿದಿತ್ತು. ಬಳಿಕ ಮಾರ್ಚ್ 9ರ ಹೊತ್ತಿಗೆ ಈ ಪ್ರಮಾಣ ಮತ್ತೆ 12 ಲಕ್ಷ ಕೋಟಿಗಳಷ್ಟು ಕುಸಿದು 432 ಲಕ್ಷ ಕೋಟಿಗಳಿಗೆ ಬಂದು ತಲುಪಿದೆ. ಸೋಮವಾರ ಮಾರುಕಟ್ಟೆ ಬಂಡವಾಳೀಕರಣದಲ್ಲಿ ಸುಮಾರು 12.78 ಟ್ರಿಲಿಯನ್ ರೂ. ನಷ್ಟವಾಗಿದೆ. ಇಂದು, ಬಿಎಸ್‌ಇ ಸೆನ್ಸೆಕ್ಸ್ ಬರೊಬ್ಬರಿ ಶೇ.2.47 ಅಂದರೆ 1,946.82 ಅಂಕಗಳಷ್ಟು ಕುಸಿದು 76,972.08 ಮಟ್ಟದಲ್ಲಿ ವಹಿವಾಟು ನಡೆಸುತ್ತಿದೆ. ಇದು ಹಿಂದಿನ ವಹಿವಾಟಿನ 78,918.90 ಅಂಕಗಳಿಂದ 2,299.65 ಅಂಕಗಳು ಅಥವಾ 2.91 ಶೇಕಡ ಕಡಿಮೆಯಾಗಿದೆ. ಅಂತೆಯೇ ಎನ್‌ಎಸ್‌ಇ ನಿಫ್ಟಿ 50 ಕೂಡ ಇಂದು ಬರೊಬ್ಬರಿ 2.45 ಶೇಕಡಾ ಕುಸಿದು 23,851.65 ರ ಮಟ್ಟಕ್ಕೆ ತಲುಪಿದೆ. ಈ ಸ್ಲೈಡ್ ದಲಾಲ್ ಸ್ಟ್ರೀಟ್‌ಗೆ ಒಂದು ವರ್ಷದಲ್ಲಿ ಕಂಡ ಅತ್ಯಂತ ಕಡಿದಾದ ಏರಿಳಿತಗಳಲ್ಲಿ ಒಂದಾಗಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ವಿದೇಶಿ ಹೂಡಿಕೆದಾರರು ಭಾರತೀಯ ಷೇರು ಪೇಟೆಗಳಿಂದ ಸುಮಾರು 21,000 ಕೋಟಿ ರೂ.ಗಳಷ್ಟು ಹೂಡಿಕೆಯನ್ನು ಹಿಂತೆಗೆದುಕೊಂಡಿದ್ದಾರೆ. ಇದು ಫೆಬ್ರವರಿಯಲ್ಲಿ ದಾಖಲಾದ 22,615 ಕೋಟಿ ರೂ.ಗಳಷ್ಟು ಹೂಡಿಕೆಯಾಗಿದ್ದು, ಇದು 17 ತಿಂಗಳಲ್ಲೇ ಅತಿ ಹೆಚ್ಚಿನದಾಗಿದೆ. ಭೌಗೋಳಿಕ ರಾಜಕೀಯ ಏರಿಳಿತದ ನಂತರ, ಎಲ್ಲಾ ಪಟ್ಟಿಮಾಡಿದ ಕಂಪನಿಗಳ ಸಂಯೋಜಿತ ಮಾರುಕಟ್ಟೆ ಬಂಡವಾಳೀಕರಣವು ತೀವ್ರವಾಗಿ ಕುಗ್ಗಿದೆ ಎಂದು ಬಾಂಬೆ ಸ್ಟಾಕ್ ಎಕ್ಸ್‌ಚೇಂಜ್ ನ ದತ್ತಾಂಶಗಳು ತೋರಿಸುತ್ತದೆ. ಮಾರುಕಟ್ಟೆಯ ಪ್ರಕ್ಷುಬ್ಧತೆಯು ಕಚ್ಚಾ ತೈಲ ಬೆಲೆಗಳಲ್ಲಿ ನಾಟಕೀಯ ಏರಿಕೆಯೊಂದಿಗೆ ಹೊಂದಿಕೆಯಾಗುತ್ತದೆ. ಬ್ರೆಂಟ್ ಕಚ್ಚಾ ತೈಲ ಒಂದು ವಾರದಲ್ಲಿ ಶೇ.25ಕ್ಕಿಂತ ಹೆಚ್ಚು ಏರಿಕೆಯಾಗಿ, ಬ್ಯಾರೆಲ್‌ಗೆ 114 ಯುಎಸ್ ಡಾಲರ್ ಅನ್ನು ದಾಟಿದೆ. ದೇಶವು ತನ್ನ ತೈಲ ಅವಶ್ಯಕತೆಗಳಲ್ಲಿ ಸರಿಸುಮಾರು 85ರಷ್ಟನ್ನು ಆಮದು ಮಾಡಿಕೊಳ್ಳುವುದರಿಂದ ಕಚ್ಚಾ ತೈಲ ಬೆಲೆ ಹೆಚ್ಚಳ ಭಾರತಕ್ಕೆ ಹಾನಿಕಾರಕವಾಗಿದೆ. ಇದು ಹಣದುಬ್ಬರ, ಚಾಲ್ತಿ ಖಾತೆ ಕೊರತೆ ಮತ್ತು ಹಣಕಾಸಿನ ಒತ್ತಡಗಳ ಬಗ್ಗೆ ಕಳವಳಗಳನ್ನು ಹುಟ್ಟುಹಾಕುತ್ತದೆ.

## ಬಡಾವಣೆಗೆ 460 ಕೋಟಿ

ಮಾಡಲು ಅಂದಾಜಿಸಲಾಗಿದೆ ಎಂದು ತಿಳಿಸಿದರು.

ನಿಧಿ4ರ ಯೋಜನೆ ಮತ್ತು ಅಭಿವೃದ್ಧಿಯಡಿಯಲ್ಲಿ ವಿನ್ಯಾಸ ಅಭಿವೃದ್ಧಿ ಯೋಜನೆಗಳ ಒಬ್ಬಕೆ ಮತ್ತು ಅನುಷ್ಠಾನಕ್ಕೆ ಸಂಬಂಧಿಸಿದ ಅಧ್ಯಯನ ಮತ್ತು ಸಮೀಕ್ಷೆಗಳನ್ನು ಕೈಗೊಳ್ಳಲು, ಭೂಸ್ವಾಧೀನ ವೆಚ್ಚಗಳು ಮತ್ತು ಅಭಿವೃದ್ಧಿ ವೆಚ್ಚಗಳು ಸೇರಿದಂತೆ ಹೊಸ ಅಭಿವೃದ್ಧಿ ಯೋಜನೆಗಳ ಅನುಷ್ಠಾನ, ಭೂಮಾಲೀಕರೊಂದಿಗೆ ಜಂಟಿಯಾಗಿ ಹೊಸ ವಿನ್ಯಾಸ ಅಭಿವೃದ್ಧಿ ಯೋಜನೆಗಳ ಕಾರ್ಯಗತಗೊಳಿಸುವುದು, ಗುಂಪು ವಸತಿ ಯೋಜನೆಗಳು, ಅಪಾರ್ಟ್ ಮೆಂಟ್ ಗಳು ವಾಣಿಜ್ಯ ಸಂಕೀರ್ಣಗಳು, ಮಾರುಕಟ್ಟೆಗಳು ಮತ್ತು ಸಾರ್ವಜನಿಕ ಆವಶ್ಯಕತೆಗಳ ಅಭಿವೃದ್ಧಿ, ನಗರ ಯೋಜನ ಅನುಷ್ಠಾನ, ಮಾಸ್ಟರ್ ಪ್ಲಾನ್ ನಲ್ಲಿ ತೆರೆದ ಪ್ರದೇಶ ಮತ್ತು ಪಾರ್ಕ್ ಗಳಿಗಾಗಿ ಗೊತ್ತುಪಡಿಸಿದ ಪ್ರದೇಶಗಳ ಸ್ವಾಧೀನ ಮತ್ತು ಅಭಿವೃದ್ಧಿ, ಸ್ಥಳೀಯ ಯೋಜನಾ ಪ್ರದೇಶದ ಮಿತಿಗಳಲ್ಲಿ ನಾಗರೀಕ ಸೌಲಭ್ಯ, ಬೀದಿ ದೀಪಗಳು, ಕಮಾನು, ಇತ್ಯಾದಿಗಳಿಗೆ ಸಂಬಂಧಿಸಿದ ಅಭಿವೃದ್ಧಿ ಕಾರ್ಯಗಳಿಗೆ 28782.45 ಲಕ್ಷ ರೂ.ಗಳನ್ನು ವೆಚ್ಚ ಮಾಡಲು ಅಂದಾಜಿಸಲಾಗಿದೆ. ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಬೆಂಗಳೂರು ನಗರಾಭಿವೃದ್ಧಿ ಇಲಾಖೆ ಜಂಟಿ ಕಾರ್ಯದರ್ಶಿ ಎಚ್.ಕೆ.ಕೃಷ್ಣಮೂರ್ತಿ, ಮೈಸೂರು ವಲಯದ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮುಖ್ಯ ಅಭಿಯಂತರ ಸುಭಾಶ ನಾಯಕವಾಡ, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಚೆಸ್ಕಾಂ) ಮುಖ್ಯ ಅಭಿಯಂತರ ಎ.ಎ.ಸುನೀಲ್ ಕುಮಾರ್, ಪ್ರಾಧಿಕಾರದ ನಗರ ಯೋಜನ ಸದಸ್ಯ ಶಿವರಾಮಯ್ಯ, ಅಭಿಯಂತರ ಸದಸ್ಯ ಸಿ.ಎಸ್.ಮಂಜು, ಪ್ರಾಧಿಕಾರದ ಕಾರ್ಯದರ್ಶಿ ಕೆ.ಜಾನ್ಸನ್ ಬಜೆಟ್ ಸಭೆಯಲ್ಲಿದ್ದರು.

## ನಾನೇ ಪ್ರಾದೇಶಿಕ ಪಕ್ಷ ಕಟ್ಟುವೆ

ರಾಜ್ಯದಲ್ಲಿ ಕಡು ಭ್ರಷ್ಟ ಕುಟುಂಬ ಬಿಜೆ ಪಿಯಲ್ಲಿ ಇರುವವರೆಗೂ ಪಕ್ಷ ಸೇರಲ್ಲ. ವಿಜ ಯೇಂದ್ರ, ಯಡಿಯೂರಪ್ಪ, ರಾಘವೇಂದ್ರ ಅವರ ಕುಟುಂಬ ಇರುವವರೆಗೂ ನಾನು ಪಕ್ಷ ಸೇರಲ್ಲ. ನಾನು ಹೋಗಿ ಕೈ, ಕಾಲು ಹಿಡಿದು ಪಕ್ಷಕ್ಕೆ ಸೇರಿಸಿಕೊಳ್ಳಿ ಅಂತಾ ಕೇಳುವ ಅವಶ್ಯಕತೆ ಇಲ್ಲ. ನಾವು ಸ್ವಾಭಿಮಾನದಿಂದ ಬದುಕಿರುವವರು. ಭ್ರಷ್ಟ ಕುಟುಂಬದ ನೇತೃತ್ವ ನಾವು ಒಪ್ಪಲ್ಲ. ಭ್ರಷ್ಟ ಕುಟುಂಬ ಎಲ್ಲಿವರೆಗೆ ಇರುತ್ತದೆಯೋ ಅಲ್ಲಿವರೆಗೂ ಬಿಜೆಪಿ ಸೇರುವ ಪ್ರಶ್ನೆ ಉದ್ಭವಿಸಲ್ಲ. ನಾನು ಬಿಜೆಪಿಗೆ ಸೇರಿಸಿ ಕೊಳ್ಳಿ ಅಂತಾ ಯಾರ ಬಳಿಯೂ ಹೋಗಲ್ಲ. ನಾನು ಅಷ್ಟರಲ್ಲಿ ಪ್ರಾದೇಶಿಕ ಪಕ್ಷ ಮಾಡ್ತಿನಿ ಕಾದು ಕೂರಲು ಹುಚ್ಚನಲ್ಲ ಎಂದು ತಿಳಿಸಿದರು.

## ಬದುಕುಳಿದ 2 ವರ್ಷದ ಮಗು

ಕೌಟುಂಬಿಕ ಕಲಹದಿಂದಾಗಿ ತಮ್ಮ ಮಗುವನ್ನು ಕತ್ತು ಹಿಸುಕಿ ಕೊಲೆಗೆ ಮುಂದಾಗಿದ್ದಾರೆ. ಈ ವೇಳೆ ಮಗು ಅಸ್ವಸ್ಥಗೊಂಡಿದೆ. ಬಳಿಕ ದಂಪತಿ ನೇಣಿಗೆ ಶರಣಾಗಿದ್ದಾರೆ. ಅಸ್ವಸ್ಥಗೊಂಡಿದ್ದ ಮಗು ಬದುಕುಳಿದಿದೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಕೆ. ಆರ್.ಪೇಟೆ ಟೌನ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಆರ್‌ಎಸ್‌ಎಸ್ ನಿಷೇಧ ಭ್ರಮೆ

ಬೆಂಗಳೂರಿನಲ್ಲಿಂದು ಪತ್ರಕರ್ತರ ಜೊತೆ ಮಾತನಾಡಿ, ಪ್ರಿಯಾಂಕ್ ಖರ್ಗೆ ಆರ್ ಎಸ್ ಎಸ್ ಚಟುವಟಿಕೆಗಳನ್ನು ನಿರ್ಬಂಧಿಸುವ ಬಗ್ಗೆ ಪ್ರಸ್ತಾಪಿಸಿದ್ದನ್ನು ಉಲ್ಲೇಖಿಸಿದ ಅವರು, ಸಂಘಟನೆ ನಿಷೇಧಕ್ಕೂ ಚಟುವಟಿಕೆ ನಿರ್ಬಂಧಕ್ಕೂ ವ್ಯತ್ಯಾಸವಿದೆಯಲ್ಲವೇ ಎಂದು ಪ್ರಶ್ನಿಸಿದರು.

## ಇಲ್ಲಿ ಡಿಕೆಶಿ ಪರ ನಾವಿದ್ದೇವೆ!

ದೆಹಲಿಯಿಂದ ಅವರು ವಾಪಸ್ ಆಗಬೇಕಿತ್ತು. ಇಂದು ಕೂಡಾ ದೆಹಲಿಯಲ್ಲಿರಲು ಅವರು ನಿರ್ಧರಿಸಿದ್ದಾರೆ ಎನ್ನಲಾಗಿದೆ. ಈ ವೇಳೆ, ಹೈಕಮಾಂಡ್ ನಾಯಕರ ಭೇಟಿಯಾಗುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

## ಲೋಕಾಯುಕ್ತ ಬಲೆಗೆ ಬಿದ್ದ ವೈದ್ಯೆ,

6 ಸಾವಿರ ಕೊಡಬೇಕು ಎಂದು ಬೇಡಿಕೆ ಇಟ್ಟಿದ್ದರು. ಸರ್ಕಾರಿ ಆಸ್ಪತ್ರೆಯಲ್ಲಿ ಎಲ್ಲಾ ಚಿಕಿತ್ಸೆ ಉಚಿತವಾಗಿ ಮಾಡುತ್ತಾರಲ್ಲ ಎಂದು ಅವಿನಾಶ್ ಪ್ರಶ್ನಿಸಿದ್ದರು. ಉಚಿತವಾಗಿ ಚಿಕಿತ್ಸೆ ಪಡೆಯಬೇಕಾದರೆ ಬೆಂಗಳೂರಿನ ಮಿಂಟೊ ಆಸ್ಪತ್ರೆಗೆ ಹೋಗಬೇಕು ಎಂದು ಡಾ.ಸವಿತಾ ಹೇಳಿದ್ದರು. ಈ ಬಗ್ಗೆ ಅವಿನಾಶ್ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಜಿಲ್ಲಾ ಆಸ್ಪತ್ರೆಯಲ್ಲಿ ಸವಿತಾ ಸೂಚನೆ ಮೇರೆಗೆ ಮನೋಜ್ ಲಂಚದ ಹಣ ಪಡೆಯುವಾಗ ಅಧಿಕಾರಿಗಳು ದಾಳಿ ನಡೆಸಿ ಬಂಧಿಸಿದ್ದಾರೆ.

## ಮೈಸೂರು ಸಿಲ್ಕ್ ಪ್ಯಾಕ್ಟರಿ ಮುಚ್ಚಲ್ಲ

ಸರ್ಕಾರ ತೀರ್ಮಾನ ಮಾಡಿದೆ. ಆ ಜಾಗ ಈಗ ಮಾರಾಟಕ್ಕಿಲ್ಲ ಎಂದು ತಿಳಿಸಿದರು.

ಕೆಎಸ್‌ಐಸಿ ಯಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗೆ ವೇತನ ಸರಿಯಾಗಿಲ್ಲ. ಉತ್ತಮ ಲಾಭ ಮಾಡಿದೆ, ಅದರಲ್ಲಿ ಶೇ.1ರಷ್ಟು ಲಾಭವನ್ನು ಕೆಲಸ ಮಾಡುವರಿಗೆ ಕೊಡಿ. ಸಂಸ್ಥೆ 99 ಕೋಟಿ ರೂ ಲಾಭ ಮಾಡಿದೆ. ಅದರಲ್ಲಿ ಒಂದು ಕೋಟಿಯನ್ನು ನೌಕರರಿಗೆ ಕೊಡಿ ಎಂದು ಆರ್.ಅಶೋಕ್ ಆಗ್ರಹಿಸಿದರು.

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದಲ್ಲಿ ಕಳೆದ ಮೂರು ವರ್ಷಗಳಿಂದ ಒಟ್ಟು 3,10,667 ಸೀರೆಗಳು ತಯಾರಾಗಿವೆ. ಈ ಪೈಕಿ ಮಾರಾಟವಾಗಿರುವ ಸೀರೆಗಳು 3,09,659. ನಿಗಮ 2022–23ರಲ್ಲಿ 46.75 ಕೋಟಿ, 2023–24 ಸಾಲಿನಲ್ಲಿ 73.40 ಕೋಟಿ ರೂ. ಹಾಗೂ 2024–25ರಲ್ಲಿ 101.15 ಕೋಟಿ ರೂ. ಲಾಭ ಗಳಿಸಿದೆ ಎಂದು ಸಚಿವ ಕೆ.ವೆಂಕಟೇಶ್ ಮಾಹಿತಿ ನೀಡಿದರು.

# ಮಂಡ್ಯ ನಗರಸಭೆ: 123.62 ಕೋಟಿ ಆಯವ್ಯಯ ಮಂಡನೆ

### ಚೊಚ್ಚಲ ಬಜೆಟ್‌ನಲ್ಲೇ 2.51 ಕೋಟಿ ರೂ. ಉಳಿತಾಯ ಮಂಡಿಸಿದ ಆಡಳಿತಾಧಿಕಾರಿ ಡಾ.ಕುಮಾರ



ಮಂಡ್ಯ: ನಗರಸಭೆಯ 2025–226ನೇ ಸಾಲಿನ ಪರಿಷ್ಕೃತ ಹಾಗೂ 2026–27ನೇ ಸಾಲಿನ ಅಂದಾಜು 123.62 ಕೋಟಿ ರೂ. ವೆಚ್ಚದ ಆಯವ್ಯಯವನ್ನು ಆಡಳಿತಾಧಿಕಾರಿಯೂ ಆದ ಜಿಲ್ಲಾಧಿಕಾರಿ ಡಾ. ಕುಮಾರ ಮಂಡಿಸಿದರು.

ನಗರಸಭೆಯ ಧರಣಪ್ಪ ಸಭಾಂಗಣದಲ್ಲಿ ಸೋಮವಾರ ನಡೆದ ಆಯವ್ಯಯ ಮಂಡನೆ ಸಭೆಯಲ್ಲಿ 2026–27ನೇ ಸಾಲಿಗೆ ತಮ್ಮ ಚೊಚ್ಚಲ ಬಜೆಟ್ ಮಂಡಿಸಿದ ಆಡಳಿತಾಧಿಕಾರಿ ಡಾ. ಕುಮಾರ ಅವರು, ಒಟ್ಟು 123,62,52,848 ಕೋಟಿ ರೂ.ಗಳ ಬಜೆಟ್ ಮಂಡಿಸಿ, 2,51,87,848 ರೂ. ಉಳಿತಾಯ ಬಜೆಟ್ ಮಂಡಿಸಿದಾಗ ಶಾಸಕ ಪಿ.ರವಿಕುಮಾರ್‌ಗೌಡ ಸೇರಿದಂತೆ ಅಧಿಕಾರಿಗಳು ಮೇಜು ಕುಟ್ಟಿ ಅಭಿನಂದಿಸಿದರು.

### ಮುಖ ಆದಾಯ ನಿರೀಕ್ಷೆಗಳು

**ತೆರಿಗೆ ಆದಾಯಗಳು**

**ಆಸ್ತಿ ತೆರಿಗೆ, ದಂಡ, ಕರಗಳ ಸಂಗ್ರಹಣ ಶುಲ್ಕದಿಂದ 2090 ಲಕ್ಷ. ತೆರಿಗೆಯೇತರ ಆದಾಯಗಳು: ಅಭಿವೃದ್ಧಿ ಮತ್ತು ಬೆಟರ್‌ಮೆಂಟ್ ಶುಲ್ಕಗಳ ಸಂಗ್ರಹಣೆಯಿಂದ 155 ಲಕ್ಷ, ಘನ ತ್ಯಾಜ್ಯ ವಸ್ತು ನಿರ್ವಹಣೆ ಶುಲ್ಕ ಸಂಗ್ರಹಣೆಯಿಂದ 200 ಲಕ್ಷ, ಮಳಿಗೆಗಳ ಶೇವಣಿ, ಬಾಡಿಗೆ ಮತ್ತು ದಂಡ ವಸೂಲಿ ಸಂಗ್ರಹಣೆಯಿಂದ 129 ಲಕ್ಷ, ಒಳಚರಂಡಿ ಸಂಪರ್ಕ ಮತ್ತು ಬಳಕೆದಾರರ ಶುಲ್ಕ ಸಂಗ್ರಹಣೆಯಿಂದ 46.50 ಲಕ್ಷ, ಉದ್ದಿಮೆ ಪರವಾನಗಿ ಶುಲ್ಕ ಮತ್ತು ಉದ್ದಿಮೆ ಪರವಾನಗಿ ಮೇಲಿನ ದಂಡ ಸಂಗ್ರಹಣೆಯಿಂದ 52 ಲಕ್ಷ, ಅನುಪಯುಕ್ತ ವಸ್ತುಗಳ ಮಾರಾಟದಿಂದ 26 ಲಕ್ಷ, ರಸ್ತೆ ಅಗೆತ ಮತ್ತು ಪುನಃಸ್ಥಾಪನೆ ಶುಲ್ಕ ಸಂಗ್ರಹಣೆಯಿಂದ 52 ಲಕ್ಷ, ಖಾತಾ ಬದಲಾವಣೆ ಶುಲ್ಕಗಳ ಸಂಗ್ರಹಣೆಯಿಂದ 32 ಲಕ್ಷ, ನಗರಸಭೆ ವಸತಿ ಗೃಹಗಳು ಹಾಗೂ ನಗರಸಭೆ ಹಳೇ ಕಚೇರಿ ಕಟ್ಟಡ ಬಾಡಿಗೆಯಿಂದ 25 ಲಕ್ಷ. ಕಟ್ಟಡ ಪರವಾನಗಿ ಶುಲ್ಕ ಸಂಗ್ರಹಣೆಯಿಂದ 34.15 ಲಕ್ಷ, ಇತರೆ ಪ್ರಮಾಣ ಪತ್ರಗಳು, ದಂಡ ಹಾಗೂ ಶುಲ್ಕಗಳಿಂದ 27.20 ಲಕ್ಷ, ರಾಜ್ಯ ಸರ್ಕಾರದಿಂದ ಸಂಗ್ರಹಿಸಲ್ಪಟ್ಟ ಸ್ಟಾ?ಯಂಪ್ ಶುಲ್ಕದ ಸರ್ ಚಾರ್ಜ್ನಿಂದ 15 ಲಕ್ಷ, ಬ್ಯಾಂಕ್ ಖಾತೆಗಳ ಮೇಲಿನ ಬಡ್ಡಿ ಸಂಗ್ರಹಣೆಯಿಂದ 35 ಲಕ್ಷ, ಜಾಹಿರಾತು ಶುಲ್ಕದಿಂದ 5 ಲಕ್ಷ, ಟ್ಯಾಕ್ಸಿ ನಿಲ್ದಾಣ, ಖಾಸಗಿ ಬಸ್ ನಿಲ್ದಾಣ, ನೆಲ ಬಾಡಿಗೆ, ಕಸಾಯಿ ಖಾನೆ ಶುಲ್ಕ ಸಂಗ್ರಹಣೆಯಿಂದ 5.75 ಲಕ್ಷ, ಸಾರ್ವಜನಿಕ ಶೌಚಾಲಯಗಳ ನಿರ್ವಹಣೆ ಶುಲ್ಕದಿಂದ 2.47 ಲಕ್ಷ. ಇದಲ್ಲದೆ, ರಾಜ್ಯ ಸರ್ಕಾರದಿಂದ 49,19,68,000 ಹಾಗೂ ಕೇಂದ್ರ ಸರ್ಕಾರದಿಂದ 18,90,54,000 ರೂ. ನಿರೀಕ್ಷಿತ ಅನುದಾನ ಸೇರಿದೆ ಎಂದರು.**

**ಆಯವ್ಯಯದ ಸಾರಾಂಶ:**

ಮಂಡ್ಯ ನಗರಸಭೆಯ 2025–26ನೇ ಸಾಲಿನ ಆರಂಭಿಕ ಶಿಲ್ಕು 22,83,29,425 ರೂ. ಹಾಗೂ 2026–27ನೇ ಸಾಲಿಗೆ ನಗರಸಭೆಯ ಸ್ವಂತ ಸಂಪನ್ಮೂಲಗಳಿಂದ ನಿರೀಕ್ಷಿತ ಆದಾಯ 29.32, 07,000 ರೂ., ಸರ್ಕಾರಕ್ಕೆ ಪಾವತಿಸಬೇಕಾದ ತೆರಿಗೆಗಳು ಮತ್ತು ಕರಗಳ ಬಾಬ್ತು 10,56,60,000 ರೂ. ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ನಿರೀಕ್ಷಿತ ಅನುದಾನಗಳು 68,10,23,000 ರೂ. ಸೇರಿ ಒಟ್ಟು 123,62,52,848 ರೂ.ಗಳ ಬಜೆಟ್‌ನಲ್ಲಿ 2026–27ನೇ ಸಾಲಿಗೆ ನೌಕರರ ವೇತನ, ನಿರ್ವಹಣಾ ವೆಚ್ಚಗಳು, ಬಂಡವಾಳ ಕಾಮಗಾರಿಗಳು, ಕಲ್ಯಾಣ ಕಾರ್ಯಕ್ರಮಗಳು ಮತ್ತು ಸರ್ಕಾರಕ್ಕೆ ಪಾವತಿಸಬೇಕಾದ ಕರಗಳು ಹಾಗೂ ಶಾಸನಬದ್ಧ ತೆರಿಗೆಗಳು ಸೇರಿದಂತೆ ಒಟ್ಟಾರೆ ಖರ್ಚು ಕಳೆದು 2,51,87,848 ರೂ. ಗಳ ಉಳಿತಾಯ ಬಜೆಟ್ ಮಂಡಿಸಿದರು.

**ಪ್ರಮುಖ ವೆಚ್ಚಗಳು:**

ನಗರಸಭೆ ವ್ಯಾಪ್ತಿಯಲ್ಲಿ ಇತರೆ ಇಲಾಖೆಗಳ ವತಿಯಿಂದ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು, ಮುಖ್ಯಮಂತ್ರಿಗಳ ಮೂಲ ಸೌಕರ್ಯಗಳ ಅಭಿವೃದ್ಧಿ ಅನುದಾನದಲ್ಲಿ 50 ಕೋಟಿ ರೂ. ಮಂಡ್ಯ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾಗಿದ್ದು, ಈ ಹಣದಲ್ಲಿ ನಗರಸಭೆಗೆ 10 ಕೋಟಿ ರೂ.ಗಳನ್ನು ಮಂಡ್ಯ ನಗರದ ಪ್ರಮುಖ ವೃತ್ತಗಳನ್ನು ಆಧುನಿಕ ಮಾದರಿಯಲ್ಲಿ ಅಭಿವೃದ್ಧಿಪಡಿಸಲು, ಮಂಡ್ಯ ನಗರದ ಬೀದಿ ಬದಿ ವ್ಯಾಪಾರಿಗಳಿಗೆ ಮಳಿಗೆಗಳನ್ನು ನಿರ್ಮಾಣ, ರಸ್ತೆಗಳ ಅಭಿವೃದ್ಧಿ ಹಾಗೂ ಕನ್ನಡ ಭವನ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ಎಂದು ವಿವರಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರ ರಸ್ತೆಯಲ್ಲಿ ಫುಟ್‌ಪಾತ್ ವ್ಯಾಪಾರಿಗಳಿಗೆ 50 ಲಕ್ಷ ವೆಚ್ಚದಲ್ಲಿ ವ್ಯಾಪಾರ ಮಳಿಗೆಗಳ ನಿರ್ಮಾಣ. ವಾರ್ಡ್ ನಂ.5ರ ಅಡ್ಡ ರಸ್ತೆಗಳ ಅಭಿವೃದ್ಧಿಗೆ 50 ಲಕ್ಷ, ವಾರ್ಡ್ ನಂ. 8ರ ಅಭಿವೃದ್ಧಿಗೆ 50 ಲಕ್ಷ, ವಾರ್ಡ್ ನಂ.9, 19, 12, ಬೆಸಗರಹಳ್ಳಿ ರಾಮಣ್ಣ ವೃತ್ತದಿಂದ ಎಂಡಿಸಿವರೆಗೆ ರಸ್ತೆ ಅಭಿವೃದ್ಧಿ, ಹೊಸಹಳ್ಳಿ ವೆಂಕಟೇಶ್ವರ್ ದೇವಸ್ಥಾನದಿಂದ ಕಾವೇರಿ ನಗರಕ್ಕೆ ಹೋಗುವ ರಸ್ತೆ ಅಭಿವೃದ್ಧಿ, ವಾರ್ಡ್ ನಂ. 26, 15, 19, 25ರಲ್ಲಿ ರಸ್ತೆಗಳು ಹಾಗೂ ಉದ್ಯಾನಗಳ ಅಭಿವೃದ್ಧಿಗೆ 4.28 ಕೋಟಿ ರೂ.ಗಳು, ಷುಗರ್ ಫ್ಯಾಕ್ಟರ್ ವೃತ್ತದ ಅಭಿವೃದ್ಧಿಗೆ 145.64 ಲಕ್ಷ, ಹೊಸಹಳ್ಳಿ ವೃತ್ತದ ಅಭಿವೃದ್ಧಿಗೆ 147.75 ಲಕ್ಷ, ಹೊಳಲು ವೃತ್ತದ ಅಭಿವೃದ್ಧಿಗೆ 48 ಲಕ್ಷ, ಜಯಚಾಮರಾಜೇಂದ್ರ ಒಡೆಯರ್ ವೃತ್ತದ ಅಭಿವೃದ್ಧಿಗೆ 45 ಲಕ್ಷ ರೂ. ಮೀಸಲಿರಿಸಲಾಗಿದೆ ಎಂದು ವಿವರಿಸಿದರು. ಸಭೆಯಲ್ಲಿ ಶಾಸಕ ಪಿ.ರವಿಕುಮಾರ್‌ಗೌಡ, ಪೌರಾಯುಕ್ತರಾದ ಯು.ಪಿ. ಪಂಪಾಶ್ರೀ, ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಟಿ.ಎನ್.ನರಸಿಂಹಮೂರ್ತಿ ಭಾಗವಹಿಸಿದ್ದರು.

## 12ರಿಂದ ಪ್ರಾಣಾಯಾಮ ಕಾರ್ಯಕ್ರಮ




ಮೈಸೂರು: ಸೈಂಟಿಫಿಕ್ ಪ್ರಾಣಾಯಾಮ ಫೌಂಡೇಶನ್ ವತಿಯಿಂದ ಮಾ.12,13ರಂದು ಎಟಿಎಂಇ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ಪ್ರಾಣಾಯಾಮ ಕುರಿತು ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಫೌಂಡೇಷನ್ ಅಧ್ಯಕ್ಷೆ ಡಾ.ದೇವಕಿ ಮಾದವ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದಿನ ಕಾರ್ಯಕ್ರಮದಲ್ಲಿ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪದ್ಮಶ್ರೀ ಪುರಸ್ಕೃತ ಡಾ.ಹೆಚ್.ಆರ್.ನಾಗೇಂದ್ರ, ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ಸದಾಶಿವಗೌಡ, ಜಿಲ್ಲಾ ಆಯುಷ್ ಅಧಿಕಾರಿ ಡಾ.ರೇಣುಕಾ ದೇವಿ, ಮೊರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆ ಮಾಜಿ ನಿರ್ದೇಶಕ ಡಾ.ಈಶ್ವರ್ ವಿ.ಬಸವರೆಡ್ಡಿ, ಪತಂಜಲಿ ವಿವಿ ಪ್ರಾಧ್ಯಾಪಕ ಡಾ.ವಿನೋದ್ ಕುಮಾರ್ ಕಟಿಯಾರ್ ಆಗಮಿಸಲಿದ್ದಾರೆ. ಎಟಿಎಂಇ ಕಾಲೇಜಿನ ಅಧ್ಯಕ್ಷ ಎಲ್.ಅರುಣ್ ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು. ಮಾ.13 ರಂದು ಮಧ್ಯಾಹ್ನ 3.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾ ಯೋಗ ಯೂನಿವರ್ಸಿಟಿ ಆಫ್ ಭಾರತ್ ಡಾ. ರಾಜಶೇಖರ ರೆಡ್ಡಿ ಪೋರೆಡ್ಡಿ, ಎಸ್ ವಿವೈಎಎಸ್ ಮಾಜಿ ಕುಲಪತಿ ಡಾ.ಸುಬ್ರಮಣ್ಯ ಸ್ವಾಮಿ, ಕೈವಲ್ಯಧಾಮದ ಪ್ರಾಧ್ಯಾಪಕ ಡಾ.ಶರಶ್ಚಂದ್ರ ಭಾಲೇಕರ್, ಕ್ರೀಡಾ ತರಬೇತಿ ವೈದ್ಯ ಡಾ.ಪ್ರಹ್ಲಾದ ರಾವ್ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಡಾ.ಎಲ್.ಬಸವರಾಜು, ಡಾ.ಭಾಗ್ಯಶ್ರೀ, ಸೀತಾ ರಮೇಶ್ ಉಪಸ್ಥಿತರಿದ್ದರು

ಮೊದಲ ಪುಟದಿಂದ

## 29 ಕೋಟಿ ಮೌಲ್ಯದ ಚಿನ್ನಾಭರಣ ವಶ

ರೂಗಳನ್ನು ವಶಪಡಿಸಿಕೊಳ್ಳಲಾಗಿದೆ. ಒಟ್ಟು 06 ಪ್ರಕರಣಗಳಲ್ಲಿ ಮೂರು ಕಾರು, ಒಂದು ವ್ಯಾನ್, 4 ಮೋಟಾರ್ ಬೈಕ್ ಸೇರಿ 8 ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಇವುಗಳ ಒಟ್ಟು ಅಂದಾಜು ಮೌಲ್ಯ 14,33,000 ರೂ. ಎಂದು ಹೇಳಿದರು.

ಒಟ್ಟು 3 ಪ್ರಕರಣಗಳಲ್ಲಿ ಮೋಟಾರ್, ಮೊಬೈಲ್ ಹಾಗೂ ವೈರ್ ವಸ್ತುಗಳನ್ನು ವಶಪಡಿಸಿಕೊಂಡಿದ್ದು ಇವುಗಳ ಒಟ್ಟು ಮೌಲ್ಯ 82,999 ರೂ. ಗಳಾಗಿದೆ. 1 ಪ್ರಕರಣಗಳಲ್ಲಿ 2 ಹಸುಗಳುಗಳನ್ನು ವಶಪಡಿಸಿಕೊಂಡಿದೆ. ಒಟ್ಟು ಅಂದಾಜು ಮೌಲ್ಯ 58,000 ರೂ. ಗಳಾಗಿದೆ ಎಂದು ಎಸ್‌ಪಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದರು.

2026ನೇ ಜನವರಿಯಿಂದ ಇದುವರೆಗೆ ಎನ್.ಡಿ.ಪಿ.ಎಸ್ ಕಾಯ್ದೆ ಅಡಿ 55 ಪ್ರಕರಣಗಳನ್ನು ದಾಖಲಿಸಿದೆ. 1 ಕೆ.ಜಿ. 860 ಗ್ರಾಂ ಗಾಂಜಾ ಮತ್ತು ಎಂ.ಡಿ.ಎಂ.ಎ .010 ಎಂ.ಎಲ್ ಅನ್ನು ವಶಪಡಿಸಿಕೊಳ್ಳಲಾಗಿದ್ದು, ಒಟ್ಟು 56 ಜನರುಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಲಾಟರಿ ಕಾಯ್ದೆ ಅಡಿ ಒಟ್ಟು 14 ಪ್ರಕರಣಗಳನ್ನು ದಾಖಲಿಸಿದೆ. 2,26,707 ರೂ. ಮೊತ್ತದ ಲಾಟರಿ ಟಿಕೇಟ್ ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

## ಬೇಡಿಕೆ ಹೆಚ್ಚಳ

ದಿನಕ್ಕೆ 300ರಿಂದ 400 ಸೀರೆಗಳು ಉತ್ಪಾದನೆ ಆಗುತ್ತಿದೆ. ಎಚ್ಚರಿಕೆಯಿಂದ ಗುಣಮಟ್ಟದ ಸೀರೆಗಳನ್ನು ತಯಾರು ಮಾಡಲಾಗುತ್ತದೆ. ಸೀರೆಗಳ ಉತ್ಪಾದನೆ ಹೆಚ್ಚಿಸಲು ಪ್ರಯತ್ನ ಮಾಡಲಾಗುತ್ತಿದೆ. ಜನ ಸೀರೆ ಖರೀದಿಗೆ ಬೆಳಗ್ಗೆ 3 ಗಂಟೆಯಿಂದ ಕ್ಯೂ ನಿಲ್ತಾರೆ. ಸೆಕೆಂಡ್ಸ್ ಸೇಲ್ ಅಂತ ಮಾರಾಟ ಮಾಡ್ತಾರೆ. ರಿಯಾಯಿತಿ ದರ ಇರುವುದರಿಂದ ಜನ ಕ್ಯೂನಲ್ಲಿ ನಿಂತು ಖರೀದಿಸುತ್ತಾರೆ ಎಂದು ಹೇಳಿದರು.

ರೇಷ್ಮೆ ಸೀರೆ ಡ್ಯಾಮೇಜ್ ಇದ್ದರೆ ಮಹಿಳೆಯರು ಖರೀದಿ ಮಾಡಲ್ಲ. ಹಾಗಾಗಿ ಮಗ್ಗದ ಮೂಲಕ ನಿಧಾನವಾಗಿ ಕ್ವಾಲಿಟಿ ಸೀರೆ ನೇಯ್ಗೆ ಮಾಡಲಾಗ್ತಿದೆ. ಕ್ವಾಲಿಟಿ ಇರುವುದರಿಂದ ಬೇಡಿಕೆ ಜಾಸ್ತಿ ಇದೆ. ಬೇರೆ ರಾಜ್ಯಗಳಿಂದಲೂ ಬೇಡಿಕೆ ಇದೆ. ಹೊರ ರಾಜ್ಯ, ವಿದೇಶಗಳಿಂದಲೂ ಬೇಡಿಕೆ ಇದೆ. ಆನ್‌ಲೈನ್ ಮೂಲಕ ಸೇವೆ ನಿಲ್ಲಿಸುತ್ತೇವೆ. ಸ್ಥಳೀಯವಾಗಿರುವ ಬೇಡಿಕೆಯನ್ನು ಮೊದಲು ನಿವಾರಿಸುತ್ತೇವೆ ಎಂದು ಸಚಿವರು ಭರವಸೆ ನೀಡಿದರು.

# ತಾತಯ್ಯನವರ ಜೀವನ ಅದ್ಭುತ ಪವಾಡ

### ಅಂತರಂಗ ಶುದ್ಧಿಗೆ ಒತ್ತು ಕೊಟ್ಟ ಕೈವಾರ ತಾತಯ್ಯ: ನಗರಸಭಾಧ್ಯಕ್ಷ ಕೆ.ಶೇಷಾದ್ರಿ



ರಾಮನಗರ: ಭಕ್ತಿ, ಭಜನೆ, ಧ್ಯಾನ ಮತ್ತು ಉಪದೇಶಗಳ ಮೂಲಕ ಅಂತರಂಗ ಶುದ್ಧಿಗೆ ಒತ್ತು ಕೊಟ್ಟ ಕೈವಾರ ನಾರೇಯಣ ಅವರು ಸನ್ಯಾಸ ಸ್ವೀಕರಿಸಿ, ಸಮಾಜವನ್ನು ಆಧ್ಯಾತ್ಮಿಕ ಮಾರ್ಗಕ್ಕೆ ಕೊಂಡೊಯ್ಯುವ ಕೆಲಸದಲ್ಲಿ ತೊಡಗಿಸಿಕೊಂಡರು. ನಿಜಕ್ಕೂ ತಾತಯ್ಯ ಅವರ ಜೀವನ ಒಂದು ಅದ್ಭುತ ಪವಾಡ ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಶ್ರೀ ಲಕ್ಷ್ಮಿನಾರಾಯಣಸ್ವಾಮಿ ಕಲ್ಯಾಣ ಮಂಟಪದಲ್ಲಿ ಭಾನುವಾರ ನಡೆದ ಕೈವಾರ ತಾತಯ್ಯನವರ 300ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಸಾರ ಜೀವನದಲ್ಲಿ ಬಳೆಗಾರ ವೃತ್ತಿಯಲ್ಲಿ ನಿರತರಾಗಿದ್ದ ತಾತಯ್ಯ ಅವರು ಯೋಗಿ ಬಾಳಿನಲ್ಲಿ ಕವಿಯಾಗಿ, ಸಮಾಜಮುಖಿ ಚಿಂತಕರಾಗಿ, ಸಾಮಾಜಿಕ ಪಿಡುಗುಗಳನ್ನು ಪರಿಹರಿಸಿದ ಹರಿಕಾರನಾಗಿ ಕೈವಾರ ನಾರೇಯಣಪ್ಪ ಸಾರ್ಥಕತೆಯನ್ನು ಕಂಡಿದ್ದಾರೆ ಎಂದು ಶ್ಲಾಘಿಸಿದರು.

ಮಹಿಳೆಯರು ಸ್ವಾವಲಂಬಿಗಳಾಗಿ ತಮ್ಮ ಕುಟುಂಬದ ನಿರ್ವಹಣೆ ಜೊತೆಗೆ ಸಮಾಜವನ್ನು ಮುನ್ನಡೆಸುವ ಕೆಲಸ ಮಾಡುತ್ತಿದ್ದಾರೆ. ಮಹಿಳೆಯರು ಶಿಕ್ಷಣ ಪಡೆಯಬೇಕೆಂದು ಸಾವಿತ್ರಿ ಬಾಯಿ ಫುಲೆ ಅವರು ಕ್ರಾಂತಿಯನ್ನು ಮಾಡಿದರು. ಇದರಿಂದ ಇತ್ತೀಚೆಗೆ ಮಹಿಳೆಯರು ಶಿಕ್ಷಣ ಪಡೆಯುವ ಮೂಲಕ ಎಲ್ಲ ಸ್ಥರಗಳಲ್ಲಿಯೂ ಮುಂಚೂಣಿಯಲ್ಲಿದ್ದು, ರಾಜಕೀಯವಾಗಿ ಉನ್ನತ ಸ್ಥಾನ ಅಲಂಕರಿಸಿರುವ ಹಲವು ಉದಾಹರಣೆಗಳಿವೆ ಎಂದು ತಿಳಿಸಿದ ಅವರು ಹಾಜರಿದ್ದ ಮಹಿಳೆಯರಿಗೆ ಮಹಿಳಾ ದಿನಾಚರಣೆಯ ಶುಭಾಷಯಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯೆ ಮಂಜುಳಾ ವೆಂಕಟೇಶ್, ಶ್ರೀ ಕೈವಾರ ತಾತಯ್ಯ ಬಲಿಜ ಸಂಘದ ತಾಲೂಕು ಅಧ್ಯಕ್ಷ ಹನುಮಶೆಟ್ಟಿ, ಸಮಾಜದ ಮುಖಂಡರಾದ ಆರ್.ವಿ.ಸುರೇಶ್, ಪದ್ಮನಾಭ, ರಾಮಚಂದ್ರಯ್ಯ, ಮೋಹನ್ ರಾಮ್ ಮನ್ನಾರ್, ಸುಹಾಶ್, ಲಕ್ಷ್ಮಣ್, ಶ್ರೀನಿವಾಸ್, ರಾಮಸ್ವಾಮಿ, ಪುಟ್ಟಣ್ಣ, ಮಂಜು, ನರೇಂದ್ರಬಾಬು, ಸತ್ಯಪ್ಪ, ಸುಧಾರಾಣಿ, ರಮೇಶ್, ಚಂದ್ರಶೇಖರ್, ಹರ್ಷವರ್ಧನ್ ಭಾಗವಹಿಸಿ ದ್ದರು. ಮಾನಸರಾಮು ಸ್ವಾಗತಿಸಿದರು. ಮಹಿಳಾ ಬಲಿಜ ಸಂಘದ ಪದಾಧಿಕಾರಿಗಳು ಪ್ರಾರ್ಥನೆ ಮತ್ತು ಜನಪದ ನೃತ್ಯ ನಡೆಸಿಕೊಟ್ಟರು.

ಸಮಾಜದ ಮುಖಂಡ ಶಿಲ್ಪ ಶ್ರೀ ಪುರಸ್ಕೃತ ಎಂ.ಶರಣ್ ಅವರಿಗೆ ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ ವಿಭಾಗದಲ್ಲಿ ರುಚಿತಾ, ಭಾವನಾ ಮತ್ತು ಪಿಯುಸಿ ವಿಭಾಗದಲ್ಲಿ ಯಶ್ವಂತ್, ಗಿರಿಜೇಶ್. ಆರ್ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನಾ ನಗರದ ಪ್ರಮುಖ ರಸ್ತೆಗಳಲ್ಲಿ ಪೂರ್ಣ ಕುಂಭ ಜನಪದ ಕಲೆಗಳೊಂದಿಗೆ ಕೈವಾರ ತಾತಯ್ಯ ಅವರ ಭಾವಚಿತ್ರವನ್ನು ಮೆರವಣಿಗೆ ಮಾಡಲಾಯಿತು.

### ಮೋಕ್ಷ ಸಾಧನೆಗೆ ದಾರಿ ದೀಪ – ಸಿ.ಎನ್.ಆರ್

**ಸಿಎನ್‌ಆರ್ ವೆಂಕಟೇಶ್ ಮಾತನಾಡಿ ನೀತಿ ವಂತನೆ ಗುರು, ಜ್ಞಾನ ಮತ್ತು ಅರಿವು ಮೋಕ್ಷ ಸಾಧನೆಗೆ ದಾರಿ ದೀಪವಾಗಿದೆ. ಮನುಷ್ಯನಿಗೆ ಬುದ್ದಿವಂತಿಕೆ, ಜ್ಞಾನವೆಲ್ಲವುಗಳಿದ್ದು ಮಾನವ ಜನ್ಮ ಕೊನೆಯ ಜನ್ಮವಾಗಿದೆ. ಹುಟ್ಟಿದ ಪ್ರತಿಯೊಬ್ಬರು ಆ ಚಕ್ರದಿಂದ ಹೊರಬಂದು ತಮ್ಮ ಕೈಲಾದ ಒಳ್ಳೆಯ ಕೆಲಸಗಳನ್ನು ಮಾಡಬೇಕೆಂದು ಕೈವಾರ ತಾತಯ್ಯ ಕಾಲಜ್ಞಾನದಲ್ಲಿ ಹೇಳಿದ್ದರು, ಅವರು ಕಾಲಜ್ಞಾನದಲ್ಲಿ ಹೇಳಿದಂತೆ ಜಗತ್ತಿನಲ್ಲಿ ಘಟನೆಗಳು ನಡೆಯುತ್ತಿವೆ ಎಂದು ಅವರ ವಿಚಾರ–ಧಾರೆಗಳನ್ನು ಸ್ಮರಿಸಿದರು.**

### ಮಹಾನ್ ಚೇತನ – ಕೆ.ಸತೀಷ್

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೆ.ಸತೀಶ್ ಮಾತನಾಡಿ ಸಮಾಜದಲ್ಲಿ ಒಬ್ಬರನ್ನು ಸ್ಮರಿಸುವ ಕೆಲಸ ಮಾಡುತ್ತಿದ್ದೇವೆ ಎಂದರೆ ಅವರ ಕೊಡುಗೆ, ಆದರ್ಶಗಳು ಪ್ರಮುಖ ಕಾರಣವಾಗಿದೆ. ಕೈವಾರ ತಾತಯ್ಯ ವಿಶ್ವಕ್ಕೆ ಮಾದರಿ ಪುರುಷರಾಗಿದ್ದ ಮಹಾನ್ ಚೇತನ, ನಾವು ನೀವೆಲ್ಲರೂ ಅವರ ತತ್ವ ಆದರ್ಶ ಗಳನ್ನು ಪಾಲಿಸೋಣ ಎಂದು ನೆರೆದಿದ್ದವರಲ್ಲಿ ಕರೆ ನೀಡಿದರು.**

### ಆದರ್ಶ ಅಳವಡಿಸಿಕೊಳ್ಳಿ ಮನಜಮ್ಮ

**ಸಮಾಜದ ಹಿರಿಯ ಮಹಿಳೆ ವನಜಮ್ಮ ಮಾತನಾಡಿ ಪ್ರತಿಯೊಬ್ಬರು ಸಹ ಇಂದಿನ ಒತ್ತಡದ ಬದುಕಿನಲ್ಲಿ ಮಾನವೀಯತೆ, ಸಮಯಕ್ಕೆ ಹೆಚ್ಚು ಪ್ರಾಮುಖ್ಯತೆ ನೀಡಬೇಕಿದೆ. ಜಯಂತಿ ಆಚರಣೆ ಜೊತೆಗೆ ಶರಣರು, ಆದರ್ಶ ಪುರುಷರ ಆದರ್ಶಗಳನ್ನು ತಮ್ಮಲ್ಲಿ ಅಳವಡಿಸಿಕೊಂಡು ಸಮಾಜಕ್ಕೆ ಮಾದರಿಯಾಗಿ ಬದುಕಿದಾಗ ಮಾತ್ರ ಜಯಂತಿಗಳಿಗೆ ಅರ್ಥ ಬರುತ್ತದೆ ಎಂದು ಅಭಿಪ್ರಾಯಪಟ್ಟರು.**

# ಸಮಾನ ನ್ಯಾಯ ಕೊಡಿಸುವಂತೆ ಒತ್ತಾಯ



ಚಾಮರಾಜನಗರ, ಒಳ ಮೀಸಲಾತಿ ಬಗ್ಗೆ ಇರುವ ಗೊಂದಲಗಳು, ಸಮಸ್ಯೆಗಳು ಹಾಗೂ ನ್ಯಾಯಾಲಯದ ಅಡೆತಡೆಗಳು ನಿವಾರಣೆಯಾಗುವವರೆವಿಗೆ ಒಳ ಮೀಸಲಾತಿ ರಹಿತ ಹಳೆ ಮೀಸಲಾತಿಯನ್ನು ಜಾರಿಗೊಳಿಸಿ ಹೊರಡಿಸಿರುವ ಆದೇಶವನ್ನು ಮುಂದುವರೆಸಲು ಸದನದಲ್ಲಿ ಧ್ವನಿ ಎತ್ತುವಂತೆ ಒತ್ತಾಯಿಸಿ

ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ, ಗಡಿ ಕಟ್ಟೆ ಯಜಮಾನರುಗಳು ಹಾಗೂ ಆದಿ ಕರ್ನಾಟಕ ಅಭಿವೃದ್ಧಿ ಸಂಘದ ಆಸ್ತಿ ಸಂರಕ್ಷಣಾ ಸಮಿತಿ ವತಿಯಿಂದ ಪ್ರತಿಭಟನೆ ನಡೆಸಿ ಜಿಲ್ಲೆಯ ಶಾಸಕರಾದ ಎಂ.ಎಸ್.ಐ.ಎಲ್ ಅಧ್ಯಕ್ಷರು, ಶಾಸಕ ಸಿ.ಪುಟ್ಟರಂಗಶೆಟ್ಟಿ , ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ, ಹನೂರು ಶಾಸಕ ಮಂಜುನಾಥ್ ,ಗುಂಡ್ಲುಪೇಟೆ ಶಾಸಕ ಎಚ್.ಎಂ.ಗಣೇಶ ಪ್ರಸಾದ್, ಅವರಿಗೆ ಮನವಿ ಸಲ್ಲಿಸಲಾಯಿತು.

ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ನಗರದ ಪ್ರವಾಸಿಮಂದಿರದಲ್ಲಿ, ಶಾಸಕ ಎ.ಆರ್.ಕೃಷ್ಣಮೂರ್ತಿ ಅವರಿಗೆ ನಗರದ ಪಿಡಬ್ಲ್ಯೂಡಿ ಬಡಾವಣೆಯ ನಿವಾಸದಲ್ಲಿ, ಶಾಸಕ ಗಣೇಶಪ್ರಸಾದ್ ಅವರಿಗೆ ಹಾಗೂ ಹನೂರು ಶಾಸಕ ಮಂಜುನಾಥ್ ಅವರಿಗೆ ಹನೂರಿನಲ್ಲಿ ಭೇಟಿ ಮಾಡಿ ಮನವಿ ಸಲ್ಲಿಸಲಾಯಿತು. ಬಲಗೈ ಸಮುದಾಯದ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಅಯ್ಯನಪುರ ಶಿವಕುಮಾರ್, ಗಡಿಯಜಮಾನರಾದ ರವಿಕುಮಾರ್, ಈರಣ್ಣ, ಪಾಪಣ್ಣ, ಸೋಮಣ್ಣ, ಮುದ್ದಮಲ ಯ್ಯ, ಮುಖಂಡರಾದ ಆರ್.ಮಹದೇವು, ನಗರಸಭಾ ಮಾಜಿ ಆರ್.ಪಿ.ನಂಜುಂಡಸ್ವಾಮಿ, ನಲ್ಲೂರು ಮಹದೇವಸ್ವಾಮಿ, ವೀರಭದ್ರ, ನಾಗಯ್ಯ, ಸೋಮೇಶ್, ಸೋಮವಾರಪೇಟೆ ಮಹದೇವಯ್ಯ, ಮಂಗಲ ಕುಮಾರ್, ಜ್ಯೋತಿಗೌಡನಪುರ ಲಿಂಗರಾಜು, ದಡದಹಳ್ಳಿ ಗೋವಿಂದರಾಜು ಸೇರಿದಂತೆ 100 ಹೆಚ್ಚು ಮಂದಿ ಮುಖಂಡರು ಭಾಗವಹಿಸಿದ್ದರು.

# ಹಳೆಯ ಮೀಸಲಾತಿ ಮುಂದುವರಿಸುವಂತೆ ಸಿಎಂಗೆ ಮನವಿ

ಚಾಮರಾಜನಗರ, ಒಳಮೀಸಲಾತಿಯಲ್ಲಿ ಲೋಪದೋಷಗಳನ್ನು ಸರಿಪಡಿಸುವವರೆಗೆ ಹಳೇ ಮೀಸಲಾತಿಯನ್ನು ಮುಂದುವರೆಸುವಂತೆ ಒತ್ತಾಯಿಸಿ ಛಲವಾದಿ ಮಹಾಸಭಾದ ಜಿಲ್ಲಾ ಸಮಿತಿ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಶ್ರೀರೂಪ ಅವರ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಯ 101 ಜಾತಿಗಳ ಶಿಕ್ಷಣ ಮತ್ತು ಉದ್ಯೋಗಕ್ಕೆ ಸಂಬಂಧಿಸಿದಂತೆ ನಿವೃತ್ತ ನ್ಯಾಯಾಮೂರ್ತಿ ನಾಗಮೋಹನ್‌ದಾಸ್ ಅವರು ಸಿದ್ಧಪಡಿಸಿರುವ ಒಳ ಮೀಸಲಾತಿ ಸಮೀಕ್ಷೆ ವರದಿಯು ಅವೈಜ್ಞಾನಿಕತೆಯಿಂದ ಅಸಮರ್ಪಕವಾಗಿ ಸರ್ಕಾರಕ್ಕೆ ಸಲ್ಲಿಸಿರುವುದರಿಂದ ಮೂಲ ನಿವಾಸಿಗಳಾದ ಆದಿದ್ರಾವಿಡ, ಆದಿಕರ್ನಾಟಕ ಮತ್ತು ಆದಿಆಂದ್ರ ಪಂಗಡಗಳಿಗೆ ಸೇರಿದ ಬಲಗೈ 19 ಸಮುದಾಯಗಳಿಗೆ ಸಾಮಾಜಿಕ, ಶೈಕ್ಷಣಿಕ ಮತ್ತು ಔದ್ಯೋಗಿಕವಾಗಿ ಅನ್ಯಾಯವಾಗಿರುತ್ತದೆ. ಈ ನಡುವೆ ಕರ್ನಾಟಕ ಸರ್ಕಾರವು ಮೀಸಲಾತಿ ಪ್ರಮಾಣವನ್ನು ಶೇಕಡಾ 56 ಕ್ಕೆ ಹೆಚ್ಚಿಸಿರುವುದನ್ನು ಪ್ರಶ್ನಿಸಿ, ಘನ ಉಚ್ಚನ್ಯಾ ಯಾಲಯವು ಸಂವಿಧಾನದ ಅನುಚ್ಛೇದದನ್ವಯ ಶೇಕಡಾ 50 ಮೀರಬಾರದೆಂದು ತಡೆಯಾಜ್ಞೆ ನೀಡಲಾಗಿರುತ್ತದೆ.

ಸರ್ಕಾರವು ಒಳ ಮೀಸಲಾತಿ ಮಸೂದೆಗೆ ಘನವೆತ್ತ ರಾಜ್ಯಪಾಲರ ಅಂಕಿತ ಹಾಕುವ ಮುನ್ನವೇ ಹಾಗೂ ವರದಿಯಲ್ಲಿನ ಅಂಶಗಳನ್ನು ಕಾಯ್ದೆಯಾಗಿ ರೂಪಿಸುವ ಮೊದಲೇ ಹಲವು ಇಲಾಖಾಧಿಕಾರಿಗಳು ಸರ್ಕಾರಿ ಸಂಸ್ಥೆಗಳಲ್ಲಿ ಒಳ ಮಿಸಲಾತಿ ಅನ್ವಯ ಪರಿಶಿಷ್ಟ ಜಾತಿಯ ಪ್ರವರ್ಗ–ಎ, ಪ್ರವರ್ಗ–ಬಿ ಮತ್ತು ಪ್ರವರ್ಗ–ಸಿ ಗಳಡಿ ಮೀಸಲಾತಿಯನ್ನು ವರ್ಗೀಕರಿಸಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಪ್ರವರ್ಗ–ಎ (ಮಾದಿಗ ಸಮುದಾಯಕ್ಕೆ) ಅವಕಾಶ ಕಲ್ಪಿಸಿರುವ ಪ್ರಕ್ರಿಯೆಯನ್ನು ಸೃಷ್ಟಿಸಿ ರೋಸ್ಟರ್ ಬಿಂದುವಿನಲ್ಲಿ ಗೊಂದಲ ಸೃಷ್ಟಿಯಾಗಿರುವುದು ಸಂವಿಧಾ ನದ ಮೂಲ ಆಶಯಕ್ಕೆ ಸಾಮಾಜಿಕ ಹಾಗೂ ಔದ್ಯೋಗಿಕವಾಗಿ ಅಪಚಾರವಾಗಿರುವುದು ಕಂಡು ಬಂದಿರುತ್ತದೆ.ಮುಂದುವರೆದು ಒಳಮೀಸಲಾತಿ ಪ್ರಕ್ರಿಯೆಗೆ ಸಂಬಂದಿಸಿದಂತೆ ಕಾನೂನು ರೂಪಿಸಿ ಜಾರಿಯಾಗುವವರೆಗೆ ಸರ್ಕಾರದ ಯಾವುದೇ ಇಲಾಖೆ, ಸಂಸ್ಥೆಗಳು ಹಾಗೂ ಶೈಕ್ಷಣಿಕ ವಿಶ್ವವಿದ್ಯಾಲಯಗಳಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಕ್ರಮವಹಿಸುವುದು ಮತ್ತು ಒಳ ಮೀಸಲಾತಿ ಗೊಂದಲಗಳು ಪರಿಷ್ಕರಿಸುವ ತನಕ ಈ ಹಿಂದಿನಂತೆ ಮೀಸಲಾತಿ ನಿಯಮವನ್ನು ಆಳವಡಿಸಿಕೊಂಡು ಮುಂದುವರಿಸಬೇಕು ಎಂದು ಒತ್ತಾಯಿಸಿದರು. ಮಾಜಿ ಅಧ್ಯಕ್ಷ ಕೆ.ಆರ್.ನಾರಾಯಣ್, ಜಿಲ್ಲಾ ಗೌರವಾಧ್ಯಕ್ಷ ಶಿವನಂಜಯ್ಯ, ಎಲ್.ಮಹದೇವಯ್ಯ, ಶಂಕರ್, ವಾರ್ಡನ ಮಹಾದೇವಸ್ವಾಮಿ, ಹನೂರು ತಾಲೂಕು ಅಧ್ಯಕ್ಷ ಬಸವರಾಜು, ಪ್ರಧಾನ ಕಾರ್ಯದರ್ಶಿ ಶ್ರೀಕಂಠಮೂರ್ತಿ, ಮಾಲಂಗಿ ಮಲ್ಲೇಶ್, ಚಿದಾನಂದ ಮೂರ್ತಿ, ವೆಂಕಟೇಶ್, ಗುಂಡ್ಲುಪೇಟೆ ದೇವರಾಜು, ಅಶೋಕ, ಪರಮೇಶ್, ದಡದಹಳ್ಳಿ ಶಂಕರ್ ಹಾಜರಿದ್ದರು.



# ಸ್ತ್ರೀಯರು ಆರೋಗ್ಯದ ಕಡೆ ಗಮನಹರಿಸಿ

## ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಸಲಹೆ | ಮಹಿಳಾ ದಿನಾಚರಣೆ

ಮಡಿಕೇರಿ:–ಸಮಾಜ ಸ್ವಸ್ಥವಾಗಿಡಲು ಮಹಿಳೆಯರ ಪಾತ್ರ ಅತೀ ಮುಖ್ಯವಾಗಿದೆ. ಆ ನಿಟ್ಟಿನಲ್ಲಿ ಮಹಿಳೆಯರು ಆರೋಗ್ಯದ ಕಡೆ ಹೆಚ್ಚಿನ ಗಮನಹರಿಸಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಅವರು ಸಲಹೆ ಮಾಡಿದ್ದಾರೆ.

ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಕೊಡಗು ಘಟಕ ವತಿಯಿಂದ ನಗರದ ರೆಡ್‌ಬ್ರಿಕ್ಸ್ ಇನ್ ಸತ್ಕಾರ ಸಭಾಂಗಣದಲ್ಲಿ ಸೋಮವಾರ ನಡೆದ ಕ್ಯಾನ್ಸರ್ ತಪಾಸಣಾ ಶಿಬಿರ ಮತ್ತು ಅರಿವು ಕಾರ್ಯಕ್ರಮ ಮತ್ತು ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಮಹಿಳೆಯರು ಕುಟುಂಬ ನಿರ್ವಹಣೆಯಲ್ಲಿ ಹೆಚ್ಚಿನ ಪಾತ್ರ ವಹಿಸುತ್ತಾರೆ. ಆದ್ದರಿಂದ ಒಂದು ಕುಟುಂಬ ಸಮರ್ಪಕವಾಗಿ ನಡೆಯಬೇಕಿದ್ದಲ್ಲಿ ತಾಯಿ ಆರೋಗ್ಯ ಪೂರ್ಣವಾಗಿರಬೇಕು. ಇದರಿಂದ ಮಕ್ಕಳು ಹಾಗೂ ಕುಟುಂಬದ ನಿರ್ವಹಣೆ ಸುಗಮವಾಗಿ ಸಾಗಲು ಸಾಧ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಇಡೀ ಪ್ರಪಂಚಕ್ಕೆ ಜೀವಶಕ್ತಿ, ಆತ್ಮಶಕ್ತಿ ಹೆಣ್ಣು ಎಂದರೆ ತಪ್ಪಾಗಲಾರದು. ಸೃಷ್ಟಿಗೆ ಮೂಲ ಕಾರಣಕರ್ತಳು ಹೆಣ್ಣು ಮೂಲವಾಗಿದ್ದು, ಹೆಣ್ಣು ಮಕ್ಕಳನ್ನು ರಕ್ಷಿಸಬೇಕು ಮತ್ತು ಗೌರವಿಸಬೇಕು ಎಂದು ಆರ್.ಐಶ್ವರ್ಯ ಅವರು ಪ್ರತಿಪಾದಿಸಿದರು.

ಸಾಮಾಜಿಕವಾಗಿ, ಶೈಕ್ಷಣಿಕ ಕ್ಷೇತ್ರ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ಸಹ ಮಹಿಳೆಯರು ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಅಹಲ್ಯಾ ಬಾಯಿ. ಝಾನ್ಸಿರಾಣಿ ಲಕ್ಷ್ಮಿಬಾಯಿ, ರಾಣಿ ಅಬ್ಬಕ್ಕ, ಕಿತ್ತೂರು ರಾಣಿಚೆನ್ನಮ್ಮ, ಕೆಳದಿ ಚೆನ್ನಮ್ಮ, ಬೆಳವಾಡಿ ಮಲ್ಲಮ್ಮ, ಸಂಚಿಹೊನಮ್ಮ ಹೀಗೆ ಹಲವರನ್ನು ಉದಾಹರಣೆಯಾಗಿ ಕಾಣಬಹುದಾಗಿದೆ ಎಂದರು. ಆತ್ಮಸಾಕ್ಷಿ ಕುಸಿಯುತ್ತಿರುವ ಇಂದಿನ ಸಂದರ್ಭದಲ್ಲಿ ಕುಟುಂಬದಲ್ಲಿ ಧೈರ್ಯ ತುಂಬುವವರು ಮಹಿಳೆಯರು ಎಂದರೆ ಅತಿಶಯೋಕ್ತಿಯಲ್ಲ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಪ್ರಸನ್ನ ಕುಮಾರ್ ಮಾತನಾಡಿ ಕೊಡಗು ಜಿಲ್ಲೆಯಲ್ಲಿ ಲಿಂಗಾನುಪಾತ ಉತ್ತಮವಾಗಿದೆ ಎಂದು ಹೇಳಿದರು. ಸಮ ಸಮಾಜ ನಿರ್ಮಿಸುವಲ್ಲಿ ಮಹಿಳೆಯರ ಪಾತ್ರ ಹೆಚ್ಚಿನದ್ದಾಗಿದೆ. ಪ್ರತೀ ಕ್ಷೇತ್ರದಲ್ಲೂ ಸಹ ಮಹಿಳೆಯರು ಇದ್ದು, ಇದರಿಂದ ಸಮಾನತೆ ಕಾಣಬಹುದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ನಗರಸಭೆ ಅಧ್ಯಕ್ಷರಾದ ಪಿ.ಕಲಾವತಿ ಅವರು ಮಾತನಾಡಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಕ್ಯಾನ್ಸರ್ ತಪಾಸಣಾ ಶಿಬಿರ ಹಾಗೂ ಅರಿವು ಕಾರ್ಯಕ್ರಮ ಏರ್ಪಡಿಸಿರುವುದು ವಿಶೇಷವಾಗಿದೆ ಎಂದರು.

ರೆಡ್‌ಕ್ರಾಸ್ ಸಂಸ್ಥೆಯ ಜಿಲ್ಲಾ ಸಭಾಪತಿ ಬಿ.ಕೆ.ರವೀಂದ್ರ ರೈ ಮಾತನಾಡಿ ಕೊಡಗು ಜಿಲ್ಲೆಯಲ್ಲಿ 74 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ರೆಡ್‌ಕ್ರಾಸ್ ಸಂಸ್ಥೆಯು ಪ್ರಾಕೃತಿಕ ವಿಕೋಪ, ಲಾಕ್‌ಡೌನ್ ಸೇರಿದಂತೆ ಅಗತ್ಯ ಇದ್ದಂತಹ ಸಂದರ್ಭದಲ್ಲಿ ತುರ್ತು ಕಾರ್ಯ ಪ್ರವೃತ್ತವಾಗಿ ಜನರ ಸೇವೆ ಮಾಡುತ್ತಾ ಬಂದಿದೆ ಎಂದರು.

ರಾಜ್ಯಪಾಲರಿಂದಲೂ ಸಹ ಅತ್ಯುತ್ತಮ ರೆಡ್‌ಕ್ರಾಸ್ ಸಂಸ್ಥೆ ಎಂಬ ಸೇವಾ ಪ್ರಶಸ್ತಿಯನ್ನು ಪಡೆದಿದ್ದು, ಮಹಿಳಾ ದಿನಾಚರಣೆಯೊಂದಿಗೆ ಕ್ಯಾನ್ಸರ್ ಮಾಹಿತಿ ಹಾಗೂ ಜಾಗೃತಿ ಶಿಬಿರ ಆಯೋಜಿಸುವ ಮೂಲಕ ಮಹಿಳೆಯರಲ್ಲಿ ಆರೋಗ್ಯ ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ರೆಡ್‌ಕ್ರಾಸ್ ಜಿಲ್ಲಾ ಉಪಾಧ್ಯಕ್ಷರಾದ ಅನಿಲ್ ಎಚ್.ಟಿ. ಮಾತನಾಡಿದರು.

ಕಾರ್ಯಕ್ರಮದಲ್ಲಿ 460 ಮಹಿಳೆಯರು ಪಾಲ್ಗೊಂಡಿರುವುದು ರೆಡ್‌ಕ್ರಾಸ್ ಪ್ರಯತ್ನಕ್ಕೆ ಸಂದ ಫಲವಾಗಿದೆ ಎಂದು ತಿಳಿಸಿದರು. ರಾಷ್ಟ್ರ ಪ್ರಶಸ್ತಿ ಪಡೆದ ಕೊಟ್ಟುಕೊತ್ತೀರ ಯಶೋಧ ಪ್ರಕಾಶ್ ಅವರನ್ನು ರೆಡ್‌ಕ್ರಾಸ್ ಸಂಸ್ಥೆ ವತಿಯಿಂದ ಗಣ್ಯರು ಸನ್ಮಾನಿಸಿ ಗೌರವಿಸಿದರು. ಮಡಿಕೇರಿ ತಾಲ್ಲೂಕಿನ 15 ಮಂದಿ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರನ್ನು ಸನ್ಮಾನಿಸಲಾಯಿತು. ವಿವಿಧ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರ ತಂಡದವರು ವೈವಿಧ್ಯಮಯ ಕಾರ್ಯಕ್ರಮ ನೀಡಿ ಮನ ಸೆಳೆದರು. ಇದೇ ಸಂದರ್ಭದಲ್ಲಿ ತಜ್ಞ ವೈದ್ಯರಿಂದ ಆಯೋಜಿತ ಕ್ಯಾನ್ಸರ್ ತಪಾಸಣಾ ಶಿಬಿರದ ಪ್ರಯೋಜನವನ್ನು ಮಹಿಳೆಯರು ಪಡೆದರು. ಮಹಿಳಾ ಸಂಬಂಧಿಸಿದ ವಿಚಾರಗೋಷ್ಠಿಯಲ್ಲಿ ಮಿಲನ ಭರತ್, ಡಾ.ಬಿ.ಕೆ.ರಾಜೇಶ್ವರಿ, ವೈದ್ಯಾಧಿಕಾರಿ ಡಾ.ಸುಮುಖ್, ವಕೀಲರಾದ ಸಿಂಧೂರ ಎನ್.ಸ್ವಾಮಿ, ಯೋಗ ಶಿಕ್ಷಕರಾದ ಶಿಲ್ಪ ರೈ ಅವರು ಮಾತನಾಡಿದರು.



‘ಸೃಷ್ಟಿಯ ಅದ್ಭುತಗಳಲ್ಲಿ ಮಹಿಳೆ ಯರು ವಿಶಿಷ್ಟ ವ್ಯಕ್ತಿತ್ವ ಹೊಂದಿದ್ದಾರೆ. ಸಂಸಾರದ ನೊಗ ಮುಂದೆ ಸಾಗಲು ಮಹಿಳೆಯರು ಹೆಚ್ಚಿನ ಆಸಕ್ತಿ ವಹಿಸುತ್ತಾರೆ. ಇದರಿಂದ ಕುಟುಂಬ ನಿರ್ವಹಣೆ ಉತ್ತಮವಾಗಿರುತ್ತದೆ. ಮಹಿಳೆ ಯರಿಗೆ ತಾಳ್ಮೆ, ಸಹನೆ, ಸಹನಾಭೂತಿ ಹೆಚ್ಚು ಇರುವುದನ್ನು ಕಾಣಬಹುದು. ಮಹಿಳೆಯರು ಒಂದು ರೀತಿ ಆದಿಶಕ್ತಿ ಇದ್ದಂತೆ.

▸▸ ಆರ್.ಐಶ್ವರ್ಯ ಹೆಚ್ಚುವರಿ ಜಿಲ್ಲಾಧಿಕಾರಿ

### ಹೆಣ್ಣು ಸಮಾಜದ ಕಣ್ಣು

ವಿಧಾನ ಪರಿಷತ್ ಮಾಜಿ ಸದಸ್ಯರಾದ ವೀಣಾ ಅಚ್ಚಯ್ಯ ಅವರು ಮಾತನಾಡಿ ಹೆಣ್ಣು ಸಮಾಜದ ಕಣ್ಣು ಆಗಿದ್ದು, ಪುರಾತನ ಕಾಲದಿಂದಲೂ ಹೆಣ್ಣಿಗೆ ತನ್ನದೇ ಆದ ಮಹತ್ತರ ಸ್ಥಾನವಿದೆ ಎಂದರು. ಮಹಿಳೆಯರು ರಾಜಕೀಯ, ಸಾಮಾಜಿಕ, ಕ್ರೀಡೆ, ಸಿನಿಮಾ, ಗಗನಯಾನ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಅಗಾಧ ಸಾಧನೆ ಮಾಡಿದ್ದಾರೆ. ಇದಕ್ಕೆ ಕುಟುಂಬ ಹಾಗೂ ಎಲ್ಲರ ಸಹಕಾರ ಹೆಚ್ಚಿನ ಪ್ರೋತ್ಸಾಹ ನೀಡಿದೆ ಎಂದರು. ಸರ್ಕಾರ ಮಹಿಳೆಯರಿಗೆ ಹಲವು ಕಾರ್ಯಕ್ರಮ ಜಾರಿಗೊಳಿಸಿದೆ. ಆ ನಿಟ್ಟಿನಲ್ಲಿ ಸಮಾಜವನ್ನು ಶಕ್ತಿಯಾಗಿ ನಿರ್ಮಿಸುವಲ್ಲಿ ಮಹಿಳೆಯರು ಮುಂದೆ ಸಾಗಿದ್ದಾರೆ ಎಂದು ವಿವರಿಸಿದರು.

### ಹೆಣ್ಣನ್ನು ಗೌರವಿಸಬೇಕು

ರಾಷ್ಟ್ರ ಪ್ರಶಸ್ತಿ ವಿಜೇತ ಚಿತ್ರ ನಿರ್ಮಾಪಕಿ ಕೊಟ್ಟುಕೊತ್ತೀರ ಯಶೋಧ ಪ್ರಕಾಶ್ ಅವರು ಮಾತನಾಡಿ ಮಹಿಳೆಯರು ಕುಟುಂಬದ ನಿರ್ವಹಣೆಯ ಜೊತೆಗೆ ಕಚೇರಿಯಲ್ಲೂ ಕೆಲಸ ಮಾಡಿಕೊಂಡು ಜೀವನ ನಿಭಾಯಿಸುವುದು ದೊಡ್ಡ ಸಾಧನೆ. ಮಹಿಳೆಯರು ಸಂಬಳ ಇರದೆ ಇಡೀ ಕುಟುಂಬವನ್ನು ಉತ್ತಮವಾಗಿ ಸಾಗಿಸುವಲ್ಲಿ ಪ್ರಯತ್ನಿಸುತ್ತಾರೆ. ಹಾಗಾಗಿ ಹೆಣ್ಣನ್ನು ಗೌರವಿಸಬೇಕು ಎಂದರು. ಮಹಿಳೆಯರು ಕೆಲಸದ ಒತ್ತಡ ಜೊತೆಗೆ ಆರೋಗ್ಯ ಕಡೆಯು ಗಮನಹರಿಸಬೇಕು. ಉತ್ತಮ ಆರೋಗ್ಯ ಇದ್ದಲ್ಲಿ ಇಡೀ ಕುಟುಂಬ ಸಂತಸದಿಂದ ಜೀವನ ಸಾಗಿಸಲು ಸಾಧ್ಯ ಎಂದರು.

# ಆರ್ಥಿಕ ಶಿಸ್ತುಬದ್ಧತೆ ಇದ್ದರೆ ಮಾತ್ರ ಸಹಕಾರ ಸಂಘಗಳು ಬೆಳೆಯುತ್ತದೆ

## ನೂತನ ಶ್ರೀಭಗೀರಥ ಸಹಕಾರ ಸಂಘ ಉದ್ಘಾಟನೆ



ಚಾಮರಾಜನಗರ : ಆರ್ಥಿಕ ಶಿಸ್ತುಬದ್ಧತೆ ಇದ್ದರೆ ಮಾತ್ರ ಸಹಕಾರ ಸಂಘಗಳು ಬೆಳೆಯುತ್ತವೆ ಎಂದು ಜಿಎಸ್‌ಟಿ ಅಪೀಲು ನ್ಯಾಯಾಧೀಕರಣದ ತಾಂತ್ರಿಕ ಸದಸ್ಯ ಡಿ.ಜಗನ್ನಾಥ್ ಸಾಗರ್ ಹೇಳಿದರು.

ನಗರದ ಉಪ್ಪಾರ ಬಡಾವಣೆಯ ಶ್ರೀಮಂಟೇಸ್ವಾಮಿ ದೇವಸ್ಥಾನದ ಮುಂಭಾಗದ ಶ್ರೀ ಉಪ್ಪಾರ ಸಂಘದ ಸಹಯೋಗದಲ್ಲಿ ರಚಿಸಿರುವ ಶ್ರೀಭಗೀರಥ ಸಹಕಾರ ಸಂಘದ ಉದ್ಘಾಟನಾ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಹಣಹೂಡಿಕೆಯ ಜೊತೆಗೆ ಆರ್ಥಿಕವಾಗಿ ಶಿಸ್ತು ಬದ್ಧತೆ ಇದ್ದರೆ ಮಾತ್ರ ಸಹಕಾರ ಸಂಘಗಳು ನಡೆಯುತ್ತವೆ. ಸಂಘಗಳು ಹುಟ್ಟುಕೊಂಡು ತಕ್ಷಣವೇ ನಶಿಸಿ ಹೋಗುತ್ತವೆ ಅಂದರೆ ಯಾವುದೇ ಸಹಕಾರ ಮಾಡಿ ನಮ್ಮದೇಆದಂತಹ ಒಂದು ಬೈಲಾಗಳನ್ನು ಮಾಡಿಕೊಂಡಿರುತ್ತಿವೆ. ಅದರ ಪ್ರಕಾರ ಕೆಲಸ ಮಾಡಬೇಕು. ಎಲ್ಲರ ಸದಸ್ಯರ ಆರ್ಥಿಕ ಮಟ್ಟ ಸುಧಾರಿಸಬೇಕು. ಸಹಕಾರ ಮನೋಭಾವನೆಯಿಂದ ಕೆಲಸ ಮಾಡುವುದು ಇವೆಲ್ಲವೂ ಅತ್ಯಂತ ಉತ್ತಮವಾಗಿವೆ ಎಂದರು.

ಸಾಮಾನ್ಯ ಸಂಘಕ್ಕೂ ಸಹಕಾರ ಸಂಘಕ್ಕೂ ಬಹಳ ವ್ಯತ್ಯಾಸವಿದೆ. ಸಾಮಾನ್ಯ ಸಂಘವನ್ನು ಏಳು, ಎಂಟು ಜನ ಸೇರಿಕೊಂಡು ಸ್ಥಾಪನೆ ಮಾಡಿಕೊಂಡು ಬೇಕಾದ ಚಟುವಟಿಕೆ ಮಾಡಬಹುದು ಆದರೆ ಸಹಕಾರ ಸಂಘ ಎಂದರೆ ಬಹಳ ದೊಡ್ಡ ಜವಾಬ್ದಾರಿ ಇರುತ್ತದೆ. ಹಣಕಾಸು ನಿರ್ವಹಣೆ ಇರುತ್ತದೆ. ಇದಕ್ಕೆ ಹಣಕಾಸು ಮುಖ್ಯವಾಗಿದೆ. ಸದಸ್ಯರ ಆರ್ಥಿಕ ಹಿತಶಕ್ತಿ ಕಾಪಾಡುವ ಚಟುವಟಿಕೆ ನಡೆಯಬೇಕು. ಆರ್ಥಿಕವಾದ ಶಿಸ್ತು ಬದ್ಧತೆ ಇದ್ದರೆ ಮಾತ್ರ ಸಂಘ ಬೆಳೆಯಲು ಸಾಧ್ಯ ಎಂದರು. ಶ್ರೀಭಗೀರಥ ಸಹಕಾರ ಸಂಘವು ಹೆಚ್ಚು ಸದಸ್ಯತ್ವ ಹೊಂದಿ ದೊಡ್ಡಮಟ್ಟದಲ್ಲಿ ಬೆಳೆಯಲಿ ಎಂದು ಆಶಿಸಿದರು. ಸಂಘದ ಅಧ್ಯಕ್ಷ ರಾಚಶೆಟ್ಟಿ, ಅಧ್ಯಕ್ಷತೆ ವಹಿಸಿದ್ದರು. ತಾಲೂಕು ಕೆಡಿಸಿ ಸದಸ್ಯ ಶ್ರೀನಿವಾಸ್, ನಿವೃತ್ತ ಪ್ರಾಂಶುಪಾಲ ಸೋಮಣ್ಣ, ಲೆಕ್ಕಪತ್ರ ಇಲಾಖೆ ಉಪನಿರ್ದೇಶಕ ಮಹೇಂದ್ರ, ಅರಣ್ಯ ಅಧಿಕಾರಿ ಮಹಾಲಕ್ಷ್ಮಿ, ಚೆಸ್ಕಾಂ ಲೆಕ್ಕಾಧಿಕಾರಿ ಎಂ.ಮಹೇಶ್, ಸಹಕಾರ ಇಲಾಖೆ ಪ್ರಥಮ ದರ್ಜೆ ಸಹಾಯಕ ಜನಾರ್ಧನ್, ಜಿಲ್ಲಾ ಉಪ್ಪಾರ ಯುವಕರ ಸಂಘದ ಅಧ್ಯಕ್ಷ ಜಯಕುಮಾರ್, ಆದಿಶಕ್ತಿ ಸೌಂಡ್ಸ್, ಶಾಮಿಯಾನ ಮಾಲೀಕ ಪ್ರದೀಪ್ ಕುಮಾರ್, ಸಂಘದ ಉಪಾಧ್ಯಕ್ಷ ಜಿ.ಗಿರೀಶ್, ಮಾದಶೆಟ್ಟಿ, ಮಾದಯ್ಯ, ಪಿ.ಶಿವಕುಮಾರ್, ಸಿ.ಕೆ.ರಂಗರಾಮ್, ಸಿ.ಜಿ.ರಮೇಶ್, ಎಂ.ರಾಮ್ ಕುಮಾರ್, ಎನ್.ಸೋಮಶೇಖರ ಇತರರು ಹಾಜರಿದ್ದರು.

### ಸಹಕಾರ ಸಂಘದಿಂದಲ್ಲೇ ದೊಡ್ಡದೊಡ್ಡ ರಾಜಕಾರಣಿ

ಕರ್ನಾಟಕ ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಭರಮಣ್ಣ ಉಪ್ಪಾರ್ ಮಾತನಾಡಿ, ಎಲ್ಲರೂ ಸಹಕಾರ ಸಂಘದಿಂದ ರಾಜಕಾರಣ ಆರಂಭಿಸುತ್ತಾರೆ. ಈ ಭಾಗದಲ್ಲಿ ಸಹಕಾರ ಮಹತ್ವ ಗೊತ್ತಿಲ್ಲ. ನಮ್ಮ ಭಾಗದಲ್ಲಿ ಒಂದು ತಾಲೂಕಿನಲ್ಲೇ ಸಾವಿರ ಸಹಕಾರ ಸಂಘಗಳಿವೆ. ಯಾವುದೋ ದೊಡ್ಡ ರಾಜಕಾರಣ ಕುಟುಂಬ ಇದೆ ಅಂದರೆ ಅದು ಸಹಕಾರ ಸಂಘದಿಂದಲ್ಲೇ ಸತೀಶ್ ಜಾರಕಿಹೊಳಿ, ಕತ್ತಿ... ಸೇರಿದಂತೆ ದೊಡ್ಡ ದೊಡ್ಡ ರಾಜಕಾರಣಿಗಳು ಸಹಕಾರ ಸಂಘ ಮಾಡಿ ಅದರಿಂದಲ್ಲೇ... ದೊಡ್ಡ ಮಟ್ಟದಲ್ಲಿ ರಾಜಕಾರಣಿಯಾಗಿ ಬೆಳೆದಿದ್ದಾರೆ ಎಂದರು. ಶ್ರೀಭಗೀರಥ ಸಹಕಾರ ಸಂಘವನ್ನು ಸ್ಥಾಪನೆ ಮಾಡಿ ಬಿಡುವುದು ಅಲ್ಲ ಇದು ಹೆಮ್ಮರವಾಗಿ ಬೆಳೆಯಬೇಕು. ಈ ಸಹಕಾರ ಸಂಘದಿಂದ ನೀವು ದೊಡ್ಡದೊಡ್ಡ ರಾಜಕಾರಣಿಯಾಗಬೇಕು. ಎಂದರು. ಕರ್ನಾಟಕ ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮದಲ್ಲಿ ಸಮುದಾದ ಮಕ್ಕಳ ಶೈಕ್ಷಣಿಕ ಸಾಲಸೌಲಭ್ಯಗಳಿವೆ. ಉನ್ನತ ಶಿಕ್ಷಣ ವ್ಯಾಸಂಗಕ್ಕೆ ಸಾಲಸೌಭ್ಯ ಸಿಗುತ್ತದೆ. ವಿದೇಶ ಶಿಕ್ಷಣಕ್ಕೂ ಬಡ್ಡಿ ರಹಿತ ಸಾಲಸೌಲಭ್ಯ ದೊರೆಯುತ್ತದೆ. ಫಾರಿನ್‌ನಲ್ಲಿ ವಿದ್ಯಾಭ್ಯಾಸಕ್ಕೆ 5 ಕೋಟಿ ಅನುದಾನ ಇದೆ. ಒಂದು. ನಾನು ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಸಮುದಾಯದವರಲ್ಲಿ ಹೇಳಿದ ಮೇಲೆ 12 ಅರ್ಜಿ ಬಂದಿದೆ. ಅದರಲ್ಲಿ 11 ವಿದ್ಯಾರ್ಥಿಗಳಿಗೆ ಸಾಲ ಕೊಡಲು ತೀರ್ಮಾನ ಮಾಡಿದ್ದೇವೆ ಎಂದರು.

# ನಗರ ಭಾಗದಲ್ಲಿಯೂ ಅಕ್ಕಪಡೆ



ಮೈಸೂರು: ಮಹಿಳೆಯರು, ಮಕ್ಕಳ ರಕ್ಷಣೆಗೆಂದೇ ವಿಶೇಷವಾಗಿ ರಚನೆ ಮಾಡಲಾಗಿರುವ ಅಕ್ಕಪಡೆ ಕಾರ್ಯಾಚರಣೆ ವಾಹನಕ್ಕೆ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಸೋಮವಾರ ಚಾಲನೆ ನೀಡಿದರು.

ಹಸಿರು ಬಾವುಟ ಬೀಸುವ ಮೂಲಕ ಚಾಲನೆ ನೀಡಿದರಲ್ಲದೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆವತಿಯಿಂದ ನೂತನ ವಾಹನವನ್ನು ಪೊಲೀಸ್ ಇಲಾಖೆಗೆ ಹಸ್ತಾಂತರ ಮಾಡಲಾಯಿತು. ಡಿಸಿಪಿ ಸುಂದರ್ ರಾಜ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಬಸವರಾಜು, ದೇವರಾಜ ವಿಭಾಗ ಎಸಿಪಿ ರಾಜೇಂದ್ರ, ಮೌಂಟೆಡ್ ವಿಭಾಗದ ಎಸಿಪಿ ಮಾರುತಿ, ಸಿಎಆರ್ ಎಸಿಪಿ ಸಿದ್ದನಗೌಡ ಪಾಟೀಲ್, ಲಷ್ಕರ್ ಪೊಲೀಸ್ ಇನ್ಸ್‌ಪೆಕ್ಟರ್ ಲೋಲಾಕ್ಷಿ, ಆಲನಹಳ್ಳಿ ಪೊಲೀಸ್ ಇನ್ಸ್‌ಪೆಕ್ಟರ್ ಸುವರ್ಣ ಸೇರಿ ಅನೇಕರು ಉಪಸ್ಥಿತರಿದ್ದರು.

# ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ಒತ್ತು



ಚಾಮರಾಜನಗರ, ಚಾಮರಾಜನಗರ ವಿಧಾನ ಸಭಾ ಕ್ಷೇತ್ರದಲ್ಲಿ ಶಿಕ್ಷಣ, ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ಎಂಎಸ್‌ಐಎಲ್ ಅಧ್ಯಕ್ಷರು, ಶಾಸಕ ಸಿ.ಪುಟ್ಟರಂಗಶೆಟ್ಟಿ ಹೇಳಿದರು.

ತಾಲೂಕಿನ ಕೋಡಿಮೋಳೆ ಬಸವನಪುರ ಗ್ರಾಮದಲ್ಲಿ ನೂತನ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿ, ಗ್ರಾಮದಲ್ಲಿ ನೂತನ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ 20 ಲಕ್ಷರೂ. ಮಂಜೂರಾಗಿದ್ದು, ಸುಸಜ್ಜಿತವಾದ ಅಂಗನವಾಡಿ ಕೇಂದ್ರ ನಿರ್ಮಾಣವಾಗಲಿದೆ. ಮುಂದಿನ ದಿನಗಳಲ್ಲಿ ಗ್ರಾಮದ ಅಭಿವೃದ್ಧಿಗೆ ಅನುದಾನ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಸವನಪುರ ರಾಜಶೇಖರ್, ಕೋಡಿಮೋಳೆ ಗೋವಿಂದ ಶೆಟ್ಟಿ, ಗ್ರಾ.ಪಂ.ಮಾಜಿ ಸದಸ್ಯರಾದ ಚಿನ್ನಸ್ವಾಮಿ, ಮಂಜು, ಪುಟ್ಟಮಾದಯ್ಯ, ಮುಖಂಡರಾದ ಲಿಂಗರಾಜು, ಜೆಇ ಕವಿತ, ಗುತ್ತಿಗೆದಾರ ಅಭಿಷೇಕ್, ಪಣ್ಯದಹುಂಡಿ ದೇವರಾಜು, ನಟರಾಜು, ಯಜಮಾನರಾದ ಪುಟ್ಟಮಾದಯ್ಯ,ಸಣ್ಣಯ್ಯ, ಮಹದೇವಸ್ವಾಮಿ, ರಾಜು, ದೇವರಗುಡ್ಡಸಿದ್ದಯ್ಯ, ಇತರರು ಹಾಜರಿದ್ದರು.

# ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಡಿಸಿ ಪರಿಶೀಲನೆ

ಚಾಮರಾಜನಗರ, ಜಿಲ್ಲಾಧಿಕಾರಿ ಶ್ರೀರೂಪ ಅವರು ಹನೂರು ತಾಲೂಕಿನ ಟಿಬೆಟಿಯನ್ ಸೆಟಲ್ಮೆಂಟ್ ಪ್ರದೇಶಕ್ಕೆ ಇಂದು ಭೇಟಿ ನೀಡಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ಸ್ಥಳಗಳನ್ನು ಪರಿಶೀಲಿಸಿದರು.

ಟಿಬೇಟಿಯನ್ ಸೆಟಲ್ ಮೆಂಟ್ ಪ್ರದೇಶಕ್ಕೆ ಭೇಟಿ ನೀಡಿ ಅಲ್ಲಿನ ಮುಖಂಡರ ಜೊತೆ ಜಿಲ್ಲಾಧಿಕಾರಿಯವರು ಸಮಾಲೋಚಿಸಿದರು. ಪ್ರವಾಸೋದ್ಯಮ ಅಭಿವೃದ್ದಿ ಸಂಬಂಧ ಸ್ಥಳಗಳನ್ನು ವೀಕ್ಷಣೆ ಮಾಡಿದರು. ಪ್ರವಾಸೋದ್ಯಮವನ್ನು ಇನ್ನಷ್ಟು ಅಭಿವೃದ್ಧಿಪಡಿಸುವ ದಿಸೆಯಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಜಿಲ್ಲಾಧಿಕಾರಿಯವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಬಳಿಕ ಗಡಿಭಾಗದ ಅರ್ಧನಾರಿಪುರ ಚೆಕ್ ಪೋಸ್ಟ್‌ಗೆ ಭೇಟಿ ನೀಡಿ ಅಲ್ಲಿ ನಡೆಯುತ್ತಿರುವ ತಪಾಸಣ ಕಾರ್ಯವೈಖರಿಯನ್ನು ಪರಿಶೀಲಿಸಿದರು.ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಸಲಹೆ–ಸೂಚನೆಗಳನ್ನು ನೀಡಿದರು.



# ಪ.ಪಂಗಡಕ್ಕೆ ಅನ್ಯಾಯ: ನಾಯಕ ಸಮಾಜ ಖಂಡನೆ

ಮೈಸೂರು: ಬಿಜೆಪಿ ಸರ್ಕಾರ ಪ.ಜಾತಿಗೆ 17%, ಪ.ಪಂ 7% ಮೀಸಲಾತಿ ನೀಡಿದ್ದರೂ, ಪ್ರಸ್ತುತ ನೇಮಕಾತಿ ಮಾಡುವಾಗ 3% ಆಧಾರದಲ್ಲಿ ನೇಮಿಸಿಕೊಳ್ಳುವಂತೆ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿರುವುದನ್ನು ಮೈಸೂರು–ಚಾಮರಾಜನಗರ ಜಿಲ್ಲೆ ನಾಯಕರ ಕ್ಷೇಮಾಭಿವೃದ್ಧಿ ಸಂಘ ತೀವ್ರವಾಗಿ ಖಂಡಿಸಿದೆ.

ನಗರದ ಕಲ್ಯಾಣ ಮಂಟಪವೊಂದರಲ್ಲಿ ಎರಡು ಜಿಲ್ಲೆಯ ನಾಯಕ ಜನಾಂಗದ ಪ್ರಮುಖರು ಸಭೆ ಸೇರಿ ಹಲವು ವಿಷಯಗಳ ಬಗ್ಗೆ ಚರ್ಚಿಸಿದ್ದಾರೆ.


ಪರಿವಾರ, ತಳವಾರ ಪದಗಳ ಗೊಂದಲ, ಜಾತಿ ಪ್ರಮಾಣ ಪತ್ರ ನೀಡುವಲ್ಲಿ ಗೊಂದಲ ಸೇರಿದಂತೆ ಹಿಂದನಿಂದಲೂ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ. ಪುಣ್ಯಾನಂದ ಪುರಿ ಸ್ವಾಮೀಜಿ ಹೋರಾಟದ ಫಲದಿಂದ ನಮ್ಮ ಜನಾಂಗಕ್ಕೆ ಶೇ.7 ಮೀಸಲಾತಿ ದೊರೆತಿದೆ. ಆದರೆ, ರಾಜ್ಯ ಸರ್ಕಾರ ಅದನ್ನು ಖಡಿತಗೊಳಿಸಿ ಸರ್ಕಾರಿ ಉದ್ಯೋಗಗಳಲ್ಲಿ ನೇಮಕಾತಿ ಮಾಡಿಕೊಳ್ಳಲು ಮುಂದಾಗಿ ನಮಗೆ ಅನ್ಯಾಯ ಮಾಡುತ್ತಿದೆ ಎಂದು ಕಿಡಿಕಾರಿದರು.



**ಪ್ರತಿಭಟನೆಗೆ ನಿರ್ಧಾರ**

ಅನ್ಯಾಯ ಖಂಡಿಸಿ ಮುಂದಿನ ದಿನಗಳಲ್ಲಿ ಪ್ರತ್ಯೇಕವಾಗಿ ಎರಡೂ ಜಿಲ್ಲೆಗಳಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು. ನಮ್ಮ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯ ಖಂಡಿಸಿ ಮುಂದಿನ ದಿನಗಳಲ್ಲಿ ತಾಲೂಕು ಕೇಂದ್ರಗಳಲ್ಲಿ ಹಂತ, ಹಂತವಾಗಿ ಪ್ರತಿಭಟನೆ ತೀವ್ರಗೊಳಿಸಿ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಒಕ್ಕೊರಲ ತೀರ್ಮಾನಕ್ಕೆ ಬರಲಾಯಿತು.

ಮೈಸೂರು–ಚಾಮರಾಜನಗರ ಜಿಲ್ಲಾಧ್ಯಕ್ಷ ಎಂ.ರಾಮಚಂದ್ರು, ಮಹರ್ಷಿ ವಾಲ್ಮೀಕಿ ಗುರುಕುಲ ಸೇವಾ ಟ್ರಸ್ಟ್ ಅಧ್ಯಕ್ಷ ಶ್ರೀನಿವಾಸ್ ನಾಯಕ, ಬಿಜೆಪಿ ಮುಖಂಡ ಅಪ್ಪಣ್ಣ, ಹಿನಕಲ್ ಕೆಂಪ ನಾಯಕ, ಹುಣಸೂರು ಅಣ್ಣಯ್ಯ ನಾಯ್ಕ, ಉದ್ಬೂರು ಮಹದೇವಸ್ವಾಮಿ, ರಾಚಪ್ಪ, ಕಡಕೋಳ ಕುಮಾರ ಸ್ವಾಮಿ, ತಲಕಾಡು ಮಂಜುನಾಥ್, ಲೋಕೇಶ್, ಪ್ರಭಾಕರ್ ಹುಣಸೂರು, ಎಚ್.ಡಿ.ಕೋಟೆಯ ಪುರದ ಕಟ್ಟೆ ಬಸವರಾಜು, ಸಾಲಿಗ್ರಾಮ ಸಿ.ಸಿ.ಮಹದೇವು, ನಿವೃತ್ತ ಡಿಸಿಪಿ ಶಿವಣ್ಣ, ತಾಯೂರು ಪ್ರಕಾಶ್, ಮಧುವನ ಚಂದ್ರು, ಚಾಮುಂಡಿ ಬೆಟ್ಟ ಶ್ರೀಧರ್, ರಾಜು ಮಾರ್ಕೆಟ್, ಕ್ಯಾತಮಾರನಹಳ್ಳಿ ವೆಂಕಟೇಶ, ಟೆನಿಸ್ ಗೋಪಿ, ಜಗದೀಶ್ ಮೂರ್ತಿ, ಮಹದೇವ ನಾಯಕ ಗಣೇಶ್ ಮೂರ್ತಿ, ಪ್ರಭುಸ್ವಾಮಿ, ಮುನಿಯಪ್ಪ, ಚಂದ್ರ ನಾಯಕ, ಮೈಸೂರು ನಗರ ಮತ್ತು ಮೈಸೂರು ತಾಲೂಕು, ಹುಣಸೂರು, ಕೆ.ಆರ್.ನಗರ, ಪಿರಿಯಾಪಟ್ಟಣ, ನಂಜನಗೂಡು, ನರಸೀಪುರ, ಸಾಲಿಗ್ರಾಮದ ನಾಯಕ ಸಮುದಾಯದ ಅನೇಕರಿದ್ದರು.



# ಡೀನ್ ವರ್ಗಾವಣೆಗೆ ಒತ್ತಾಯಿಸಿ ಕರವೇಯಿಂದ ಡಿಸಿಗೆ ಮನವಿ



ಚಾಮರಾಜನಗರ, ಸರ್ಕಾರಿ ಜಿಲ್ಲಾ ಆಸ್ಪತ್ರೆ ಅವ್ಯವಸ್ಥೆ ಗೆ ಕಾರಣರಾಗಿರುವ ಡೀನ್ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಟಿ.ಎ.ನಾರಾಯಣಗೌಡರ ಬಣದ ಜಿಲ್ಲಾ ಘಟಕದ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಶ್ರೀರೂಪ ಅವರಿಗೆ ಮನವಿ ಸಲ್ಲಿಸಲಾಯಿತು.

ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಯೊಬ್ಬರು ಸರ್ಕಾರ ನಿಗದಪಡಿಸಿದ ಅವಧಿಯಲ್ಲಿ ಖಾಸಗಿಯಾಗಿ ಇನ್ನೊಂದು ಸಂಸ್ಥೆಯ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿರುವುದು ಮತ್ತು ಸ್ವಂತವಾಗಿ ಕ್ಲಿನಿಕ್ ತೆರೆದು ವೈದ್ಯಕೀಯ ಸೇವೆ ನೀಡುತ್ತಿರುವುದರ ಬಗ್ಗೆ ಡೀನ್ ಅವರಿಗೆ ವೈದ್ಯಾಧಿಕಾರಿಯನ್ನು ತನಿಖೆಗೆ ಒಳಪಡಿಸಿ ವರ್ಗಾವಣೆ ಮಾಡಲು ಒಂದು ಮನವಿ ಪತ್ರ ಕೊಟ್ಟಿದ್ದೆವು. ಆದರೆ ಇಲ್ಲಿಯವರೆವಿಗೂ ಡೀನ್ ಕ್ರಮಕೈಗೊಂಡಿಲ್ಲ. ನಿನ್ನೆ ಸಂಜೆ ನಡೆದ ಒಂದು ಅಪಘಾತದಲ್ಲಿ ತುರ್ತು ವೈದ್ಯಕೀಯ ಸೇವೆ ಬೇಕಾಗಿದ್ದು, ಸರ್ಕಾರಿ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿರುತ್ತಾರೆ, ರಾತ್ರಿ ಪಾಳಿಯ ವೈದ್ಯರು ಸ್ಕ್ಯಾನ್ ಮಾಡಲು ತಿಳಿಸಿರುತ್ತಾರೆ. ಆದರೆ ಈ ಕ್ಷಣದ ವರೆವಿಗೂ ಸ್ಕ್ಯಾನ್ ಮಾಡಿರುವುದಿಲ್ಲ, ಈ ವಿಷಯವನ್ನು ಡೀನ್ ರವರಿಗೆ ಫೋನ್ ಮೂಲಕ ಹೇಳಿದರೆ ಉಡಾಫೆ ಉತ್ತರ ನೀಡುತ್ತಾರೆ. ಒಂದು ಸ್ಕ್ಯಾನಿಂಗ್ ಮಷಿನ್ ಮತ್ತು ಎಕ್ಸ್ ರೇ ಮಷಿನ್ ಕೆಟ್ಟಿದೆ. ಇನ್ನೊಂದು ಸತತವಾಗಿ 24 ಘಂಟೆ ಕೆಲಸಮಾಡಿರುವುದರಿಂದ ಸರ್ವೀಸ್ ಮಾಡುತಿದ್ದಾರೆ ಕಾಯಿರಿ ಎಂದು ಹೇಳುತ್ತಾರೆ, ಆದರೆ ಸ್ಕ್ಯಾನ್ ಮಾಡುವ ಸಿಬ್ಬಂದಿಯು ಕೂಡ ಕಾಯುವುದಾದರೆ ಕಾಯಿರಿ ಇಲ್ಲವಾದರೆ ಹೊರಗಡೆ ಹೋಗಿ ಸ್ಕ್ಯಾನ್ ಮಾಡಿಸಿ ಎಂದು ಹೇಳುತ್ತಾರೆ, ಇನ್ನೊಂದು ಮುಖ್ಯವಾದ ವಿಚಾರವೇನೆಂದರೆ ಯಡಪುರದ ಜಿಲ್ಲಾ ಆಸ್ಪತ್ರೆಯಿಂದ ಪಟ್ಟಣದ ಹಳೆ ಆಸ್ಪತ್ರೆಗೆ ಸ್ಕ್ಯಾನಿಂಗ್ ಗೆ ಕರೆತರಲು ಆಂಬುಲೆನ್ಸ್ ವ್ಯವಸ್ಥೆ ಮಾಡಿಕೊಡಲು ಕೇಳಿದರೆ ಗಾಡಿಯಲ್ಲಿ ಪೆಟ್ರೋಲ್ ಇಲ್ಲವೆಂದು ಹೇಳುತ್ತಾರೆ.

ಬೇಕಾದರೆ ನಿಮ್ಮ ವಾಹನದಲ್ಲೇ ಕರೆದುಕೊಂಡು ಹೋಗಿ ಎಂದು ಹೇಳುತ್ತಾ, ನಿಮ್ಮ ಜೊತೆ ಮಾತನಾಡುವಷ್ಟು ಸಮಯ ನನ್ನಲ್ಲಿ ಇಲ್ಲವೆಂದು ಹೇಳಿ ಫೋನ್ ಕಟ್ ಮಾಡುತ್ತಾರೆ. ಹೀಗಾದರೆ ತುರ್ತು ಸಂದರ್ಭದಲ್ಲಿ ರೋಗಿಗಳಿಗೆ ಅಗತ್ಯ ಚಿಕಿತ್ಸೆಗಳು ಸಿಗುವುದಾದರೂ ಹೇಗೆ ಆದ್ದರಿಂದ ಗಡಿ ಜಿಲ್ಲೆಯಾದ ಚಾಮರಾಜನಗರಕ್ಕೆ ಇಂತಹ ಒಬ್ಬ ಬೇಜವಾಬ್ದಾರಿಯುತ ಡೀನ್ ಅವರು ಬೇಡವಾಗಿದ್ದು, ಈ ಕೂಡಲೇ ಡೀನ್ ಅವರನ್ನು ವರ್ಗವಣೆ ಮಾಡಬೇಕು ಇಲ್ಲದಿದ್ದರೆ ಉಗ್ರ

ಹೋರಾಟವನ್ನು ಮಾಡಬೇಕಾಗುತ್ತದೆ, ಎಂದು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ವೇದಿಕೆಯ ಜಿಲ್ಲಾಧ್ಯಕ್ಷ ಹೆಚ್.ಎನ್. ಮಂಜೇಶ್ ಕೇಳಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರೂಪೇಶ್, ಸಂಘಟನಾ ಕಾರ್ಯದರ್ಶಿ ಹೇಮಂತ್, ಸಂಚಾಲಕ ರಾಘವೇಂದ್ರ, ತಾಲೂಕು ಅಧ್ಯಕ್ಷ ಸಂತೋಷ, ಉಪಾಧ್ಯಕ್ಷ ಸುಂದರ್, ಬೂದಂಬಳ್ಳಿ ಕುಮಾರ್, ಇರ್ಫಾನ್, ಕೂಡ್ಲೂರು ಮಹೇಶ್ ಇತರರು ಹಾಜರಿದ್ದರು.

# ಕಾನೂನು ಉಲ್ಲಂಘಿಸಿ ವಿದ್ಯುತ್ ಸಂಪರ್ಕ ತನಿಖೆಗೆ ಆಗ್ರಹ




ಮೈಸೂರು: ವಿದ್ಯುಚ್ಛಕ್ತಿ ಇಲಾಖೆ ಸುಪ್ರೀಂಕೋರ್ಟ್ ಆದೇಶ ಉಲ್ಲಂಘಿಸಿ 4, 5, 7ಅಂತಸ್ತು ಎಚ್‌ಟಿಎಂಎಸ್ ವಾಣಿಜ್ಯದ ಎಲ್ಲ ತರಹದ ಕಟ್ಟಡಗಳಿಗೂ ವಿದ್ಯುತ್ ಸಂಪರ್ಕ ಸೇವೆ ಒದಗಿಸುತ್ತಿದ್ದು, ಇದರಲ್ಲಿ ಚೆಸ್ಕಾಂ ಅಧಿಕಾರಿಗಳು ಭಾಗಿಯಾಗಿರುವ ಸಂಶಯವಿದ್ದು, ಈ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ನವ ಕರ್ನಾಟಕ ರೈತ ಸಂಗದ ಅಧ್ಯಕ್ಷ ಎಚ್.ವಿ.ಸುಬ್ಬೇಗೌಡ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಎಂಎಸ್ ಕಟ್ಟಗಳು ನಗರದ ಹೃದಯ ಭಾಗದಲ್ಲಿ ಇದ್ದರೂ ಸಹಾ ಕೆಲವೇ ಗುತ್ತಿಗೆದಾರರಿಗೆ, ಅದರಲ್ಲಿಯೂ ಓರ್ವರಿಗೆ ಒಸಿ, ಸಿಸಿ ಇಲ್ಲದಿದ್ದರೂ, ಆರ್‌ಎಂಯುಗಳನ್ನು ಅಳವಡಿಸದಿದ್ದರೂ ಸಹಾ ವಿದ್ಯುತ್ ಸಂಪರ್ಕ ನೀಡುತ್ತಿದ್ದಾರೆ. ಇತರೆ ಗುತ್ತಿಗೆದಾರರು ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ ಎಂದು ದೂರಿದರು. ಓರ್ವರು ತಿಳಿಸುವ ಕಟ್ಟಡಗಳಿಗೆ ಮಾತ್ರ ವಿದ್ಯುತ್ ಸಂಪರ್ಕ ನೀಡುತ್ತಿರುವಂತೆಯೇ ಇತರೆ ಗುತ್ತಿಗೆದಾರರಿಗೆ ಸಹಾ ನೀಡಬಹುದಾಗಿತ್ತು. ಆದರೆ ಈ ರೀತಿ ಮಾಡುತ್ತಿಲ್ಲ. ಇದು ಬೇಸರದ ಸಂಗತಿಯಾಗಿದೆ. ಈ ವ್ಯಕ್ತಿ ಇತರರಿಗೂ ಅನುಕೂಲ ಕಲ್ಪಿಸುವ ಬದಲು ಮಾ. 11 ರಂದು ಪ್ರತಿಭಟನೆ ಮಾಡಹೊರಟಿರುವುದು ಸರಿಯಲ್ಲ. ಚೆಸ್ಕಾಂ ಅಧಿಕಾರಿಗಳು ಈ ರೀತಿ ವಿದ್ಯುತ್ ನೀಡುವುದು ಸರಿ ಎನ್ನುವುದಾದರೆ, ಇದು ಸುಪ್ರೀಂಕೋರ್ಟ್ ತೀರ್ಪು ಉಲ್ಲಂಘನೆ ಮಾಡಿದಂತಲ್ಲವೆ, ಇದೇ ರೀತಿ ಇತರರಿಗೂ ನೀಡಬಹುದಾಗಿತ್ತಲ್ಲವೇ ಎಂದು ಪ್ರಶ್ನಿಸಿದರು. ನಾಗರಾಜ್, ಶ್ರೀನಿವಾಸ್, ಆಲೂರು ನಟೇಶ್, ನಾಗರಾಜು ಇನ್ನಿತರರು ಇದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಬಜೆಟ್ ವಿರುದ್ಧ ಪ್ರತಿಭಟನೆ



ಚಾಮರಾಜನಗರ, ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಚಾಮರಾಜನಗರ ತಾಲೂಕು, ಜಿಲ್ಲೆಯನ್ನು ಕಡೆಗಣಿಸಿದೆ ಎಂದು ಆರೋಪಿಸಿ ಕರ್ನಾಟಕ ಸೇನಾಪಡೆಯು ನಗರದಲ್ಲಿ ಖಾಲಿಡಬ್ಬ ಹಿಡಿದು ಪ್ರದರ್ಶಿಸುವ ಮೂಲಕ ರಾಜ್ಯ ಬಜೆಟ್ ಖಾಲಿಡಬ್ಬ ಎಂದು ವಿನೂತನ ಪ್ರತಿಭಟನೆ ನಡೆಸಿದರು.

ನಗರದ ಭುವನೇಶ್ವರಿ ವೃತ್ತದಲ್ಲಿ ಹಾದುಹೋಗಿರುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಜಮಾಯಿಸಿದ ಪ್ರತಿಭಟನಾನಿರತರು ರಾಜ್ಯ ಬಜೆಟ್‌ನಿಂದ ಚಾಮರಾಜನಗರಕ್ಕೆ ಶೂನ್ಯ. ಖಾಲಿ ಡಬ್ಬ ಬಜೆಟ್, ಚಾಮರಾಜನಗರ ಕಡೆಗಣಿಸಿರುವ ಬಜೆಟ್ ಗೆ ಧಿಕ್ಕಾರ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಕರ್ನಾಟಕ ಸೇನಾ ಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ರಾಜ್ಯ ಸರ್ಕಾರದ ಈ ಸಾಲಿನಲ್ಲಿ ಬಜೆಟ್‌ನಲ್ಲಿ ಚಾಮರಾಜನಗರ ತಾಲೂಕು, ಜಿಲ್ಲೆಯನ್ನು ಸಂಪೂರ್ಣ ಕಡೆಗಣಿಸಿ ಜಿಲ್ಲೆಗೆ ಅನ್ಯಾಯ ಮಾಡಿದೆ ಎಂದರು

ರಾಜ್ಯ ಬಜೆಟ್‌ನಲ್ಲಿ ಚಾಮರಾಜನಗರ ಜಿಲ್ಲೆ ಕಡೆಗಣಿಸಿರುವುದನ್ನು ಖಂಡಿಸಿ ರಾಜ್ಯ ಸರ್ಕಾರದ ಬಜೆಟ್ ಖಾಲಿಡಬ್ಬ ಎಂದು ಆರೋಪಿಸಿ ಇಂದು ಖಾಲಿಡಬ್ಬ ಪ್ರದರ್ಶಿಸುವ ಮೂಲಕ ವಿನೂತನ ಪ್ರತಿಭಟನೆ ಮಾಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಾತೆತ್ತಿದ್ದರೆ' ಚಾಮರಾಜನಗರ ಎನ್ನುತ್ತಾರೆ. ಆದರೆ ಚಾಮರಾಜನಗರಕ್ಕೆ ಯಾವುದೇ ಅನುದಾನವನ್ನು ಬಜೆಟ್‌ನಲ್ಲಿ ಕೊಟ್ಟಿಲ್ಲ. ಜಿಲ್ಲೆಗೆ ಸೊನ್ನೆ ಕೊಟ್ಟಿದ್ದಾರೆ. ಎಂದು ಆರೋಪಿಸಿದರು.

ನೀರಿನ ಹೆಸರಿನಲ್ಲಿ ರಾಜಕೀಯ ಮಾಡಿ ಅಧಿಕಾರಕ್ಕೆ ಬಂದ ನೀವು ರಾಜ್ಯಕ್ಕೆ ದ್ರೋಹ ಮಾಡಿದ್ದೀರಿ ಎಂದು ಕಿಡಿಕಾರಿದರು. ಪ್ರತಿಭಟನೆಯಲ್ಲಿ ಶಾ.ಮುರಳಿ, ಪಣ್ಯದಹುಂಡಿ ರಾಜು, ನಿಜಧ್ವನಿ ಗೋವಿಂದ, ಮುತ್ತು, ಮುತ್ತಿಗೆ ಗೋವಿಂದರಾಜ, ರಾಚಪ್ಪ, ತಾಲಕಾಡು ಮಹದೇವು, ಅಮಚವಾಡಿ ರಾಜು, ಆಟೋ ಲಿಂಗರಾಜು, ಬಸವರಾಜು, ತಾಂಡವಮೂರ್ತಿ, ಜಗದೀಶ್, ಚಂದ್ರು ಹಾಜರಿದ್ದರು.

# ಮಹಿಳಾ ದಿನ ಆಚರಣೆ



ಗುಂಡ್ಲುಪೇಟೆ: ಪ್ರಸ್ತುತ ನಾಗರಿಕ ಸಮಾಜದಲ್ಲಿ ಮಹಿಳೆಯರ ಪಾತ್ರ ಬಹು ದೊಡ್ಡದಾಗಿದೆ ಎಂದು ಪುರಸಭೆ ಮುಖ್ಯ ಅಧಿಕಾರಿ ಸರವಣ. ಎಸ್ ಹೇಳಿದರು

ಪಟ್ಟಣದ ಪುರಸಭೆಯ ಅವರಣದಲ್ಲಿ ಮಹಿಳಾ ದಿನಾಚರಣೆ ಪ್ರಯುಕ್ತ ಪುರಸಭೆ ಸಿಬ್ಬಂದಿ ಮತ್ತು ಪೌರಕಾರ್ಮಿಕರ ಮಹಿಳಾ ಸಿಬ್ಬಂದಿಯೊಂದಿಗೆ ಮಹಿಳಾ ದಿನಾಚರಣೆಯನ್ನು ಸರಳವಾಗಿ ಆಚರಿಸಲಾಯಿತು. ನಂತರ ಮಾತನಾಡಿದ ಅವರು, ಲಿಂಗ ತಾರತಮ್ಯ ಮುಕ್ತ ಸಮಾಜ ನಿರ್ಮಾಣವಾಗಬೇಕು. ಪ್ರತಿಯೊಂದು ಕ್ಷೇತ್ರದಲ್ಲೂ ಅವರು ಭಾಗವಹಿಸುವ ಮುಖಾಂತರ ಅವರ ಕೊಡೆಗೆಯನ್ನು ಸಹ ನೀಡುತ್ತಿದ್ದಾರೆ. ಆದರಿಂದ ಮಹಿಳೆಯರು ತಾಯಿಯಾಗಿ ಮಗಳಾಗಿ ತಂಗಿಯಾಗಿ ಅಕ್ಕ ಮತ್ತು ಹೆಂಡತಿಯಾಗಿ ನಮ್ಮ ಜೀವನದಲ್ಲಿ ಬಹುದೊಡ್ಡ ಪಾಲು. ಆದ್ದರಿಂದ ಪ್ರತಿಯೊಬ್ಬ ಪುರುಷರು ಮಹಿಳೆಯರನ್ನು ಗೌರವಿಸಬೇಕು ಮತ್ತು ಅವರ ಹಕ್ಕುಗಳನ್ನು ಜಾರಿ ಮಾಡಿ ಅವರ ಸ್ವಾತಂತ್ರ್ಯಕ್ಕೆ ಸಹಾಯ ಮಾಡಬೇಕು ಎಂದು ತಿಳಿಸಿದರು.

ಲಿಂಗ ಸಮಾನತೆಯ ಸಂದೇಶವನ್ನು ನೀಡಲು ಪ್ರತಿವರ್ಷ ಈ ದಿನವನ್ನು ವಿಶೇಷವಾಗಿ ಆಚರಣೆ ಮಾಡುತ್ತಾರೆ. ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ವಿಶ್ವದಾದ್ಯಂತ ಅನೇಕ ದೇಶಗಳಲ್ಲಿ ಮಾರ್ಚ 8 ರಂದು ಆಚರಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಮಹಿಳಾ ಪೌರಕಾರ್ಮಿಕರಾದ ಮುತ್ತಮ್ಮ. ಬಣ್ಣಮ್ಮ.ಉಷಾ, ಶಾಂತಿ, ಭಾಗ್ಯ, ನೀಲಾವತಿ, ಚಾಮುಂಡಿ, ಸಂಗೀತ ಹಾಗೂ ಪುರಸಭೆ ಮಹಿಳಾ ಸಿಬ್ಬಂದಿಯವರಾದ ಅನುಪಮ. ಸವಿತಾ. ಸುಷ್ಮಾ, ಹೇಮಾ, ತ್ರಿವೇಣಿ, ಕಮಿಟಿ ಮೊಬೈಲೈಜರ್ಸ್ ಗಳಾದ ನಂದಿನಿ, ಚಂದನ, ಉಷಾ ಹಾಗೂ ಭವಾನಿ ಮಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸ್ತ್ರೀಯರ ಮೇಲಿನ ದೌರ್ಜನ್ಯ ನಿಲ್ಲಲಿ

## ಸಿಡಿಪಿಒ ದೀಪಾ ಹೇಳಿಕೆ । ರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ



ಎಚ್.ಡಿ.ಕೋಟೆ: ಅಡುಗೆ ಮನೆಯಿಂದ ಅಂತರಿಕ್ಷದ ವರೆಗೂ ಮಹಿಳೆಯರು ಸಾಧನೆ ಮಾಡಿದ್ದಾರೆ. ಎಲ್ಲ ಕ್ಷೇತ್ರಗಳಲ್ಲಿಯೂ ಪುರುಷರಿಗೆ ಸಮಾನವಾಗಿ ಕೆಲಸ ಮಾಡುತ್ತಿದ್ದೇವೆ ಆದರೂ ಶೋಷಣೆ, ದೌರ್ಜನ್ಯಕ್ಕೆ ಒಳಗಾಗುತ್ತಿರುವ ವಿಷಯಗಳನ್ನು ಕೇಳಿದಾಗ ಮನಸ್ಸು ಜರ್ಜರಿತವಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನಾಧಿಕಾರಿ ದೀಪಾ ಬೇಸರ ವ್ಯಕ್ತಪಡಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ, ಸ್ತ್ರೀ ಶಕ್ತಿ ಬ್ಲಾಕ್ ಸೊಸೈಟಿ ಸಹಯೋಗದೊಂದಿಗೆ ಮಹಿಳೆಯರಿಗೆ ಪಂಚ ಗ್ಯಾರಂಟಿ ಯೋಜನೆಗಳ ಅರಿವು ಮತ್ತು ಅಂತರ ರಾಷ್ಟ್ರಿಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶೋಷಣೆಯ ವಿರುದ್ಧ ಮಹಿಳೆಯರು ಹೋರಾಡಲು ಎಚ್ಚರಗೊಳ್ಳುವಂತೆ ಮಾಡುವುದಕ್ಕೆ ನಾವು ಇಲಾಖೆಯಿಂದ ಮಹಿಳಾ ದಿನಾಚರಣೆ ಹಾಗೂ ಸರ್ಕಾರದ ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಕಾರ್ಯಕ್ರಮ ಮಾಡುತ್ತೇವೆ. ಈ ದೇಶದ ಪ್ರಥಮ ಪ್ರಜೆ ಮಹಿಳೆ, ಭಾರತದ ಪ್ರಥಮ ಪ್ರಧಾನಮಂತ್ರಿ ಮಹಿಳೆ. ಮಹಿಳೆಯರು ಕುಟುಂಬದ ಆರೋಗ್ಯ, ಶಿಕ್ಷಣ, ಮನೆಯ ಜವಾಬ್ದಾರಿ, ಕುಟುಂಬಕ್ಕೆ ಸಹಾಯ ಮಾಡುವುದು ಒಂದು ರೀತಿಯ ಸಾಧನೆಯೇ ಎಂದು ತಿಳಿಸಿದರು.

ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಚಾಮರಾಜು ಮಾತನಾಡಿ, ದೇವರನ್ನು ನಾವು ನೋಡಿಲ್ಲ. ಆದರೆ, ಮಹಿಳೆಯರೇ ದೇವರು ಮತ್ತು ಸೃಷ್ಟಿಕರ್ತರು. ನನ್ನನ್ನು ಹೆತ್ತು, ಒತ್ತು, ಸಾಕಿ, ಸಲುಹಿ, ಓದಿಸಿ ವೇದಿಕೆಯಲ್ಲಿ ನಿಂತು ಮಾತನಾಡವಂತೆ ಮಾಡಿದ್ದು ನನ್ನ ತಾಯಿ. ಇಂದಿನ ಕಾಲಘಟದಲ್ಲಿ ಮಹಿಳೆಯರು ಪಂಚಾಯಿತಿಯಿಂದ ಹಿಡಿದು ಪಾರ್ಲಿಮೆಂಟ್ ವರೆಗೂ ಅಧಿಕಾರ ಚಲಾಯಿಸಲು, ಮೀಸಲಾತಿ ನೀಡಿದ ಡಾ.ಬಿ.ಆರ್. ಅಂಬೇಡ್ಕರ್ ಅವರು ಎಂದು ಹೇಳಿದರು.

ಸರ್ಕಾರದ ಆದೇಶದ ಮೇರೆಗೆ ಗ್ಯಾರಂಟಿ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ತಿಳಿಸಲು ಶಾಸಕ ಅನಿಲ್ ಚಿಕ್ಕಮಾದು ಕಟ್ಟುನಿಟ್ಟಿನ ಆದೇಶ ಮಾಡಿದ್ದು, ಅದರಂತೆ ಗ್ಯಾರಂಟಿ ಅನುಷ್ಠಾನ ಸಮಿತಿಯಲ್ಲಿ ಪ್ರತಿ ತಾಲೂಕಿನಲ್ಲಿ 15 ಜನ ಸದಸ್ಯರು ಇದ್ದೇವೆ. ತಮ್ಮ ಗ್ರಾಮಗಳಲ್ಲಿ ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆಯಲು ತೊಂದರೆ ಅನುಭವಿಸವವರು ಕಂಡುಬಂದರೆ ಅಂಗನವಾಡಿ ಕಾರ್ಯಕರ್ತೆಯರು, ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘದವರು ನಮ್ಮ ಗಮನಕ್ಕೆ ಅಥವಾ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಮಾಹಿತಿ ನೀಡಿದರು. ಚಲುವ ರಾಜು, ನೇತ್ರಾವತಿ, ಜಯಂತಿ, ಜಶೀಲಾ,ಶೈಲಾ ಸುಧಾಮಣಿ ಮಾತನಾಡಿದರು. ತೋಟಗಾರಿಕೆ ನಿರ್ದೇಶಕಿ ನೇತ್ರಾವತಿ, ತಾಲೂಕು ಯೋಜನಾಧಿಕಾರಿ ಜಯಂತಿ, ಕಾಂಗ್ರೆಸ್ ಮಹಿಳಾ ಘಟಕದ ಸರಗೂರು ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಚಲುವರಾಜು, ಮಹಿಳಾ ಆಪ್ತ ಸಮಾಲೋಚಕಿ ಜಶೀಲಾ, ಪೋಷಣ್ ಅಭಿಯಾನ ಯೋಜನೆಯ ತಾಲೂಕು ಸಂಯೋಜಕ ರಾಕೇಶ್, ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ ಜಿಲ್ಲಾ ಸಹಾಯಕ ಅವಿನಾಶ್, ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ಶೈಲಾ ಸುಧಾಮಣಿ, ಬ್ಲಾಕ್ ಸೊಸೈಟಿ ನಿರ್ದೇಶಕಿ (ಪ್ರತಿಭೆ ಸಂಸ್ಥೆ) ಕೆ. ಎಂ.ಸುಶೀಲಾ, ಸಚಿನ್ ಬಿ.ಬಿ ಸೇರಿದಂತೆ ನೂರಾರು ಮಹಿಳೆಯರು ಇದ್ದರು.



ಸಮಾಜ ದಲ್ಲಿ ಮಹಿಳೆ ಯರು ಬದುಕುವುದಕ್ಕೆ ಮೂಲ ಕಾರಣ ಅಂಬೇಡ್ಕರ್. ಮೀಸಲಾತಿ ಸೌಲಭ್ಯ ಇಲ್ಲದಿದ್ದರೆ ಮಹಿಳೆಯರು ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡುವುದಕ್ಕೆ ಅವಕಾಶ ಸಿಗುತ್ತಿರಲಿಲ್ಲ.

–ಸೌಮ್ಯ ಮಂಜುನಾಥ್, ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ

ಸರ್ಕಾರದ ಯೋಜನೆಗಳಾದ ಗೃಹಲಕ್ಷ್ಮಿ, ಗೃಹ ಜ್ಯೋತಿ, ಅನ್ನಭಾಗ್ಯ, ಶಕ್ತಿ ಯೋಜನೆ, ಯುವನಿಧಿ ಯಿಂದ ನನ್ನ ಕುಟುಂಬಕ್ಕೆ ತುಂಬಾ ಅನುಕೂಲವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಶಾಸಕ ಅನಿಲ್ ಚಿಕ್ಕಮಾದು ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿದ್ದಾರೆ. ಸರ್ಕಾರಿ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುತ್ತಿರುವ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಧನ್ಯವಾದಗಳು.

–ಸವಿತಾ ಮುಸ್ಕೆರೆ ಗ್ರಾಮ

# ಮಹಿಳಾ ದಿನಾಚರಣೆ

ಮೈಸೂರು: ವೀರ ಸಾವರ್ಕರ್ ಯುವಬಳಗದವತಿಯಿಂದ ನಗರದ ಖಾಸಗಿ ಹೋಟೆಲ್ ನಲ್ಲಿ ಸೋಮವಾರ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮೈಸೂರಿನ ರಾಜಮಾತೆ ಕೆಂಪನಂಜಮಣಿರನ್ನು ಸ್ಮರಿಸಲಾಯಿತು.

ಭಾರತ್ ಮಾತೆ ಹಾಗೂ ಕೆಂಪನಂಜಮಣಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.ಬಿಜೆಪಿ ಮುಖಂಡರಾದ ಪರಮೇಶ್ ಗೌಡ, ಮುಖಂಡರಾದ ಬಾಲಣ್ಣ, ಸಂದೇಶ್, ಉಮೇಶ್, ಪ್ರಮೋದ್ ಗೌಡ, ಭೈರಪ್ಪ, ಗಂಗಣ್ಣ, ಗೋಪಾಲ್, ಅಶ್ವಥ್, ಜಯಪ್ಪ, ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ವಸಂತ ಮನೀಶ್, ಚಂದ್ರಕಲಾ, ರಶ್ಮಿ, ಮಧು, ಗೀತಾ, ಒಕ್ಕಲಿಗರ ಸಂಘದ ನಿರ್ದೇಶಕ ಚೇತನ್ ಗೌಡ , ಪ್ರವೀಣ್, ರಾಜಣ್ಣ, ವಿಜಯ್, ಅಭಿ, ವಿನೋದ, ವಿ.ಎಸ್.ಕಿರಣ್, ಬ್ರಹ್ಮಚಾರ್, ಯೋಗೇಶ್, ನಾಗೇಶ್, ಅನೋಜ್, ರಾಜೇಶ್, ಮೋಹಿತ್ ಗೌಡ, ಚೇತನ್ ಗೌಡ ಟಿಎಸ್ ಅರುಣ್, ವಿನೋದ್ ಅರಸ್ ಸೇರಿ ಇನ್ನಿತರರು ಹಾಜರಿದ್ದರು.



# ಅಂಬೇಡ್ಕರ್ ಭವನಗಳು ಅಧ್ಯಯನ ಕೇಂದ್ರಗಳಾಗಲಿ




ಚಾಮರಾಜನಗರ: ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನಗಳನ್ನು ಅಧ್ಯಯನ ಕೇಂದ್ರಗಳಾಗಿ ಮಾಡಲೇಬೇಕು ಎಂದು ಮೈಸೂರಿನ ಉರಿಲಿಂಗಿಪೆದ್ದಿ ಮಠದ ಜ್ಞಾನಪ್ರಕಾಶ್ ಸ್ವಾಮೀಜಿ ಹೇಳಿದರು.

ತಾಲೂಕಿನ ಭೋಗಾಪುರ ಗ್ರಾಮದಲ್ಲಿ ನಡೆದ ವಿಶ್ವಜ್ಞಾನಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಸೌಲಭ್ಯ ವಂಚಿತ ಬಡಾವಣೆಯ ಪೌರಕಾರ್ಮಿಕ ಮಗನೂ ಆರ್‌ಬಿಐ ಬ್ಯಾಂಕ್ ಮುಖ್ಯ ಅಧಿಕಾರಿಯಾಗಿದ್ದಾರೆ. ಯುಕೆ ಗೆ ಹೋಗುತ್ತಾರೆ ಅಂದ ಮೇಲೆ ಭೋಗಾಪುರ ಗ್ರಾಮದಲ್ಲಿ ಎಲ್ಲ ಸೌಲಭ್ಯಗಳಿರುವ ಮಕ್ಕಳ ಎಷ್ಟರ ಮಟ್ಟಿಗೆ ಓದಬೇಕು. ಅದಕ್ಕಾಗಿ ದಯ ಮಾಡಿ ಅಂಬೇಡ್ಕರ್ ಸಮುದಾಯ ಭವನವನ್ನು ಅಧ್ಯಯನ ಕೇಂದ್ರ ವನ್ನಾಗಿ ಮಾಡಲೇಬೇಕು. ಇಲ್ಲದಿದ್ದರೆ ನಿಮ್ಮ ಗ್ರಾಮಕ್ಕೆ ಯಾವುದೇ ಕಾರಣಕ್ಕೂ ಬರಲ್ಲ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು ಸರ್ವರಿಗೂ ಮೀಸಲಾತಿ ಕೊಟ್ಟಿದ್ದಾರೆ. ಅವರ ಮೀಸಲಾತಿ ಋಣದಿಂದ ನಾನು ನಾಲ್ಕು ಬಾರಿ ಶಾಸಕರಾಗಲು ಸಾಧ್ಯವಾಯಿತು. ಅವರ ತತ್ತ್ವ, ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ಹೋಗೋಣ ಎಂದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಅಂಬೇಡ್ಕರ್ ಸಮುದಾಯ ಭವನಗಳು ಜೂಜುಕೇಂದ್ರಗಳಾಗುತ್ತಿದೆ. ಅದರ ಬಗ್ಗೆ ಗ್ರಾಮದ ಯಜಮಾನರುಗಳು ಗಮನಹರಿಸಬೇಕು ಸಮುದಾಯದ ಒಳ್ಳೆಯ ಉದ್ದೇಶಗಳಿಗೆ ಬಳಕೆ ಮಾಡಿಕೊಳ್ಳಬೇಕು ಎಂದರು. ಭೋಗಾಪುರ ವಸತಿಯುಕ್ತ ಪ್ರಥಮದರ್ಜೆ ಕಾಲೇಜು ಪ್ರಾಂಶುಪಾಲ ಪಿ. ದೇವರಾಜು ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಹೆಚ್.ವಿ.ಚಂದ್ರು, ತಾ.ಪಂ.ಮಾಜಿ ಸದಸ್ಯ ಆರ್.ಮಹದೇವು, ಫಾಸ್ಟರ್‌ರೆ.ಶಾಂತಕುಮಾರಿ, ದೀಪಾ ಅಕಾಡೆಮಿ ರವಿ, ಎಪಿಎಂಸಿ ಮಾಜಿ ಅಧ್ಯಕ್ಷ ನಾಗೇಂದ್ರ, ಪಿಡಿಓ ಮಾನಸ, ಕುದೇರು ಪೊಲೀಸ್ ಠಾಣೆಯ ಸಬ್‌ಇನ್‌ಪೆಕ್ಟರ್ ಈಶ್ವರ, ಮುಖಂಡ ಮಹೇಶ್ ಕುದರ್, ಯಜಮಾನರಾದ ಮಹಾ ಲಿಂಗು, ಶ್ರೀಧರ್, ಮಲ್ಲಿಕಾರ್ಜುನ, ಮುಖಂಡರಾದ ಗುರುಲಿಂಗಯ್ಯ, ಶಿವಮಲ್ಲಯ್ಯ, ರವಿ, ಚನ್ನಕೇಶವ, ಪ್ರಕಾಶ್, ಕೆಂಪರಾಜು, ದರ್ಶನ್, ಸಚಿನ್ ಜಯರಾಂ, ರಾಜೇಶ್, ಮೋಹನ್ ಹಾಗೂ ಗ್ರಾಮದ ಗ್ರಾಮಸ್ಥರು ಹಾಜರಿದ್ದರು.

# ಸೃಷ್ಟಿಯ ಮೂಲವೇ ಹೆಣ್ಣು



ಗುಂಡ್ಲುಪೇಟೆ: ಸೃಷ್ಟಿಯ ಮೂಲವೇ ಹೆಣ್ಣು ಪ್ರೀತಿಯ ಪ್ರತಿರೂಪವೇ ಮಹಿಳೆ ಎಂದು ಕಾಡ ಜಿಲ್ಲಾ ಅಧ್ಯಕ್ಷ ಪಿ ಮರಿಸ್ವಾಮಿ ತಿಳಿಸಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೆಣ್ಣು ಮನೆಯ ಬೆಳಕಾಗಿ ಸಮಾಜದ ಶಕ್ತಿಯಾಗಿ ಮುನ್ನಡೆಯುತ್ತಿರುವ ಅಪ್ರತಿಮ ಚೇತನ. ಒಬ್ಬ ವ್ಯಕ್ತಿಯ ಜೀವನದಲ್ಲಿ ಮಹಿಳೆಯ ಪಾತ್ರ ತುಂಬಾ ದೊಡ್ಡದಿರುತ್ತದೆ. ಆಕೆ ತಾಯಿಯಾಗಿ ಸಹೋದರಿಯಾಗಿ ಪತ್ನಿಯಾಗಿ ಬಾಳಿಗೆ ಬೆಳಕಾಗುತ್ತಾಳೆ. ವೈಯಕ್ತಿಕವಾಗಿ ಮನೆಯ ಅರ್ಧ ಜವಾಬ್ದಾರಿಯನ್ನು ಹೊರುವ ಜೊತೆಗೆ ಒಬ್ಬ ಶಿಕ್ಷಕಿಯಾಗಿ, ಇಂಜಿನಿಯರ್ ಆಗಿ, ಪೈಲೆಟ್ ಆಗಿ ಕೂಡ ತನ್ನ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿಭಾಯಿಸುತ್ತಾಳೆ. ಸಮಾಜದ ಕಟ್ಟುಪಾಡುಗಳ ಹೊರತಾಗಿಯೂ ಕೂಡ ಈಗಿನ ಆಧುನಿಕ ದಿನಗಳಲ್ಲಿ ಆಕೆ ಸಾಧನೆಯ ಶಿಖರವನ್ನು ಮುಟ್ಟುತ್ತಿದ್ದಾಳೆ ಎಂದು ಶ್ಲಾಘಿಸಿದರು.

ಇಂದು ಮಹಿಳೆಯರು ರಾಜಕೀಯ, ಆರ್ಥಿಕ, ವೈಜ್ಞಾನಿಕ ಹಾಗೂ ಸಂಶೋಧನಾ ಕ್ಷೇತ್ರಗಳಲ್ಲೂ ಮಹತ್ತರ ಸಾಧನೆ ಮಾಡುತ್ತಿದ್ದಾರೆ. ಗಗನ ಯಾತ್ರಿಗಳಾದ ಸುನಿತಾ ವಿಲಿಯಮ್ಸ್ ಮತ್ತು ಕಲ್ಪನಾ ಚಾವ್ಲಾ, ಭಾರತದ ಮಾಜಿ ಪ್ರದಾನಿ ಇಂದಿರಾ ಗಾಂಧಿ ಹಾಗೂ ಮಾಜಿ ರಾಷ್ಟ್ರಪತಿ ಪ್ರತಿಭಾ ಪಾಟೀಲ್ ಹಾಗೂ ಪ್ರಸ್ತುತ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಸಾಧನೆ. ಹೀಗೆ ಆನೇಕ ಮಹಿಳೆಯರ ಪ್ರಗತಿಯನ್ನು ನೆನೆಯಬೇಕು ಎಂದು ನೆನಪಿಸಿದರು. ಇದೇ ಸಂದರ್ಭದಲ್ಲಿ ಮಹಿಳಾ ಪೌರ ಕಾರ್ಮಿಕರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಚಾಮರಾಜನಗರ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಎಸ್. ನಾಗರತ್ನ, ರಾಜ್ಯ ಮಹಿಳಾ ಕಾರ್ಯದರ್ಶಿ ಲತಾ ಜತ್ತಿ, ನಗರಸಭೆ ಮಾಜಿ ಅಧ್ಯಕ್ಷೆ ಚಿನ್ನಮ್ಮ, ಪದ್ಮ ಪುರುಷೋತ್ತಮ, ನಾಗಮಣಿ, ರತ್ನಮ್ಮ ಕೋಮಲ, ಕಲಾವತಿ, ನಾಗಶ್ರೀ, ರೇಖಾ, ದುಂಡಮ್ಮ, ನಗರಸಭಾ ಸದಸ್ಯರು ಪುಷ್ಪ, ಕವಿತಾ, ಸುಶೀಲಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಭಾಗ್ಯ, ಪುರಸಭೆ ಸದಸ್ಯೆ ಭಾಗ್ಯಮ್ಮ ಮುಂತಾದವರು ಹಾಜರಿದ್ದರು.

## ತುಂಬಸೋಗೆ ಗ್ರಾಮದಲ್ಲಿ ಸಂಭ್ರಮ

# ವಿಜೃಂಭಣೆಯಿಂದ ಶನಿದೇವರ ಉತ್ಸವ

ಎಚ್.ಡಿ.ಕೋಟೆ: ತುಂಬಸೋಗೆ ಗ್ರಾಮದಲ್ಲಿ ಶ್ರೀಶನೇಶ್ವರಸ್ವಾಮಿ ವಾರ್ಷಿಕೋತ್ಸವವು ಸಹಸ್ರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.

ಒಂದು ವಾರದಿಂದ ಗ್ರಾಮದ ಎಲ್ಲ ಬೀದಿಗಳು ಹಾಗೂ ದೇವಾಲಯಗಳು ವಿದ್ಯುತ್ ದೀಪಾಲಂಕಾರಗಳಿಂದ ಝಗಮಗಗೊಳಿಸುತ್ತಿದ್ದವು. ಮನೆಯಂಗಳದಲ್ಲಿ ರಂಗೋಲಿಗಳ ಚಿತ್ತಾರ ಮೂಡಿದ್ದವು. ಶನಿವಾರ ರಾತ್ರಿ 10 ರಲ್ಲಿ ಶನಿದೇವರಿಗೆ ಮಹಾ ಮಂಗಳಾರತಿ ಮಾಡುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಯಿತು. ಸ್ವಾಮಿಯವರ ಭಾವಚಿತ್ರವನ್ನು ವಿವಿಧ ಫಲಪುಷ್ಪ ಹಾರಗಳೊಂದಿಗೆ, ವಿದ್ಯುತ್ ಅಲಂಕೃತ ಪಲ್ಲಕ್ಕಿಯಲ್ಲಿರಿಸಿ ಬಾಣ, ಬಿರುಸು, ಮಂಗಳವಾದ್ಯ, ನಾದಸ್ವರ, ವೀರಗಾಸೆ ಕುಣಿತದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಮೆರವಣಿಗೆ ವೇಳೆ ಪಟಾಕಿ ಸಿಡಿಸಿ ಸಂಭ್ರಮ ವ್ಯಕ್ತಪಡಿಸಿದರು. ಮೆರವಣಿಗೆ ಮಧ್ಯದಲ್ಲಿ ಕೋಸಂಬರಿ ವಿತರಿಸಲಾಯಿತು. ಭಕ್ತರು ಅನ್ನಸಂತರ್ಪಣೆಯಲ್ಲಿ ಪ್ರಸಾದ ಸ್ವೀಕರಿಸಿದರು. ಗ್ರಾಮದವರೇ ತಯಾರಿಸಿದ್ದ ಆಕಾಶ ಬುಟ್ಟಿಗಳು ಆಗಸದೆತ್ತರಕ್ಕೆ ಹಾರುತ್ತಿದ್ದವು ವಿಶೇಷವಾಗಿತ್ತು.





### ಗ್ರಾಮಗಳ ಸತ್ತಿಗೆಗಳ ಸಂಗಮ

ಹೈರಿಗೆ, ಕೋಳಗಾಲ, ಇಬ್ಜಾಲ, ಶಾಂತಿಪುರ, ಚಾಮೇಗೌಡನ ಹುಂಡಿ, ಕೊತ್ತೇಗಾಲ, ಹೊಸ ಹೆಗ್ಗುಡಿಲು, ಸಾಗರೆ, ಹೊಸ ಬಿದರಹಳ್ಳಿ, ಬಸಾಪುರ, ಇಟ್ನ, ಬೋರೆದೇವರಮುಂಟಿ, ನೇರಳೆ, ಹೆಗ್ಗಡಾಪುರ, ಸೋಗಹಳ್ಳಿ, ಬಾಚೇಗೌಡನ ಹಳ್ಳಿ ಹಾಗೂ ಚಕ್ಕೂರು ಗ್ರಾಮಗಳ ಯಜಮಾನರುಗಳು ಸತ್ತಿಗೆಗಳನ್ನು ತಂದು ಪೂಜೆ ಸಲ್ಲಿಸಿ ಮೆರವಣಿಗೆಯಲ್ಲಿ ಸಾಗಿದರು.

# ಮೊಬೈಲ್ ಕ್ಯಾಂಟೀನ್‌ಗೆ 5 ಲಕ್ಷ ಸಹಾಯಧನ

**ಚಿಕ್ಕಬಳ್ಳಾಪುರ:** ಪ್ರವಾಸೋದ್ಯಮ ಇಲಾಖೆಯ ವತಿಯಿಂದ 2025–26ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಉದ್ಯಮಶೀಲತಾ ಕಾರ್ಯಕ್ರಮ ವಿಷಯದ ಬಗ್ಗೆ ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ನಡೆಸಲು ರೂ.5 ಲಕ್ಷಗಳ ಸಹಾಯಧನ ನೀಡಲು ಉದ್ದೇಶಿಸಲಾಗಿರುತ್ತದೆ.

ಸದರಿ ತರಬೇತಿ ಹಾಗೂ ಸಹಾಯಧನಕ್ಕಾಗಿ ಪರಿಶಿಷ್ಟ ಜಾತಿಗೆ ಸೇರಿದ 8 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 5 ಅಭ್ಯರ್ಥಿಗಳ ಗುರಿಯನ್ನು ಪ್ರಸ್ತುತ ಸಾಲಿನಲ್ಲಿ ನಿಗಧಿಪಡಿಸಿದೆ. ಸದರಿ ತರಬೇತಿಯನ್ನು ವಸತಿಸಹಿತ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅತಿಥ್ಯ ಕ್ಷೇತ್ರದ ಸಂಸ್ಥೆಗಳ ಮೂಲಕ ಕಾರ್ಯಕ್ರಮವನ್ನು ಜಾರಿಗೊಳಿಸಲು ಸಹ ಉದ್ದೇಶಿಸಲಾಗಿರುತ್ತದೆ.

ಹೆಚ್ಚಿನ ವಿವರಗಳಿಗೆ ದೂ.08156–277041 ಗೆ ಸಂಪರ್ಕಿಸಬಹುದೆಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾಶಾಲೆಯಲ್ಲಿ 8ನೇ ತರಗತಿ ಪ್ರವೇಶಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** 2026–27ನೇ ಸಾಲಿನ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರ ಹಾಗೂ ಅನೈರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಗಂಡು ಮಕ್ಕಳಿಗೆ ಇಲಾಖಾ ವತಿಯಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ನೀಡಿ ಶ್ರೀರಾಮಕೃಷ್ಣ ವಿದ್ಯಾಶಾಲೆ, ಯಾದವಗಿರಿ, ಮೈಸೂರು ಇಲ್ಲಿ 8ನೇ ತರಗತಿಗೆ ಸೇರಿಸುವ ಸಲುವಾಗಿ ಏ.15 ರಂದು ಬೆಳಿಗ್ಗೆ 10 ಗಂಟೆಗೆ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ರವರಿಂದ ಅರ್ಜಿಗಳನ್ನು ಪಡೆದು ದಾಖಲೆಗಳೊಂದಿಗೆ ಮಾರ್ಚ್ 25 ರ ಒಳಗೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

6, 7 ನೇ ತರಗತಿ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಪೋಷಕರ ಮಕ್ಕಳಾಗಿದ್ದಲ್ಲಿ ಪ್ರಮಾಣ ಪತ್ರ, ವಿದ್ಯಾರ್ಥಿಗಳು ಕ್ರೀಡೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಪ್ರತಿಭೆ ಹೊಂದಿದ್ದಲ್ಲಿ ದಾಖಲೆಗಳು, ಅಭ್ಯರ್ಥಿಗಳು ಇಂಗ್ಲೀಷ್ ಅಥವಾ ಕನ್ನಡ ಮಾಧ್ಯಮದಲ್ಲಿ ಅರ್ಜಿ ಜೊತೆ ಲಗತ್ತಿಸಿರುವ ಪರೀಕ್ಷೆ ಪಠ್ಯಕ್ರಮದಂತೆ ಪ್ರವೇಶ ಪರೀಕ್ಷೆ ಬರೆಯಲು ಅವಕಾಶ ಇರುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ ತಿಳಿಸಿದ್ದಾರೆ.

# ಮದ್ಯ ಮಾರಾಟ ನಿಷೇಧ ಇಂದು

**ರಾಮನಗರ:** ಚನ್ನಪಟ್ಟಣ ತಾಲ್ಲೂಕಿನ ಹುಣಸನಹಳ್ಳಿ ಗ್ರಾಮದ ಶ್ರೀಬಿಸಲಮ್ಮ ದೇವಿ ಜಾತ್ರಾ ಮಹೋತ್ಸವದ ನಿಮಿತ್ತ ಸಾರ್ವಜನಿಕ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮಾ.10ರಂದು ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 11 ಗಂಟೆಯವರೆಗೆ ಕೋಡಂಬಳ್ಳಿ ಗ್ರಾಮ ಪಂಚಾಯ್ತಿಯಾದ್ಯಂತ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು 1968ರ ನಿಯಮ 3ರನ್ವಯ ಬರುವ ಎಲ್ಲಾ ರೀತಿಯ ಮದ್ಯ ಸನ್ನದುಗಳನ್ನು ಮುಚ್ಚಿಸಲು ಹಾಗೂ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಯಶವಂತ್ ವಿ. ಗುರುಕರ್ ಅವರು ಆದೇಶಿಸಿದ್ದಾರೆ.

## ಮಳವಳ್ಳಿ-ಕೊಳ್ಳೇಗಾಲ ರಸ್ತೆ ಭಾಗದಲ್ಲಿ ಕಟ್ಟಡ ನಿರ್ಮಿಸುವಂತೆ ರೈತ ಸಂಘ ಆಗ್ರಹ

# ಸರಕಾರಿ ಪಪೂ ಕಾಲೇಜು ಸ್ಥಳಾಂತರದ ಹುನ್ನಾರ

**ಮಂಡ್ಯ:** ಮದ್ದೂರು ತಾಲೂಕು ಭಾರತಿನಗರದ ಸರಕಾರಿ ಪದವಿ ಪೂರ್ವ ಕಾಲೇಜನ್ನು ಸ್ಥಳಾಂತರಿಸುವ ಹುನ್ನಾರ ರೂಪಿಸಲಾಗಿದ್ದು, ಅದನ್ನು ಮಳವಳ್ಳಿ ಕೊಳ್ಳೇಗಾಲ ರಸ್ತೆಯಲ್ಲಿನ ಪದವಿ ಕಾಲೇಜಿನ ಆವರಣದಲ್ಲಿ ಕಟ್ಟಡ ನಿರ್ಮಿಸಿ ಸ್ಥಾಪಿಸಬೇಕು ಎಂದು ಮಂಡ್ಯ ರೈತ ಸಂಘದ ಉಪಾಧ್ಯಕ್ಷ ಕೆ.ರಾಮಲಿಂಗೇಗೌಡ ಒತ್ತಾಯಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸದರಿ ಕಾಲೇಜುನ 2003ರಲ್ಲಿ ಡಿ.ಸಿ.ತಮ್ಮಣ್ಣ ಶಾಸಕರಾಗಿದ್ದ ಸಂದರ್ಭದಲ್ಲಿ ಅವರ ಸ್ಥಳದಲ್ಲೇ ಸರಕಾರಿ ಕಾಲೇಜು ನಿರ್ಮಿಸಲು ಕ್ರಮ ವಹಿಸಿದ್ದರು. ಆದರೆ ಈಗ ಸ್ಥಳ ಹಿಂಪಡೆಯುವ ಸಲುವಾಗಿ ವಿದ್ಯಾರ್ಥಿಗಳನ್ನು ವರ್ಗಾಯಿಸಿ, ಕಾಲೇಜನ್ನು 12 ಕಿ.ಮೀ ದೂರದ ಮದ್ದೂರಿ ಸ್ಥಳಾಂತರಿಸಲು ಹುನ್ನಾರ ಹಣೆದಿದ್ದಾರೆ ಎಂದು ಆರೋಪಿಸಿದರು.

ಕೇವಲ 33 ಮಂದಿ ವಿದ್ಯಾರ್ಥಿಗಳಿಂದ ಆರಂಭವಾದ ಕಾಲೇಜಿನಲ್ಲಿ 900ಕ್ಕೂ ಹೆಚ್ಚು ವಿದ್ಯಾರ್ಥಿಗಳು ದಾಖಲಾಗುವ ಮೂಲಕ ಜಿಲ್ಲೆಯಲ್ಲಿ ಅತಿ ಹೆಚ್ಚು ದಾಖಲಾತಿ ಹೊಂದಿದ ಕಾಲೇಜಿನಲ್ಲಿ 2ನೇ ಸ್ಥಾನದಲ್ಲಿತ್ತು. ಆದರೆ ಕಾಲೇಜು ಸ್ಥಳಾಂತರದ ಅಪಪ್ರಚಾರದಿಂದ 2025–26ನೇ 125 ವಿದ್ಯಾರ್ಥಿಗಳ ದಾಖಲಾತಿಗೆ ಇಳಿಮುಖ ಕಂಡಿದೆ. ಈಗಾಗಲೇ ಕಾಲೇಜಿನ ವಿದ್ಯಾರ್ಥಿಗಳನ್ನು 1.5 ಕಿ.ಮೀ ದೂರದ ಅಣ್ಣೂರು ಹಾಗೂ 12 ಕಿ.ಮೀ ದೂರದ ಮದ್ದೂರಿನ ಸರಕಾರಿ ಕಾಲೇಜುಗಳಿಗೆ ವರ್ಗಾಯಿಸಿದ್ದಾರೆ ಎಂದು ದೂರಿದರು.

ಇದರ ಹಿಂದೆ ಖಾಸಗಿ ವಿದ್ಯಾಸಂಸ್ಥೆಗಳ ಹುನ್ನಾರವಿದೆ ಎಂಬ ಅನುಮಾನ ಕಾಡುತ್ತಿದೆ. ಕಾಲೇಜು ಸ್ಥಳಾಂತರಗೊಂಡರೆ ಬಡ ಮಕ್ಕಳ ವಿದ್ಯಾಭ್ಯಾಸ ತೊಂದರೆಯಾಗಲಿದ್ದು, ಪಿಯು ಕಾಲೇಜನ್ನು ಭಾರತಿನಗರದ 1.5 ಕಿ.ಮೀ ವ್ಯಾಪ್ತಿಯಲ್ಲೇ ನಿರ್ಮಿಸಿ ಅನುಕೂಲ ಮಾಡಿಕೊಡಬೇಕೆಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಇಂಡುವಾಳು ಚಂದ್ರಶೇಕರ್, ಪ್ರಧಾನ ಕಾರ್ಯದರ್ಶಿ ಮಂಜೇಶ್‌ಗೌಡ, ಮಂಡ್ಯ ತಾಲೂಕು ಅಧ್ಯಕ್ಷ ಪುಟ್ಟಸ್ವಾಮಿ ಇದ್ದರು.

# ಮಂಡ್ಯ | ಕಳೆದುಕೊಂಡಿದ್ದ ಮೊಬೈಲ್ ಹಿಂದಿರುಗಿಸಿ ಪ್ರಾಮಾಣಿಕತೆ ಮೆರೆದ ನಿರ್ವಾಹಕ



**ಮಂಡ್ಯ:** ಕೆ.ಎಸ್.ಆರ್.ಟಿ.ಸಿ ಬಸ್ಸಿನಲ್ಲಿ ತೆರಳುವ ಸಂದರ್ಭದಲ್ಲಿ ಮೊಬೈಲ್ ಕಳೆದು ಕೊಂಡಿದ್ದ ಪ್ರಯಾಣಿಕರೊಬ್ಬರ ಮೊಬೈಲನ್ನು ಹಿಂದಿರುಗಿಸುವ ಮೂಲಕ ಬಸ್ಸಿನ ನಿರ್ವಾಹಕರೊಬ್ಬರು ಪ್ರಾಮಾಣಿಕತೆ ಮೆರೆದಿರುವ ಘಟನೆ ಭಾನುವಾರ ರಾತ್ರಿ ನಡೆದಿದೆ.

ಮಂಡ್ಯ – ಆದಿಚುಂಚನಗಿರಿ ನಡುವೆ ಸಂಚರಿಸುವ ನಾಗಮಂಗಲ ಡಿಪೋಗೆ ಬಸ್ಸಿನ ನಿರ್ವಾಹಕ ಸತೀಶ್ ಬಿ.ಎಸ್.ಮೊಬೈಲನ್ನು ಹಿಂದಿರುಗಿಸಿ ಮಾನವೀಯತೆ ಮೆರೆದಿದ್ದಾರೆ.

**ಏನಿದು ಘಟನೆ ?**

ಮಂಡ್ಯ ತಾಲ್ಲೂಕಿನ ಹನಿಯಂಬಾಡಿ ಗ್ರಾಮದ ಮಂಜುಳ ಹಾಗೂ ಅವರ ಪತಿ ಎನ್.ಶೇಖರ್ ಅವರು ಭಾನುವಾರ ಬೆಳಿಗ್ಗೆ ಮಂಡ್ಯದಿಂದ ಆದಿಚುಂಚನಗಿರಿಗೆ ಬಸ್ಸಿನಲ್ಲಿ ತೆರಳುತ್ತಿದ್ದರು. ಆ ಸಂದರ್ಭದಲ್ಲಿ ಮಂಜುಳ ಅವರ ಮೊಬೈಲ್ ಕಳೆದು ಹೋಗಿತ್ತು. ಎಲ್ಲ ಕಡೆ ಹುಡುಕಿದರೂ ಅದು ಪತ್ತೆಯಾಗಿರಲಿಲ್ಲ. ಆದರೆ ಬಸ್ಸು ತನ್ನ ಕಾರ್ಯಾಚರಣೆ ಮುಗಿಸಿ ಡಿಪೋಗೆ ತೆರಳುವ ಸಂದರ್ಭದಲ್ಲಿ ಮೊಬೈಲು ನಿರ್ವಾಹಕ ಸತೀಶ್ ಬಿ.ವಿ ಅವರ ಕಣ್ಣಿಗೆ ಬಿದ್ದಿದೆ. ಕೂಡಲೇ ಮೊಬೈಲಿನಲ್ಲಿದ್ದ ನಂಬರ್ ಗೆ ಕರೆ ಮಾಡಿ, ಮೊಬೈಲ್ ನಮ್ಮ ಬಳಿ ಇರುವುದಾಗಿ ತಿಳಿಸಿ, ಮಂಡ್ಯ ಬಸ್ ನಿಲ್ದಾಣಕ್ಕೆ ಬಂದು ಪಡೆದುಕೊಳ್ಳುವಂತೆ ತಿಳಿಸಿದರು. ಆನಂತರ ಎನ್.ಶೇಖರ್ ಬಸ್ ನಿಲ್ದಾಣಕ್ಕೆ ತೆರಳಿ ವಾಪಸ್ ಪಡೆದು, ನಿರ್ವಾಹಕ ಸತೀಶ್ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮತ್ತೊರ್ವ ನಿರ್ವಾಹಕ ಜಗದೀಶ್ ಬಿ ಪಿ ಹಾಗೂ ಗೃಹ ರಕ್ಷಕದಳ ಸಿಬ್ಬಂದಿ ಶ್ರೀನಿವಾಸ್ ಪ್ರಸಾದ್ ಉಪಸ್ಥಿತರಿದ್ದರು.

# ಸಿಂಧನೂರು ನೂತನ ಶೈಕ್ಷಣಿಕ ಜಿಲ್ಲೆಯಾಗಿ ಘೋಷಿಸುವ ಅಗತ್ಯವಿಲ್ಲ: ಸಚಿವ ಎಸ್. ಮಧು ಬಂಗಾರಪ್ಪ ಸ್ಪಷ್ಟನೆ

**ಬೆಂಗಳೂರು:** ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತಿ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕನ್ನು 'ನೂತನ ಶೈಕ್ಷಣಿಕ ಜಿಲ್ಲೆ' ಎಂದು ಘೋಷಿಸುವ ಅಗತ್ಯತೆ ಸದ್ಯಕ್ಕೆ ಕಂಡುಬರುತ್ತಿಲ್ಲ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಅವರು ತಿಳಿಸಿದರು.

ವಿಧಾನ ಪರಿಷತ್ತಿನ ಕಲಾಪದ ವೇಳೆ ವಿಧಾನ ಪರಿಷತ್ತಿನ ಸದಸ್ಯ ಶ್ರೀಬಸನಗೌಡ ಬಾದರ್ಲಿ ಅವರು ನಿಯಮ–72ರ ಅಡಿಯಲ್ಲಿ ಮಂಡಿಸಿದ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಸಚಿವರು ರಾಯಚೂರು ಜಿಲ್ಲಾ ಕೇಂದ್ರದಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಇರುವ ಗರಿಷ್ಠ ಅಂತರ ಕೇವಲ 90 ಕಿ.ಮೀ ಆಗಿರುತ್ತದೆ. ಭೌಗೋಳಿಕ ವ್ಯಾಪ್ತಿ ಕಡಿಮೆ ಇರುವುದರಿಂದ ಮತ್ತು ಸಂಪರ್ಕ ಸಾಧನಗಳು ಸುಗಮವಾಗಿರುವುದರಿಂದ ಸದ್ಯಕ್ಕೆ ಶೈಕ್ಷಣಿಕ ಜಿಲ್ಲೆಯ ವಿಂಗಡಣೆ ಸೂಕ್ತವಾಗಿರುವುದಿಲ್ಲ.



ಈ ಹಿಂದೆ ತುಮಕೂರು (ಮಧುಗಿರಿ–4 ತಾಲ್ಲೂಕು), ಬೆಳಗಾವಿ (ಚಿಕ್ಕೋಡಿ–8 ತಾಲ್ಲೂಕು), ಉತ್ತರ ಕನ್ನಡ (ಶಿರಸಿ–6 ತಾಲ್ಲೂಕು) ಮತ್ತು ಬೆಂಗಳೂರು ನಗರ (ಉತ್ತರ–4 ತಾಲ್ಲೂಕು) ಜಿಲ್ಲೆಗಳಲ್ಲಿ ಹೆಚ್ಚಿನ ತಾಲ್ಲೂಕುಗಳು ಮತ್ತು ವಿಸ್ತೀರ್ಣದ ಆಧಾರದ ಮೇಲೆ ಶೈಕ್ಷಣಿಕ ಜಿಲ್ಲೆಗಳನ್ನು ರಚಿಸಲಾಗಿತ್ತು. ಆದರೆ ರಾಯಚೂರು ಜಿಲ್ಲೆಯಲ್ಲಿ ಕೇವಲ 5 ತಾಲ್ಲೂಕುಗಳು ಇರುವುದರಿಂದ ಶೈಕ್ಷಣಿಕ ವ್ಯಾಪ್ತಿ ವಿಂಗಡಿಸುವ ಅವಶ್ಯಕತೆ ಇಲ್ಲ.

ಸಿಂಧನೂರಿನಲ್ಲಿ ಶೈಕ್ಷಣಿಕ ಜಿಲ್ಲೆ ಪ್ರಾರಂಭಿಸಿದಲ್ಲಿ ಹೊಸ ಕಚೇರಿ ಹಾಗೂ ಹುದ್ದೆಗಳನ್ನು ಸೃಜಿಸಬೇಕಾಗುತ್ತದೆ, ಇದು ಸರ್ಕಾರದ ಮೇಲೆ ಹೆಚ್ಚಿನ ಆರ್ಥಿಕ ಹೊರೆಯನ್ನು ಉಂಟು ಮಾಡುತ್ತದೆ. ಇಲಾಖೆಯ ಸೇವೆಗಳು ಪ್ರಸ್ತುತ ಗಣಕೀಕೃತಗೊಂಡಿದ್ದು, ಎಲ್ಲಾ ಮಾಹಿತಿಯು ಆನ್‌ಲೈನ್‌ನಲ್ಲಿ ಲಭ್ಯವಿರುವುದರಿಂದ ಆಡಳಿತಾತ್ಮಕವಾಗಿ ಯಾವುದೇ ಅಡಚಣೆ ಇಲ್ಲ.

ಈ ಹಿಂದೆ ಸಮಗ್ರ ಜಿಲ್ಲೆಯಾಗಿದ್ದ ರಾಯಚೂರನ್ನು ಆಡಳಿತಾತ್ಮಕ ದೃಷ್ಟಿಯಿಂದ ಈಗಾಗಲೇ ವಿಭಜಿಸಿ ಕೊಪ್ಪಳ ಜಿಲ್ಲೆಯನ್ನು ಸೃಜಿಸಲಾಗಿದೆ. ವಿಭಜನೆಯ ನಂತರ ರಾಯಚೂರು ಜಿಲ್ಲೆಯಲ್ಲಿ ಉಳಿದಿರುವ 5 ತಾಲ್ಲೂಕುಗಳ ಆಡಳಿತ ನಿರ್ವಹಣೆ ಸುಲಭವಾಗಿದೆ.

ಜಿಲ್ಲಾ ಕೇಂದ್ರದಿಂದ ಸಿಂಧನೂರಿಗೆ ಸಾರಿಗೆ ಸಂಪರ್ಕ ಉತ್ತಮವಾಗಿರುವುದರಿಂದ ಮತ್ತು ಇಲಾಖೆಯ ಸೇವೆಗಳು ಸುಲಭವಾಗಿ ಲಭ್ಯವಿರುವುದರಿಂದ ಸಿಂಧನೂರನ್ನು ಹೊಸ ಶೈಕ್ಷಣಿಕ ಜಿಲ್ಲೆಯನ್ನಾಗಿ ಘೋಷಿಸುವ ಪ್ರಸ್ತಾವನೆಯನ್ನು ಸದ್ಯಕ್ಕೆ ಕೈಬಿಡಲಾಗಿದೆ ಎಂದು ಸಚಿವರು ತಿಳಿಸಿದರು.

# ಜನಗಣತಿ ಅಂಕಿ–ಅಂಶಗಳೇ ಅಭಿವೃದ್ಧಿಗೆ ಆಧಾರ

## ಜನಗಣತಿ ಕಾರ್ಯಾಗಾರದಲ್ಲಿ ಗಣತಿದಾರರ ಜವಾಬ್ದಾರಿ ಕುರಿತು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಕಿವಿಮಾತು

**ತುಮಕೂರು:** ಜನಗಣತಿಯ ಅಂಕಿ–ಅಂಶಗಳೇ ಅಭಿವೃದ್ಧಿಗೆ ಆಧಾರವಾಗಿರುವುದರಿಂದ ಗಣತಿದಾರರು ಜವಾಬ್ದಾರಿಯಿಂದ ಗಣತಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ತುಮಕೂರು ಮಹಾನಗರ ಪಾಲಿಕೆಯಲ್ಲಿ ಸೋಮವಾರ ಭಾರತ ಜನಗಣತಿ–2027ರ ನಿಯೋಜಿತ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಯಾವುದೇ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಜನಗಣತಿಯ ಅಂಕಿ–ಅಂಶಗಳೇ ಆಧಾರವಾಗಿರುತ್ತದೆ. ಸರ್ಕಾರ ರೂಪಿಸುವ ಯೋಜನೆಗಳು, ಕ್ಷೇತ್ರ ವಿಂಗಡಣೆ ಎಲ್ಲವೂ ಜನಸಂಖ್ಯೆ ಆಧಾರದ ಮೇಲೆಯೇ ನಿರ್ಧಾರವಾಗುತ್ತದೆ. ಆದ್ದರಿಂದ ಈ ಕಾರ್ಯದಲ್ಲಿ ನಿಯೋಜಿತರಾದ ಅಧಿಕಾರಿ ಸಿಬ್ಬಂದಿ ಯಾವುದೇ ಪೂರ್ವಗ್ರಹವಿಲ್ಲದೆ, ಸರಿಯಾದ ಮಾಹಿತಿಯನ್ನು ಕ್ರೋಢೀಕರಿಸಬೇಕು ಎಂದರು.






1948ರ ಜನಗಣತಿ ಕಾಯ್ದೆಯ ಪ್ರಕಾರ ಜನಗಣತಿ ಕಾರ್ಯವನ್ನು ಕೈಗೊಳ್ಳಬೇಕಾಗಿದೆ ಎಂದ ಅವರು, 1972ರಲ್ಲಿ ಮೊದಲ ಗಣತಿ ನಡೆದಿದ್ದು, ಅದರ ಬಳಿಕ ಜನಸಂಖ್ಯೆಯ ನಿಖರ ಮಾಹಿತಿಯನ್ನು ಸಂಗ್ರಹಿಸುವುದು ಸರ್ಕಾರದ ಯೋಜನೆಗಳ ಜಾರಿಗೆ ಪ್ರಮುಖವಾಗಿದೆ ಎಂದು ತಿಳಿಸಿದರು. ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಹಾಗೂ ಅಲೆಮಾರಿ ಸಮುದಾಯಗಳಿಗೆ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವುದಕ್ಕಾಗಿ ಜಿಲ್ಲೆಯ ಮಟ್ಟದಲ್ಲಿ ಸಮಗ್ರ ಮಾಹಿತಿ ಅಗತ್ಯವಿದೆ. ಜನಗಣತಿ ಮೂಲಕ ಸಂಗ್ರಹವಾಗುವ ಅಂಕಿ–ಅಂಶಗಳು ಅದಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಇದಲ್ಲದೆ ಲೋಕಸಭೆ, ವಿಧಾನಸಭೆ, ಗ್ರಾಮ ಪಂಚಾಯ್ತಿ ಕ್ಷೇತ್ರಗಳ ರಚನೆಯೂ ಜನಸಂಖ್ಯೆ ಆಧಾರಿತವಾಗಿರುವುದರಿಂದ ಅಧಿಕಾರಿಗಳು ಜನಗಣತಿ ಕಾರ್ಯವನ್ನು ನಿಖರವಾಗಿ ಹಾಗೂ ಸಮರ್ಪಕವಾಗಿ ನಡೆಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಸಂವಹನ, ವಿಶ್ವಾಸಾರ್ಹತೆ ಹಾಗೂ ಮಾಹಿತಿ ಸಂಗ್ರಹ ಗಣತಿಯ ಪ್ರಮುಖ ಅಂಶಗಳು, ಈ ಹಿನ್ನೆಲೆಯಲ್ಲಿ ದೇಶದ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆ ಅಧ್ಯಯನ ಹಾಗೂ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಗಣತಿ ಕಾರ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕಾಗಿದೆ.

ಈ ಕಾರ್ಯಾಗಾರ ನಾಯಕತ್ವ ವಹಿಸಿಕೊಳ್ಳಬೇಕಾದ ಕಾರ್ಯಕ್ರಮವಾಗಿದ್ದು, ಆರಂಭದಲ್ಲಿ ನಿರಾಸಕ್ತಿ ಹುಟ್ಟಿಸಬಹುದು. ಆದರೆ ಜವಾಬ್ದಾರಿ ಮತ್ತು ಕರ್ತವ್ಯ ಎಂಬುದನ್ನು ಮರೆಯಬಾರದು. ತಮ್ಮ ಸಂದೇಹಗಳನ್ನು ಇಲ್ಲಿಯೇ ಬಗೆಹರಿಸಿಕೊಂಡು ಹೋಗಬೇಕು ಎಂದರು. ಕಾರ್ಯಾಗಾರದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಜನಗಣತಿ ಸಂಪನ್ಮೂಲ ವ್ಯಕ್ತಿಗಳಾದ ಆರ್.ಎಸ್. ಶರ್ಮಾ, ಭವ್ಯ ಇದ್ದರು.

# ಕ್ಲಸ್ಟರ್ ಮಟ್ಟದ ಎಸ್.ಡಿ.ಎಂ.ಸಿ. ಸದಸ್ಯರಿಗೆ ತರಬೇತಿ ಕಾರ್ಯಾಗಾರ ಉದ್ಘಾಟನೆ



**ಕೆ.ಆರ್.ನಗರ:** ಶಾಲೆಯ ಸರ್ವಾಂಗೀಣ ಅಭಿವೃದ್ಧಿಗೆ ಶಾಲಾಭಿವೃದ್ಧಿ ಸಮಿತಿಯೊಂದಿಗೆ ಪೊ?ಷಕರು ಹಾಗೂ ಸಾರ್ವಜನಿಕರು ಸಹಕರಿದರೆ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡಿ ಅವರಿಗೆ ಉತ್ತಮ ಭವಿಷ್ಯವನ್ನು ರೂಪಿಸಲಾಗುತ್ತದೆ ಎಂದು ಶಿಕ್ಷಣ ಇಲಾಖೆಯ ಕ್ಷೇತ್ರ ಸಮನ್ವಯ ಅಧಿಕಾರಿ ವೆಂಕಟೇಶ್ ಅಭಿಪ್ರಾಯಪಟ್ಟರು.

ತಾಲೂಕಿನ ಬ್ಯಾಡರಹಳ್ಳಿ ಕ್ಲಸ್ಟರ್ ವ್ಯಾಪ್ತಿಯ ಕಂಚುಗಾರ ಕೊಪ್ಪಲು ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ಎಸ್.ಡಿ.ಎಂ.ಸಿ. ಸದಸ್ಯರಿಗೆ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಇತ್ತೀಚಿನ ದಿನಗಳಲ್ಲಿ ಶಾಲಾ ಅಭಿವೃದ್ಧಿ ಸಮಿತಿಗಳಲ್ಲಿ ರಾಜಕೀಯ ಹೆಚ್ಚಾಗಿದ್ದು, ಶೈಕ್ಷಣಿಕ ಪ್ರಗತಿಯ ಮೇಲೆ ಪರಿಣಾಮ ಬೀರುತ್ತಿದೆ? ಎಂದು ವಿಷಾದ ವ್ಯಕ್ತಪಡಿಸಿದ ಅವರು ಶಾಲಾಭಿವೃದ್ಧಿ ಸಮಿತಿ ಅವರು ಕಲಿಕಾ ಪ್ರಗತಿಗೆ ಮುಖ್ಯ ಶಿಕ್ಷಕರ ಜೊತೆ ಸಹಕರಿಸ ಬೇಕು ಹಾಗೇಯೇ ಶಾಲಾ ಅನುದಾನವನ್ನು ಸಮನ್ವಯ ಸಭೆ ನಡೆಸಿ ಶಾಲೆಯ ಅಭಿವೃದ್ಧಿಗೆ ಮುಂದಾಗ ಬೇಕು ಎಂದು ಮಾಹತಿ ನೀಡಿದರು.

ಶಾಲಾಭಿವೃದ್ಧಿ ಸಮಿತಿ ಉತ್ತಮ ಯೋಜನೆಗಳನ್ನು ರೂಪಿಸಿ ಶಾಲೆಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಬೇಕು. ಹಾಗೇಯೇ ಶಾಲೆಗಳಲ್ಲಿ ಅಭಿವೃದ್ಧಿಯಲ್ಲಿ ಎಸ್‌ಡಿಎಂಸಿ ಪಾತ್ರ ಬಹಳ ಮಹತ್ವವಾದದು, ಹಾಗಾಗಿ ಸದಸ್ಯರು ಸೇವಾ ಮನೋಭಾವದಿಂದ ಕೆಲಸ ಮಾಡಬೇಕು? ಎಂದು ಸಲಹೆ ನೀಡಿದರು.

'ಸಮಿತಿ ಸದಸ್ಯರು ಸ್ಥಳೀಯ ದಾನಿಗಳನ್ನು ಗುರುತಿಸಿ ಅವರಿಂದ ಶಾಲಾ ಅಭಿವೃದ್ಧಿಗೆ ನೆರವು ಪಡೆಯಬೇಕು. ಮಕ್ಕಳ ಶೈಕ್ಷಣಿಕ ಪ್ರಗತಿಗೆ ಸರ್ಕಾರಿ ಜಾರಿಗೆ ತಂದಿರುವ ಯೋಜನೆಗಳ ಕುರಿತು ಪೊ?ಷಕರಿಗೆ ಅರಿವು ಮೂಡಿಸಬೇಕು? ಎಂದು ಹೇಳಿದರು.

ಎಸ್.ಡಿ.ಎಂ.ಸಿ.ರಚನೆ, ಅಧಿಕಾರ ಮತ್ತು ಕರ್ತವ್ಯಗಳು, ಸರ್ಕಾರದ ಪೊ?ರೀತ್ಸಾಹದಾಯಕ ಕಾರ್ಯಕ್ರಮಗಳು, ಶಿಕ್ಷಣದ ಸಾರ್ವತ್ರೀಕರಣದಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣದ ಮಹತ್ವ, ರೂಪುರೇಷೆಗಳು, ಶಿಕ್ಷಕರ ತರಬೇತಿಗಳು, ಅನುಪಾಲನೆ, ಶಿಕ್ಷಣದ ಸಾರ್ವತ್ರೀಕರಣಕ್ಕಾಗಿ ಸರ್ಕಾರದ ಮಹತ್ವಾಕಾಂಕ್ಷೆಯ ಕಾರ್ಯಕ್ರಮಗಳು, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾನೀತಿ, ಶಾಲಾಭಿವೃದ್ಧಿ ಯೋಜನೆ ಶಾಲೆಗಳಲ್ಲಿಸಾಮಾಜಿಕ ಲೆಕ್ಕ ಪರಿಶೋಧನೆ ಕುರಿತು ತರಬೇತಿ ಕಾರ್ಯಾಗಾರದಲ್ಲಿ ಸಂಪೂರ್ಣ ಮಾಹಿತಿ ನೀಡಿದರು.

ಇದೇ ವೇಳರ ಅತ್ಯುತ್ತಮ ಶಾಲಾಭಿವೃದ್ಧಿ ಸಮಿತಿ ಪ್ರಶಸ್ತಿಗೆ ಹಾಗೂ ರಾಜ್ಯ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನವಾದ ಅಡಗನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕ ಭಾಸ್ಕರ್ ಹಾಗೂ ಎಸ್.ಡಿ.ಎಂ.ಸಿ ಅಧ್ಯಕ್ಷ ಎ.ಸಿ.ಮಹೇಶ್ ಮತ್ತು ಉಪಾಧ್ಯಕ್ಷೆ ರಮ್ಯ ಅವರುಗಳನ್ನು ಅಭಿನಂದಿಸಲಾಯಿತು.

ಗ್ರಾಮದ ನಿವೃತ್ತ ಇಂಜಿನಿಯರ್ ಪ್ರಕಾಶ್, ಸಿ.ಆರ್.ಪಿ.ಸತೀಶ್, ಬಿ.ಆರ್.ಪಿ.ದಿನೇಶ್, ಮುಖ್ಯಶಿಕ್ಷಕ ವಿಷ್ಣು, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ರಘುನಾಥ್, ವಿವಿದ ಶಾಲೆಯ ಮುಖ್ಯ ಶಿಕ್ಷಕರಾದ ಭಾಸ್ಕರ್, ಮಂಜುನಾಥ್, ಚಿಕ್ಕೇಗೌಡ, ತಮ್ಮಣ್ಣ, ಮಹೇಶ್ವರಿ ಶಿಕ್ಷಕ ಮಾರುತಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಇತಿಹಾಸ ಅಳಿಯದಂತೆ ಕೆರೆಗಳ ಹೆಸರು ಬದಲಿಸಿ

**ಮಂಡ್ಯ:** ಮಹಿಳೆಯರಿಗೆ ಮುಜುಗರ ಉಂಟು ಮಾಡುವ ಹೆಸರಿನ ಕೆರೆಗಳ ಇತಿಹಾಸ ಅಳಿಯದಂತೆ ಹೆಸರು ಬದಲಾಯಿಸಬೇಕು ಎಂದು ಅಖಿಲ ಭಾರತ ಮಹಿಳ ಕಾಂಗ್ರೆಸ್‌ನ ರಾಜ್ಯ ಕಾರ್ಯದರ್ಶಿ ಎಸ್.ಯಶೋಧಗೌಡ ಅಭಿಪ್ರಾಯ ವ್ಯಕ್ತಪಡಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು 41,849ಕ್ಕೂ ಹೆಚ್ಚು ಕೆರೆಗಳಿವೆ. ಅದರಲ್ಲಿ 6861 ಕೆರೆಗಳಿಂದ ಹಾಸನ ಪ್ರಥಮ ಸ್ಥಾನದಲ್ಲಿದೆ. ಹಲವೆಡೆ ನಾನಾ ಹೆಸರಿನ ಕೆರೆಗಳಿವೆ. ಮಹಿಳೆಯರಿಗೆ ಗೌರವ ಸೂಚಿಸುವ ನಿಟ್ಟಿನಲ್ಲಿ ಸೂಳೆಕೆರೆ ಹೆಸರಿನ ಮರುನಾಮಕರಣ ಮಾಡುವಂತೆ ಒತ್ತಾಯಿಸಿದರು.

ದಾವಣಗೆರೆಯ ಚೆನ್ನಗಿರಿ ತಾಲೂಕಿನ ಶಾಂತವ್ವನ ಕೆರೆ(ಶಾಂತಿ ಸಾಗರ), ನಾಗಮಂಗಲದ ಸೂಳೆಕೆರೆ (ಗೆಳತಿ ಗುಡ್ಡದ ಕೆರೆ) ಮದ್ದೂರಿನ ಬಂಗಾರದೊಡ್ಡಿ ನಾಲೆಯ ಸೂಳೆಕೆರೆಗಳಿಗೆ ಅವುಗಳ ಇತಿಹಾಸಕ್ಕೆ ಪೂರಕವಾದ ಹಾಗೂ ಸ್ತ್ರೀ ಕುಲಕ್ಕೆ ಗೌರವ ತರುವ ಬೇರೆ ಹೆಸರಿಡಬೇಕು ಎಂದರು.


ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ಕೆರೆಗೆ ಶಾಂತಸಾಗರ ಎಂದು ಹೆಸರಿಡಲಾಗಿದೆ. ಅಂತೆಯೇ ಮದ್ದೂರಿನ ಸೂಳೆಕೆರೆ(ಈಗಿನ ಕನ್ನಲಿ–ಅಂಬರಹಳ್ಳಿ ಕೆರೆ) 12ನೇ ಶತಮಾನದಲ್ಲಿ ನಿರ್ಮಿಸಲಾಗಿದ್ದು, ಮಿನಿ ಕೆ.ಆರ್.ಎಸ್ ಎಂದು ಕರೆಯಲಾಗುತ್ತದೆ. ಇದಕ್ಕೆ ಬಂಗಾರ್‌ದೊಡ್ಡಿ ಕೆರೆ, ಅಕ್ಕ–ತಂಗಿಕೆರೆ ಅಥವಾ ಸೂಕ್ತ ಹೆಸರಿಡಬೇಕು. ನಾಗಮಂಗಲದ ಕೆರೆ 15ನೇ ಶತನಮಾನದಲ್ಲಿ ನಿರ್ಮಿತವಾಗಿದ್ದು, ಇದಕ್ಕೆ ಗೆಳತಿ ಮಂಟಪ ಅಥವಾ ಸಿಂಗರಸನ ಕೆರೆ ಎಂದು ಮರು ನಾಮಕರಣ ಮಾಡಬೇಕು ಎಂದು ಸ್ಥಳೀಯ ಶಾಸಕರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಲ್ಲಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಇಂದಿರಾ ಸತೀಶ್‌ಬಾಬು, ಮಂಜುಳಾ ಲೋಕೇಶ್, ಮಮತ, ಮಂಜುಳ ಇದ್ದರು.



**ವೈ.ಎನ್.ಹೊಸಕೋಟೆ:** ಹೋಬಳಿಯ ಜಾಲೋಡು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ನಿರ್ಮಾಣಗೊಂಡಿದ್ದ ಎರಡು ಅಂತಸ್ತಿನ ಶಾಲಾ ಸಂಕೀರ್ಣವನ್ನು ಶಾಸಕರಾದ ಹೆಚ್.ವಿ.ವೆಂಕಟೇಶ್ ಉದ್ಘಾಟನೆ ಮಾಡಿದರು. ಈ ಸಂದರ್ಭದಲ್ಲಿ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ರೇಣುಕಮ್ಮ,ಬಿ.ಆರ್.ಸಿಗಳಾದ ವೆಂಕಟೇಶಪ್ಪ,ವೇಣುಗೋಪಾಲ್ ರೆಡ್ಡಿ, ಮುಖ್ಯ ಶಿಕ್ಷಕರಾದ ಬಿ.ಪಿ.ಗೌಡ, ಗ್ರಾಮದ ಎಲ್ಲಾ ಮುಖಂಡರು ಹಾಜರಿದ್ದರು.

# ಮರುಳ ಶಂಕರ ದೇವರು



ವೀಣಾ ಹೇಮಂತ್‌ಗೌಡ ಪಾಟೀಲ್

ಕಲ್ಯಾಣದ ಕೀರ್ತಿ ಎಲ್ಲೆಡೆ ಹಬ್ಬಿ ಬಸವಾದಿ ಶಿವ ಶರಣರ ಕಾಯಕ, ದಾಸೋಹ, ಲಿಂಗ ಪೂಜೆ ಹಾಗೂ ಶರಣತತ್ವ ಚಿಂತನೆಗಳ ಮಹತಿ ನಾಲ್ದೆಸೆಗಳಲ್ಲಿ ಹರಡಿ ಸಮಾನ ಮನಸ್ಕರನ್ನು ಸೆಳೆಯಿತು. ದೇಶದ ಇಕ್ಕೆಲಗಳಿಂದ ಕಲ್ಯಾಣದೆಡೆ ಧಾವಿಸಿ ಬಂದವರು ಹಲವಾರು ಜನ. ಅಂತಹ ಶರಣರಲ್ಲಿ ಒಬ್ಬರು ಮೌನ ತಪಸ್ವಿ ಮರುಳ ಶಂಕರ ದೇವರು. ಜನಪದ ಭಾಷೆಯಲ್ಲಿ ಮರುಳ ಎಂದರೆ ಹುಚ್ಚು ಎಂಬ ಭಾವದಲ್ಲಿ ಯೋಚಿಸದೆ ಶಿವನಿಗೆ ಸಂಪೂರ್ಣವಾಗಿ ತನ್ನನ್ನು ತಾನು ಅರ್ಪಿಸಿ ಸದಾಶಿವ ಧ್ಯಾನದಲ್ಲಿಯೇ ಇರುವವನು ಎಂದು ಅರ್ಥ. ಅಂತೇ ಮರುಳ ಶಂಕರ ದೇವರು ಮೌನ ಅನುಷ್ಠಾನದಲ್ಲಿ ಸದಾ ಶಿವ ಧ್ಯಾನದಲ್ಲಿ ಉಳಿದ ಕಾರಣ ಅವರಿಗೆ ಈ ಹೆಸರು ಬಂದಿರಬಹುದು.

ಇಂದಿನ ಅಫ್ಘಾನಿಸ್ತಾನದಿಂದ ಶಿವಶರಣರ ಖ್ಯಾತಿಯನ್ನು ಕೇಳಿ ಅದರ ಸಾರವನ್ನು ಖುದ್ದು ಅನುಭವಿಸಬೇಕು ಎಂಬ ಆಶಯದಿಂದ ಭಾರತಕ್ಕೆ ಅದರಲ್ಲೂ ಕರ್ನಾಟಕ ರಾಜ್ಯದ ಕಲ್ಯಾಣ ಕ್ಷೇತ್ರಕ್ಕೆ ಬಂದು ನೆಲೆಯಾದ ಶಂಕರ ದೇವರು ಮುಂದೆ ಕಲ್ಯಾಣದ ಅನುಭವ ಮಂಟಪದ 770 ಅಮರ ಗಣಗಳಲ್ಲಿ ಒಬ್ಬರಾದವರು.

ಮೂಲತಹ ಅಪಘಾನಿಸ್ತಾನದ ಮರುಳ ಶಂಕರ ದೇವರು ಆಧ್ಯಾತ್ಮದ ಅರಿವಿನ ಹುಡುಕಾಟದಲ್ಲಿ ಸಾಧುಸಂತರಲ್ಲಿ ಜ್ಞಾನವನ್ನು ಪಡೆಯುವ ನಿಟ್ಟಿನಲ್ಲಿ ಅವಿರತ ಪ್ರಯತ್ನ ಮಾಡಿದರು. ಆ ನಿಟ್ಟಿನಲ್ಲಿ ಅವರು ಅಫಘಾನಿಸ್ತಾನವನ್ನು ತೊರೆದು ಮೊದಲು ಪಾಕಿಸ್ತಾನಕ್ಕೆ ನಂತರ ಭಾರತದ ಹಲವಾರು ಧಾರ್ಮಿಕ ಕ್ಷೇತ್ರಗಳನ್ನು ಪುಣ್ಯ ಸ್ಥಳಗಳನ್ನು ದರ್ಶಿಸುತ್ತಾ ಗುರುವಿನ ಹುಡುಕಾಟದಲ್ಲಿ ತೊಳಲುತ್ತಾ ಅಂತಿಮವಾಗಿ ತಮ್ಮ ಗಮ್ಯವಾದ ಕಲ್ಯಾಣ ಕ್ಷೇತ್ರಕ್ಕೆ ಬಂದರು.

ಅನುಭವ ಮಂಟಪದ ದಾಸೋಹದ ಮನೆಯಲ್ಲಿ ಶಿವಶರಣರು ಉಂಡು ಬಿಟ್ಟ ಆಹಾರದ ಮುಸುರೆಯನ್ನು ಎತ್ತಿ ಸುಮಾರು 12 ವರ್ಷಗಳ ಕಾಲ ಗುಪ್ತ ಭಕ್ತರಾಗಿ ಅವರು ಕಾರ್ಯನಿರ್ವಹಿಸಿದರು. ಮರುಳ ಶಂಕರ ದೇವರನ್ನು ಒಂದೊಮ್ಮೆ ಶೂನ್ಯ ಪೀಠದ ಸಿಂಹಾಸನಾಧೀಶರಾದ ಅಲ್ಲಮ ಪ್ರಭುಗಳು ಗುರುತಿಸಿ ಬಸವಣ್ಣನವರಿಗೆ ಪರಿಚಯ ಮಾಡಿಕೊಟ್ಟರು ಎಂಬುದನ್ನು ಶೂನ್ಯ ಸಂಪಾದನೆ ಎಂಬ ಗ್ರಂಥದಲ್ಲಿ ನಾವು ಕಾಣಬಹುದು.

ನಂತರ ಬಸವಣ್ಣನವರಿಂದ ಇಷ್ಟಲಿಂಗ ದೀಕ್ಷೆಯನ್ನು ಪಡೆದು ಕಾಯಕ ದಾಸೋಹ ಹಾಗೂ ಶರಣ ಚಿಂತನೆಗಳಲ್ಲಿ ತೊಡಗಿಕೊಂಡ ಅವರು ಮುಂದಿನ ಕೆಲವೇ ವರ್ಷಗಳಲ್ಲಿ ಅನುಭವ ಮಂಟಪದ 770 ಅಮರಗಣಂಗಳಲ್ಲಿ ಒಬ್ಬರಾದರು. ಷಟ್ ಸ್ಥಲ ತತ್ವದಲ್ಲಿನ ಪ್ರಸಾದಿ ಸ್ಥಲದಲ್ಲಿದ್ದವರು. ಇವರ ಒಟ್ಟು 35 ವಚನಗಳು ಲಭ್ಯವಿದ್ದು ಪ್ರಸಾದ ತತ್ವದ ಕುರಿತು ಅವರು ತಮ್ಮ ವಚನಗಳಲ್ಲಿ ಹೆಚ್ಚು ಪ್ರತಿಪಾದಿಸಿದ್ದಾರೆ.

## ಉಪೇಕ್ಷಿತ ವಚನಕಾರರು

ಶಿವಶರಣರ ಜೊತೆಗೂಡಿ ಅವರು ಬಸವಾದಿ ಶರಣರ ಸ್ತುತಿ, ಲಿಂಗವಂತರ ನಿಜ ನಿಲುವು, ಮಹಾ ಲಿಂಗೈಕ್ಯರ ಶೀಲ, ಸ್ವರೂಪ, ಚಾರಿತ್ರ್ಯಗಳ ಬೋಧೆ, ಪ್ರಸಾದದ ಕುರಿತಾದ ಗೌರವಗಳನ್ನು ಇವರ ವಚನಗಳಲ್ಲಿ ಕಾಣಬಹುದು.

ತಮ್ಮ ಸಮಕಾಲೀನರ ಕುರಿತು ಹೇಳುವ ಇವರ ವಚನಗಳಲ್ಲಿ ವಿಶೇಷ ರೂಪಕಗಳನ್ನು ಬಳಸಿರುವ ರೀತಿ ಅನನ್ಯವಾದದು. ಬಹುಶಹ ಅಂದಿನ ಎಲ್ಲ ಶರಣರ ಭಾವವಾಗಿದ್ದ ಶರಣ ಸತಿ ಲಿಂಗಪತಿ ಎಂಬ ಭಾವವು ಮರುಳ ಶಂಕರ ದೇವರಲ್ಲಿ ಮಾತ್ರ ಶರಣಪತಿ ಲಿಂಗ ಸತಿ ಎಂಬ ಭಾವವನ್ನು ಸೂಚಿಸುತ್ತಿತ್ತು. ಸೂಫಿ ಪಂಥದ ಪದಭಾವವನ್ನು ಹೊಂದಿದ್ದರು.

ಅಣ್ಣ ಬಸವಣ್ಣನವರ ಕುರಿತು ಜನರ ಭಾವ ಹೇಗಿತ್ತು ಎಂಬುದನ್ನು ತಮ್ಮ ಅನುಭವದಿಂದ ಅರಿತ ಅವರು ತಮ್ಮ ವಚನದಲ್ಲಿ ಅದನ್ನು ಸಾದರಪಡಿಸಿದ್ದಾರೆ

ಮರುಳ ಶಂಕರ ದೇವರು ಶಿವಯೋಗಿಗಳನ್ನು ಶಿವಲಿಂಗವೆಂದು ತಾವು ಅವರ ಮುಂದೆ ಕುಳಿತ ಬಸವನಂತೆ ಎಂದು ತಮ್ಮನ್ನು ತಾವು ಕರೆದುಕೊಂಡಿದ್ದಾರೆ. ಮಹಾಪ್ರಸಾದಿ ಕೂಡ ಆಗಿದ್ದ ಇವರು ಕಲ್ಯಾಣ ಕ್ರಾಂತಿಯ ನಂತರ ಕಮತಗಿ ಗ್ರಾಮಕ್ಕೆ ಬಂದು ಮೌನ ಯೋಗಿಯಾಗಿ ಭಕ್ತರನ್ನು ಉದ್ದರಿಸಿದರು ಜೊತೆಗೆ ಜಲ ಸಂಶೋಧಕರಾಗಿ ಕೂಡ ಪ್ರಸಿದ್ಧರಾದರು. ಅವರ ಆಶೀರ್ವಾದದಿಂದ ತೋಡಿದ ಹಲವಾರು ಬಾವಿಗಳು ಇಂದಿಗೂ ಕೂಡ ಜನರಿಗೆ ನೀರಿನ ಆಶ್ರಯ ತಾಣಗಳಾಗಿವೆ ಮುಂದೆ ಕಮತಗಿಯಲ್ಲಿ ಹುಚ್ಚೇಶ್ವರ ಸಂಸ್ಥಾನವನ್ನು ಕಟ್ಟಿದ ಇವರು ಮೌನ ಅನುಷ್ಠಾನದಲ್ಲಿ ತಮ್ಮ ಹೆಚ್ಚಿನ ಬದುಕನ್ನು ಕಳೆದರು.

ಮರುಳ ಶಂಕರ ದೇವರು ಜಾತಿ ಧರ್ಮ ಲಿಂಗ ಭೇದವಿಲ್ಲದೆ ಭಕ್ತರಿಗೆ ಆಶೀರ್ವಾದ ನೀಡುವ ನಿಷ್ಕಲ್ಮಶ ಶಿವಯೋಗಿ ಎಂದು ಕರೆಯಲ್ಪಟ್ಟರು.

ಎನಗೆ ಹರಿಯಿತ್ತು ತಮವೆಂಬ ಸಂಸಾರದ ಬಂಧನ, ಅಡಗಿಯು ಉಡುಗಿಯು ಕಂಡೆಹೆನೆಂದೆಂಬ
ಸಂಶಯ ತಲೆದೋರಿತ್ತು.
ಸಂಕಲ್ಪ ಸಂದೇಹ ಬ್ರಾಂತು ಭ್ರಮೆಯ ಭಾವಕ್ಕೆ ಬಯಲಾಯಿತ್ತು
ನಿತ್ಯ ನಿರಂಜನ ಪರಂ ಜ್ಯೋತಿ ಪ್ರಕಾಶವೆನಗೆ
ಶುದ್ಧ ಸಿದ್ದ ಪ್ರಸಿದ್ಧ ಪ್ರಸನ್ನ ಪ್ರಭುವೇ ಶಾಂತ ಮಲ್ಲಿಕಾರ್ಜುನ
ದೇವಯ್ಯ ಕಾಣಬಂದಿತ್ತು ಕಾಣಾ ಪ್ರಭುದೇವರ ಕಾರುಣ್ಯ ಪ್ರಸಾದದಿಂದ ಬಸವಣ್ಣ


ಸಂಸಾರದ ಬಂಧನವೆಂಬ ಭ್ರಾಂತಿಯು ತಮಗೆ ಉಡುಗಿ ಭ್ರಮೆಯ ಭಾವ ಬಯಲಾಗಿದ್ದು ನಿತ್ಯ ನಿರಂಜನವಾದ ಪರಂಜ್ಯೋತಿಯು ತಮಗೆ ದಾರಿ ತೋರಿದ್ದು ಪ್ರಭುದೇವರ ಕಾರುಣ್ಯದಿಂದ ಬಸವಣ್ಣನವರ ಪ್ರಸಾದದಿಂದ ತಮಗೆ ಶುದ್ಧ ಸಿದ್ಧ ಪ್ರಸಿದ್ಧ ಪ್ರಸನ್ನ ಪ್ರಭು ಶಾಂತ ಮಲ್ಲಿಕಾರ್ಜುನನ ಆಶೀರ್ವಾದ ದೊರೆಯಿತು ಎಂದು ಅವರು ಹೇಳಿದ್ದಾರೆ.

**ಎನ್ನ ಜ್ಞಾನಾತ್ಮಕ ಚೇತನನಯ್ಯ ಪ್ರಭುದೇವರು**
**ಎನ್ನ ಪರಮಾತ್ಮನ ಚೇತನನಯ್ಯ ಸಿದ್ದರಾಮೇಶ್ವರ ದೇವರು .**
**ಎನ್ನ ಚಿನ್ಮಯಾತ್ಮನನ ಚೇತನನಯ್ಯ ಬಸವಣ್ಣನು**
**ಎನ್ನ ನಿರ್ಮಲಾತ್ಮನನ ಚೇತನನಯ್ಯ**
**ಷಟ್ ಸ್ಥಲಬ್ರಹ್ಮ ಚನ್ನ ಬಸವಣ್ಣನು**
**ಎನ್ನ ಮಹಾತ್ಮನ ಚೇತನನಯ್ಯ**
**ಸಂಗನ ಬಸವಣ್ಣನ ನಿಜ ಸುಖಿ ಅಪ್ಪಣ್ಣನು**
**ಎನ್ನ ಜೀವಾತ್ಮನ ಚೇತನನಯ್ಯ**
**ಮಡಿವಾಳ ಮಾಚಯ್ಯನು**
ಎನ್ನ ಅಂತರಾತ್ಮನ ಚೇತನನಯ್ಯ ಸೊಡ್ಡಳ ಬಾಚರಸರು
ಎನ್ನ ಅರಿವಿನ ಚೇತನಾತ್ಮಕನಯ್ಯ ಕಿನ್ನರಬೊಮ್ಮಯ್ಯನು
ಶುದ್ಧಸಿದ್ಧ ಪ್ರಸಿದ್ಧ ಪ್ರಸನ್ನ ಪ್ರಭುವೆ ಶಾಂತಚೆನ್ನಮಲ್ಲಿ ಕಾರ್ಜುನ ದೇವಯ್ಯಾ,
ನಿಮ್ಮ ಶರಣರ ಕರುಣವ ಪಡೆದೆನಾಗಿ,
ಎನ್ನ ಕರ್ಮ ನಿರ್ಮೂಲವಾಯಿತ್ತಯ್ಯ, ನಿಮ್ಮ ಧರ್ಮ ನಿಮ್ಮ ಧರ್ಮ

ಎಂದು ಹೇಳಿರುವ ಅವರು ತಮ್ಮ ಪ್ರತಿ ವಚನದ ಕೊನೆಯಲ್ಲಿ ನಿಮ್ಮ ಧರ್ಮ ನಿಮ್ಮ ಧರ್ಮ ನಿಮ್ಮ ಧರ್ಮ ಎಂದು ಉಚ್ಚರಿಸಿದ್ದಾರೆ.

ಮರುಳ ಶಂಕರ ದೇವರ ಪಾದಗಳಿಗೆ ನಮೋ ನಮಃ





# ಪಾರಿಜಾತ



ಪುಷ್ಪ ಪ್ರಸಾದ್

ಕಥೆಯ ಮೂಲ ಬೀಜವನ್ನು ಹುಡುಕಿ, ಪಾತ್ರಗಳು, ಭಾವನೆಗಳು ಅಥವಾ ವಿಶಿಷ್ಟ ಸನ್ನಿವೇಶಗಳಿಂದ ಸ್ಫೂರ್ತಿ ಪಡೆಯುವುದು. ಕನ್ನಡದಲ್ಲಿ ಸಣ್ಣಕಥೆ ಒಂದು ವಿಶಿಷ್ಟ ರೂಪವಾಗಿ ಜನ್ಮ ತಾಳಿದುದು ಸುಮಾರು ನೂರು ವರ್ಷಗಳ ಹಿಂದೆ. ಕನ್ನಡದಲ್ಲಿ ಸಣ್ಣಕಥೆಗೆ ವಿಶಿಷ್ಟ ರೂಪ ಕೊಟ್ಟವರು, ಚಾರಿತ್ರಿಕವಾಗಿ ಮೊಟ್ಟ ಮೊದಲು ಕಥೆಗಳನ್ನು ಬರೆದವರು ಪಂಜೆ ಮಂಗೇಶರಾಯರು. ನಂತರ ಕೆರೂರ ವಾಸುದೇವಾಚಾರ್ಯರು, ಎಂ.ಎನ್.ಕಾಮತರು ಇವರೆಲ್ಲ ಆರಂಭದಲ್ಲಿ ಸಣ್ಣ ಕಥೆಗಳನ್ನು ಬರೆದವರು. ಸುವಾಸಿನಿ ಪತ್ರಿಕೆಯಲ್ಲಿ ಪ್ರಕಟವಾದ ಪಂಜೆ ಮಂಗೇಶರಾಯರ ನನ್ನ ಚಿಕ್ಕತಾಯಿ (1900) ಕನ್ನಡದ ಮೊದಲ ಸಣ್ಣ ಕಥೆ ಎಂದು ಭಾವಿಸಲಾಗಿದೆ. ಅನಂತರದಲ್ಲಿ ಅವರು ನನ್ನ ಚಿಕ್ಕ ತಂದೆ (1902), ಭಾರತ ಶ್ರವಣ (1902), ಕಮಲಪುರದ ಹೋಟ್ಲಿನಲ್ಲಿ (1902) ಮೊದಲಾದ ಉತ್ತಮ ಕಥೆಗಳನ್ನು ಪ್ರಕಟಿಸಿದರು. ಆದರೆ ಇವರಾರೂ ಅದೊಂದು ಸಾಹಿತ್ಯ ಪ್ರಕಾರವೆಂಬ ಪ್ರಜ್ಞೆಯನ್ನು ಮೂಡಿಸಿರಲಿಲ್ಲ. ಆ ಪ್ರಜ್ಞೆಯನ್ನು ಮೂಡಿಸಿ ಅದನ್ನೇ ಮಾಧ್ಯಮವನ್ನಾಗಿ ಬಳಸಿದವರಲ್ಲಿ ಶ್ರೀನಿವಾಸರು (ಮಾಸ್ತಿ) ಮೊದಲಿಗರು. ಇವರು ಸಣ್ಣಕಥೆಯ ಜನಕರೆಂಬ ಹೆಸರಿಗೆ ಪಾತ್ರರಾದವರು. ಇವರ ವಸ್ತುವಿನ ಆಯ್ಕೆ, ದೃಷ್ಟಿ, ತಿಳಿಹಾಸ್ಯ, ಸರಳಶೈಲಿ – ಇವು ಕನ್ನಡ ಕಥಾಲೋಕಕ್ಕೆ ಮಾರ್ಗದರ್ಶಕವಾಗಿವೆ. ಇವರ ಕಥೆಗಳು ಅನೇಕ ಸಂಪುಟಗಳಲ್ಲಿವೆ. ರಂಗಪ್ಪನ ದೀಪಾವಳಿಯಿಂದ ಹಿಡಿದು ಇವರ ಎಲ್ಲ ಕಥೆಗಳಲ್ಲಿ ಕಾಣುವುದು ಸಾಮಾನ್ಯ ಘಟನೆಗಳನ್ನು ಉತ್ಪ್ರೇಕ್ಷೆಯಿಲ್ಲದೆ ಹೇಳುವ ಕಲೆ. ಇವರ ಕಥೆಗಳಲ್ಲಿ ಆವೇಶವಿಲ್ಲ, ಚಮತ್ಕಾರವಿಲ್ಲ, ವಿಸ್ಮಯವಿಲ್ಲ; ಉದಾತ್ತಗುಣಗಳಿಂದ ತುಂಬಿದ ಆತ್ಮದ ಒಂದು ಚೇತನವನ್ನು ಕಾಣುತ್ತೇವೆ.




ಅಂತೆಯೇ ಈಗ ನಾನು ಹೇಳ ಹೊರಟಿರುವುದು ಸಣ್ಣ ಕತೆಗಳ ಬಗ್ಗೆ. ಈ ಪಾರಿಜಾತವೆಂಬುದು ಶೋಭಾ ದಿನೇಶ್ ರವರ ಸಣ್ಣಕತೆಗಳು (ನ್ಯಾನೋ ಕತೆಗಳು) ಕೃತಿ. ಇಲ್ಲಿ ಸಣ್ಣ ಕತೆಗಳು, ಇಲ್ಲಿಯ ಕತೆಗಳು ನಮ್ಮ ಸುತ್ತಲಿನ ವಾಸ್ತವದ ಕತೆಗಳೆಂದರೆ ತಪ್ಪಾಗಲಾರದು. ನಿತ್ಯಬದುಕಿನಲ್ಲಿ ನಡೆದ ಆಗುಹೋಗುಗಳನ್ನೆಲ್ಲ ಕಥಾ ರೂಪಕ್ಕೆ ತಂದು ಪ್ರತಿಯೊಂದು ಸನ್ನಿವೇಶಕ್ಕೆ ಜೀವಂತಿಕೆಯನ್ನು ತುಂಬುವ ಕೆಲಸವನನ್ನು ಇವರು ಮಾಡಿದ್ದಾರೆ. ಶೋಭಾ ದಿನೇಶ್ ಇವರು ನನ್ನ ಆತ್ಮೀಯರು. ಇವರು ಅನೇಕ ಕಥೆಗಳನ್ನು, ಕವನಗಳನ್ನು ಹಾಗೂ ನಾಟಕಗಳನ್ನು ಬಹಳ ಸೊಗಸಾಗಿ ಬರೆಯುತ್ತಾ ವಾಟ್ಸಪ್ಸ್ ಇತ್ಯಾದಿ ಗುಂಪುಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಕೀರ್ತಿ ಗಳಿಸಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ವಿವಿಧ ಕವಿಗೋಷ್ಠಿಗಳಲ್ಲಿ ಭಾಗವಹಿಸಿದ್ದಾರೆ, ಮಾತ್ರವಲ್ಲದೆ ಹಲವಾರು ಕಥೆ, ಕವನಗಳನ್ನು ಬರೆದು, ಅತ್ಯುತ್ತಮ ಪ್ರದರ್ಶನ ನೀಡಿ ಪ್ರಥಮ, ದ್ವಿತಿಯ, ಮೆಚ್ಚುಗೆ ಎಂಬ ಅನೇಕ ಬಿರುದುಗಳನ್ನು ಪಡೆದುಕೊಂಡಿದ್ದಾರೆ. ಕರಾವಳಿ ಭಾಗದಲ್ಲಿ ನಡೆಸುವ ತುಳು ಸಾಹಿತ್ಯ ಗೋಷ್ಠಿಗಳಲ್ಲಿಯೂ ಭಾಗವಹಿಸಿ ಬಹುಮಾನ, ಪುರಸ್ಕಾರಗಳನ್ನು ಪಡೆದಿದ್ದಾರೆ. ಇವರು ಅಚ್ಚುಕಟ್ಟಾಗಿ ಬರೆಯುವುದಲ್ಲದೆ ಇತರರಿಗೂ ಮಾರ್ಗದರ್ಶನ ನೀಡುವ ಇವರು ಸದಾ ಹಸನ್ಮುಖಿ ಪ್ರತಿಭೆ. ಇವರಿಗೆ ಅನೇಕ ಪ್ರಶಸ್ತಿ ಪುರಸ್ಕಾರಗಳು ಲಭಿಸಿವೆ. ಇವರು ಬರೆದಿರುವ ನ್ಯಾನೋ ಕಥೆಗಳಲ್ಲಿ ತಾವು ಕಂಡಿರುವ ಅನುಭವಗಳೊಂದಿಗೆ ಸಮಾಜದಲ್ಲಿ ಘಟಿಸುವ ಹಾಗೂ ಹೋಗುಗಳು, ಪ್ರೀತಿ, ಕರುಣೆ, ನೋವು, ಹಬ್ಬ ಹರಿದಿನಗಳು, ಸಂಸಾರ–ಸಂಸ್ಕಾರ, ಆಚಾರ–ವಿಚಾರ, ನಗು–ಅಳು, ಬದುಕು, ಹೊಸತನ, ಮಗು, ಅದೃಷ್ಟ ಮುಂತಾದವುಗಳನ್ನು ರಚಿಸಿ ಕನ್ನಡ ಜನತೆಯ ಮುಂದಿರಿಸಿದ್ದಾರೆ. ನಿಖರವಾಗಿ ಹೇಳಲಾಗದಿದ್ದರೂ ಸಾಧಾರಣವಾಗಿ ನೂರು ಪದಗಳ ಆಸುಪಾಸಿನಲ್ಲಿ ಹೆಣೆದವುಗಳು ನಮ್ಮನ್ನು ಸೆಳೆಯುತ್ತವೆ. ಆಸ್ಪತ್ರೆ ಎಂದರೆ ಅದು ಸತ್ಯವನ್ನು ತಿಳಿಸಿಕೊಡುವ ತಾಣ. ಹಾಸಿಗೆ ಮೇಲೆ ಮಲಗಿರುವ ರೋಗಿಗೆ ತನ್ನವರು ಕೇವಲ ರೋಗಿಗಳಿಗೆ ಶುಶೂಷೆ ನೀಡುವ ಸ್ಥಳ ಮಾತ್ರ ಎಂದಲ್ಲ. ಬದುಕಿನ ಯಾರು, ಸ್ವಾರ್ಥಿಗಳು ಯಾರು ಎಂಬುದನ್ನು ತೋರಿಸಿಕೊಡುವುದು ಮಾತ್ರವಲ್ಲದೆ, ಹೇಗೆ ಕಳೆಯಬೇಕು ಎಂಬೆಲ್ಲ ಸತ್ಯದರ್ಶನವನ್ನು ಮಾಡಿಸುತ್ತದೆ. ಅಂತೆಯೇ ಇಲ್ಲ ಅಲ್ಲಿಗೆ ಬರುವ ಪ್ರತಿಯೊಬ್ಬರಿಗೂ ನಾವು ಯಾರು, ಈ ಮಾನವ ಜನ್ಮವನು ಬರುವ ಪಶ್ಚಾತ್ತಾಪ ಕತೆಯಲ್ಲಿ ನಿಖಿಲ್ ಮಾಡಿದ ಸಣ್ಣ ತಪ್ಪಿನಿಂದಾಗಿ ತಾ ಸುಮಿತ್ರಳ ಜೀವವೇ ಹೋದುದನ್ನು ಕಂಡಾಗ ನಾವು ಹಿರಿಯರನ್ನು ಹೇಗೆ ನೋಡಿಕೊಳ್ಳಬೇಕು, ಅವರ ಆರೋಗ್ಯದಲ್ಲಿ ಎಷ್ಟು ಜಾಗ್ರತೆ ವಹಿಸಬೇಕು, ಇಲ್ಲರೂ ಹೋದಲ್ಲಿ ಎಂತಹ ಪರಿಣಾಮ ಎದುರಿಸಬೇಕಾದೀತು ಎಂದು ತಿಳಿದು ಬರುತ್ತದೆ. ಇನ್ನು ಲಕ್ಕಿ ಎಂಬ ಕತೆಯು ಹುಟ್ಟಿದ ಮಗುವನ್ನು ಆಸ್ಪತ್ರೆಯಲ್ಲೇ ಬಿಟ್ಟು ಹೋದ ತಾಯಿ, ಮತ್ತು ಅನಾಥವಾದ ಮಗುವನ್ನು ದತ್ತು ಪಡೆಯಲು ಮುಂದೆ ಬಂದಿರುವ ದಂಪತಿಗಳ ನಡುವೆ ಆಸತ್ರೆಯ ನರ್ಸ್ ಹೇಗೆ ಮಗುವನ್ನು ಪೋಷಿಸಿದಳು ಎಂಬುದನ್ನು ತಿಳಿಸುವುದಲ್ಲದೆ ಇದೇ ರೀತಿ ಎಷ್ಟೋ ಮಕ್ಕಳು ಹುಟ್ಟಿದ ಕ್ಷಣದಲ್ಲೇ ಅನಾಥರಾಗುತ್ತಿದ್ದಾರೆ ಎಂಬ ಎಚ್ಚರಿಕೆಯ ಗಂಟೆಯನ್ನು ಮೊಳಗಿಸುತ್ತದೆ. ಇದೇ ರೀತಿ, ವಿಧಿಯಾಟ, ರಿಸೆಪ್ಷನಿಸ್, ಅರೆಸ್ಟ್ ಮೊದಲಾದ ಕತೆಗಳು ಆಸತ್ರೆಯ ಒಳಗಿನ ಚಿತ್ರಣವನ್ನು ನಮ್ಮ ಮುಂದೆ ಕಟ್ಟಿಕೊಡುತ್ತವೆ. ಬದುಕಿನ ವಿವಿಧ ಮಗ್ಗುಲುಗಳನ್ನು ತೋರಿಕೊಡುವ ಕತೆಗಳು ಕೂಡಾ ಇಲ್ಲಿ ನಮ್ಮನ್ನು ಸೆಳೆಯುತ್ತವೆ. ಬಾಳು ಬೆಳಗಿದವ ಕತೆ, ಹಾಗೆಯೇ ಆತುರದ ನಿರ್ಧಾರದಿಂದ ಆತ್ಮಹತ್ಯೆ ಮಾಡಿಕೊಂಡ ಕತೆ, ಇಂತದ್ದೇ ಹಲವು ಕತೆಗಳಿದ್ದು, ಮಗ, ಅಭೀಷ್ಟ, ಧರ್ಮ ಸಂಕಟ, ಮಿಂಚು ಮುಂತಾದವು ಬದುಕಿನ ಬೇರೆ ಬೇರೆ ಆಯಾಮಗಳನ್ನು ನಮ್ಮ ಮುಂದೆ ತಂದು ನಿಲ್ಲಿಸುತ್ತವೆ ಯಾರವನು ಕತೆಯು ಮನಸ್ಸಿನಲ್ಲಿನ ಸಂಶಯ ಎಂಬ ಪಿಶಾಚಿಯನ್ನು ದರ್ಶನ ಮಾಡಿಸುತ್ತದೆ. ಇನ್ನು ಶಾಲೆಗೆ ರಜೆ ಕತೆಯು ಇಂದಿನ ಮಕ್ಕಳ ಮನಸ್ಥಿತಿಯನ್ನು ಎತ್ತಿ ತೋರಿಸುತ್ತದೆ. ಕಣ್ಣಾರೆ ಕಂಡರೂ ಕತೆ ಕೂಡಾ ವ್ಯಕ್ತಿಯ ನಡೆ ನುಡಿ ಹೇಗಿರಬೇಕು ಎಂಬುದನ್ನು ಹೇಳುತ್ತದೆ ವಾಸ್ತು ಎಂದು ಅತಿಯಾಗಿ ನಂಬಿ ಮನೆ ಕಟ್ಟಿಸುವುದು ಮುಖ್ಯವಲ್ಲ. ಅದರಿಂದ ಮುಂದೇನಾಗಬಹುದು ಎಂಬ ಕನಿಷ್ಠ ಜ್ಞಾನ ಇರಬೇಕು ಎಂಬುದು ವಾಸ್ತು ಕತೆಯ ಹಂದರವಾಗಿದೆ. ಹೀಗೆ ವೈವಿಧ್ಯಮಯವಾದ ಕತೆಗಳು ಇನ್ನೂ ಹಲವಿದೆ. ಒಟ್ಟಿನಲ್ಲಿ ಪಾರಿಜಾತ ಹೂವೊಂದು ಅರಳಿ ಹೇಗೆ ಎಲ್ಲರನ್ನೂ ತನ್ನೆಡೆಗೆ ಸೆಳೆಯುತ್ತದೆಯೋ ಹಾಗೆಯೇ ಈ ಪಾರಿಜಾತ–ಸಣ್ಣ ಕತೆಗಳು ಕೂಡ ಓದುಗರ ಮನಸನ್ನು ಸೆಳೆಯುತ್ತದೆ.

ಇವರಿಂದ ಕನ್ನಡ ಸಾಹಿತ್ಯ ಜಗತ್ತಿಗೆ ಮತ್ತಷ್ಟು ಕೃತಿಗಳು ಹೊರಹೊಮ್ಮಲಿ.

**ಪಾರಿಜಾತದ ಬೆಲೆ: ?160/–.**

# ನಗುನಗುತಾ ನಲಿ ನಲಿ ಏನೇ ಆಗಲಿ.....



ವಿವೇಕನಂದ ಹೆಚ್.ಕೆ

ಅತ್ತ ಮೂರನೇ ಮಹಾಯುದ್ಧದ ಸಾಧ್ಯತೆ, ಇತ್ತ ಬೆಲೆ ಏರಿಕೆಯ ಹಿಂಸೆ, ಸಮಾಜದಲ್ಲಿ ಕ್ರೌರ್ಯ, ಅಸಹನೆ, ಮನಸ್ಸು ಏಕೋ ಮಾನಸಿಕವಾಗಿ ದೈಹಿಕವಾಗಿ ವಿಲವಿಲ ಒದ್ದಾಡುತ್ತದೆ. ವಿಪರೀತ ಧೂಳು, ಏರುತ್ತಿರುವ ವಾತಾವರಣದ ಉಷ್ಣತೆ, ಕೆಲವು ಅನಿರೀಕ್ಷಿತ ಸಾವುಗಳು ಮನಸ್ಸನ್ನು ಗೊಂದಲಗೊಳಿಸುತ್ತವೆ, ಬದುಕು ನಿರಾಸೆ ಮೂಡಿಸುತ್ತದೆ.....

ವಿಶ್ವದಲ್ಲಿ ನಾಗರಿಕತೆಯ ಉಗಮ ದಾಖಲಾಗಿರುವ ದಿನದಿಂದ ಇಂದಿನವರೆಗೂ ಆಗಾಗ ಅನೇಕ ರೀತಿಯ ಆಘಾತಗಳನ್ನು ಈ ಸಮಾಜ ಅನುಭವಿಸುತ್ತಾ ಬಂದಿದೆ.
**ಕಾಡಿನ ಕ್ರೂರ ಮೃಗಗಳಿಂದ,**
**ಪ್ರಾಕೃತಿಕ ಅವಘಡಗಳಿಂದ,**
**ರಾಜರುಗಳ ಆಕ್ರಮಣಗಳಿಂದ, ಭಯಂಕರ ಯುದ್ಧಗಳಿಂದ,**
**ಹುಚ್ಚು ಸರ್ವಾಧಿಕಾರಿಗಳಿಂದ, ಬರಗಾಲದಿಂದ,**
**ಅನೇಕ ರೋಗ ರುಜಿನಗಳಿಂದ**
**ಎಲ್ಲಾ ಶತಮಾನಗಳಲ್ಲೂ ಆತಂಕ ಎದುರಿಸಿದೆ.**

ಕೆಲವು ವರ್ಷಗಳ ಹಿಂದಿನ ಕೊರೋನಾ ವೈರಸ್, ಹೀಗೆ ಆಯಾ ಕಾಲಕ್ಕೆ ಅದೇ ಭಯಾನಕ. ಯಾವುದೂ ಹೆಚ್ಚು ಅಲ್ಲ ಕಡಿಮೆಯೂ ಅಲ್ಲ. ಕೆಲವು ಇಂಗ್ಲೀಷ್ ಸಿನಿಮಾಗಳಲ್ಲಿ ಬೇರೆ ಲೋಕದಿಂದ ದಾಳಿ ಇಡುವ ಏಲಿಯನ್ ಗಳ ವಿರುದ್ಧ ಹೋರಾಡುವ ದೃಶ್ಯಗಳನ್ನು ನೋಡಿರಬಹುದು. ಅವು ಮಾಡುವ ಅನಾಹುತಗಳು ಮತ್ತು ಕೊನೆಗೆ ಅವುಗಳ ವಿರುದ್ಧ ಜಯ. ಇದೂ ಸಹ ಅದೇ ರೀತಿ. ಆದರೆ ಅದು ಸಿನಿಮಾ, ಇದು ವಾಸ್ತವ....

ಡಾರ್ವಿನ್‌ನ ಸಾರ್ವಕಾಲಿಕ ಸಿದ್ಧಾಂತದಂತೆ ಬಲಿಷ್ಠವಾದದ್ದು ಮಾತ್ರ ಉಳಿಯುತ್ತದೆ. ಮನುಷ್ಯ ಉಳಿವಿಗಾಗಿ ಹೋರಾಡುತ್ತಿದ್ದಾನೆ.


ಈ ಸಮಯದಲ್ಲಿ ನಿಜವಾಗಲೂ ಮಾನಸಿಕ ಮತ್ತು ದೈಹಿಕ ಸಾಮರ್ಥ್ಯ ಬಹಳಷ್ಟು ಅಗ್ನಿ ಪರೀಕ್ಷೆಗೆ ಒಳಪಡುತ್ತದೆ. ಮಾನಸಿಕ ಕಿರಿಕಿರಿ ಉಂಟುಮಾಡುತ್ತದೆ. ಅದಕ್ಕಾಗಿ ಸ್ವಲ್ಪ ಅನುಕೂಲಕರ ಪರಿಸ್ಥಿತಿಯ ಮಧ್ಯಮ ಮತ್ತು ಕೆಳ ಮಧ್ಯಮ ವರ್ಗದವರು ಈ ಕೆಲವು ವಿಧಾನಗಳನ್ನು ಅನುಸರಿಸಬಹುದು........

1) ಯೋಗ, ಪ್ರಾಣಾಯಾಮ, ಧ್ಯಾನ, ವ್ಯಾಯಾಮ, ಯಾವುದಾದರೂ ಲಲಿತ ಕಲೆಗಳು, ನೃತ್ಯಗಳ ಮೊರೆ ಹೋಗಬಹುದು. ದೈಹಿಕವಾಗಿ ದುರ್ಬಲರಾದವರು ಧ್ಯಾನ ಮತ್ತು ಪ್ರಾಣಾಯಾಮದಿಂದ ಸಾಕಷ್ಟು ಮಾನಸಿಕ ಲಾಭ ಪಡೆಯಬಹುದು.
2) ಇಲ್ಲಿಯವರೆಗೂ ಓದಲು ಸಾಧ್ಯವಾಗದ ಯಾವುದಾದರೂ ಆಸಕ್ತಿಯ ಪುಸ್ತಕಗಳನ್ನು ಓದಲು ಪ್ರಾರಂಭಿಸಬೇಕು. ಖಂಡಿತ ಓದು ನಿಮ್ಮನ್ನು ಮಾನಸಿಕ ಖಿನ್ನತೆಯಿಂದ ಪಾರು ಮಾಡುತ್ತದೆ.
3) ನಿಮ್ಮ ಆಸಕ್ತಿಯ ಏನನ್ನಾದರೂ ಬರೆಯಲು ಪ್ರಾರಂಭಿಸಿ. ಕನಿಷ್ಠ ದಿನಚರಿ ಅಥವಾ ಬದುಕಿನ ನೆನಪಿನ ಪುಟಗಳಾದರೂ ದಾಖಲಿಸಿರಿ. ಇದು ಓದಿಗಿಂತ ಹೆಚ್ಚು ಸಮಾಧಾನಕರ ಪರಿಣಾಮ ನಿಮ್ಮ ಮನಸ್ಸಿನ ಮೇಲೆ ಬೀರುತ್ತದೆ.
4) ಹಳೆಯ ಗೆಳೆಯರನ್ನು ದೂರವಾಣಿಯಲ್ಲಿ ಸಂಪರ್ಕಿಸಿ ತೃಪ್ತಿಯಾಗುವಷ್ಟು ಮಾತನಾಡಿ. ಅದನ್ನು ವಿರಾಮದ ಎಲ್ಲಾ ದಿನಗಳಲ್ಲಿಯೂ ಮುಂದುವರಿಸಿ. ಅಕ್ಷರದ ಚಾಟ್ ಗಳಿಗಿಂತ ನೇರ ಮಾತುಗಳು ನಿಮ್ಮನ್ನು ಉಲ್ಲಸಿತರಾಗಿಡುತ್ತದೆ.
5) ಮಕ್ಕಳು ಮನೆಯವರೊಂದಿಗೆ ಚೆಸ್, ಕೇರಂ, ಹಾವು ಏಣಿಯಾಟ, ಚೌಕಾಬಾರ ಮುಂತಾದ ಆಟಗಳನ್ನು ಆಡಬಹುದು. ಇದು ನಿಮ್ಮ ಬಹುತೇಕ ಸಮಯ ಆಕ್ರಮಿಸುತ್ತದೆ. ಸಮಯ ಕಳೆಯುವುದೇ ತಿಳಿಯುವುದಿಲ್ಲ.
6) ಕುಟುಂಬ ಸ್ವಲ್ಪ ದೊಡ್ಡದಿದ್ದರೆ ಚೀಟಿ ಬರೆದು ಕಳ್ಳ ಪೋಲೀಸ್ ಆಟ, ಅಂತ್ಯಾಕ್ಷರಿ, ಖಾಲಿ ಹಾಳೆಯ ಮೇಲೆ ಚುಕ್ಕಿಯಿಟ್ಟು ಜೋಡಿಸುವುದು, ಕಣ್ಣಾ ಮುಚ್ಚಾಲೆ, ಯಾವುದಾದರೂ ವಸ್ತುಗಳನ್ನು ಮನೆಯಲ್ಲಿ ಮುಚ್ಚಿಟ್ಟು ಹುಡುಕುವುದು ಮುಂತಾದ ಆಟಗಳನ್ನು ಆಡಬಹುದು. ಇದು ಸ್ವಲ್ಪ ಖುಷಿ ಕೊಡುತ್ತದೆ.
7) ಸರಳ ರೀತಿಯ ಅಡುಗೆಗಳ ಪ್ರಯೋಗ ಮಾಡಬಹುದು. ಇಲ್ಲಿಯವರೆಗೂ ಮನೆಯಲ್ಲಿ ಯಾರು ಅಡುಗೆ ಮಾಡುತ್ತಿದ್ದರೋ ಅದನ್ನು ಬದಲಾಯಿಸಿ ಮತ್ತೊಬ್ಬರು ಒಂದಷ್ಟು ಪ್ರಯತ್ನಿಸಬಹುದು. ಆದರೆ ಮಿತ ಆಹಾರ ಒಳ್ಳೆಯದು.
8) ಆರೋಗ್ಯದ ಕಾರಣಕ್ಕಾಗಿ ಉಪವಾಸ ವ್ರತಗಳನ್ನು ಸಹ ಮಾಡಬಹುದು. ಹೌದು ಏಕತಾನತೆ ಮುರಿಯಲು ವೈದ್ಯರ ಸಲಹೆ ಮೇರೆಗೆ ಉಪವಾಸ ದೇಹ ಮತ್ತು ಮನಸ್ಸಿನ ನಿಯಂತ್ರಣಕ್ಕೆ ಒಳ್ಳೆಯ ಮದ್ದು.
ಅದು ಅವರವರ ಆರೋಗ್ಯ ಸ್ಥಿತಿ ಅವಲಂಬಿಸಿರುತ್ತದೆ.
9) ಅನುಕೂಲ ಇದ್ದರೆ ಅತ್ಯುತ್ತಮ ಸಿನಿಮಾ ನೋಡಬಹುದು ಮತ್ತು ಸಂಗೀತ ಆಲಿಸಬಹುದು. ಇವು ಖಂಡಿತವಾಗಿ ನಿಮ್ಮನ್ನು ಮತ್ತೊಂದು ಲೋಕಕ್ಕೆ ಕೊಂಡೊಯ್ಯುತ್ತದೆ. ಕೆಲವೊಮ್ಮೆ ಆಳವಾಗಿ ಯೋಚಿಸುವಂತೆ ಪ್ರೇರೇಪಿಸುತ್ತದೆ.
10) ಮೊಬೈಲ್ ನಲ್ಲಿರುವ ಅನೇಕ ಹೊಸ ಹೊಸ ತಾಂತ್ರಿಕ ಸಾಧ್ಯತೆಗಳನ್ನು ಕಲಿಯಲು ಪ್ರಯತ್ನಿಸಬಹುದು. ಸದಾ ವೇಗದ ಜೀವನದಲ್ಲಿ ನಾವು ಕನಿಷ್ಠ ಉಪಯೋಗ ಮಾತ್ರ ತಿಳಿದಿರುತ್ತೇವೆ. ಆದರೆ ಇಂದಿನ ಸ್ಮಾರ್ಟ್ ಫೋನ್ ಗಳಲ್ಲಿ ವಿಶ್ವ ರೂಪ ದರ್ಶನ ಪಡೆಯಬಹುದು.
11) ಮಾತಿನ ಸಂತೆಯಲ್ಲಿ ಮರೆಯಾಗಿದ್ದ ಮೌನದ ದಿವ್ಯತೆಯನ್ನು ಹಿಡಿದಿಡಲು ಪ್ರಯತ್ನಿಸಬಹುದು. ಮೌನ ತುಂಬಾ ಕಠಿಣ. ಆದರೆ ಅದು ಒಮ್ಮೆ ಅನುಭವಕ್ಕೆ ಸಿಕ್ಕರೆ ತುಂಬಾ ಪರಿಣಾಮಕಾರಿ. ಅದೊಂದು ಅನುಭಾವ. ಸಾಧ್ಯವಾದರೆ ಪ್ರಯತ್ನಿಸಿ
12) ಇದು ನನಗೆ ಹೊಳೆದ ಕೆಲವು ವಿಷಯಗಳು ಮಾತ್ರ. ಇದರ ಜೊತೆಗೆ ನಿಮಗೂ ಹಲವಾರು ವಿಧಾನಗಳು ತಿಳಿದಿರುತ್ತದೆ. ನಾನು ಈ ಮೂಲಕ ಮತ್ತೊಮ್ಮೆ ನೆನಪಿಸುತ್ತಿದ್ದೇನೆ ಅಷ್ಟೆ...............

ಇದರ ಜೊತೆ ಖಂಡಿತವಾಗಿಯೂ ಬಡಜನರರನ್ನು ಜ್ಞಾಪಿಸಿಕೊಳ್ಳಲೇ ಬೇಕು. ಸರ್ಕಾರಗಳು ಏನೇ ಹೇಳಿದರು ಈ ಆಡಳಿತ ಯಂತ್ರ ಅವರನ್ನು ಮುಟ್ಟುವುದು ತುಂಬಾ ಕಷ್ಟವಿದೆ. ಅವರು ಯಾವುದೇ ದಾಖಲೆ ಹೊಂದಿರದೆ ಲೆಕ್ಕಕ್ಕೇ ಸಿಗುವುದಿಲ್ಲ. ಉಳ್ಳವರು ಮತ್ತು ದಾನ ಮಾಡುವ ಮನಸ್ಸಿರುವವರು ಅವರಿಗೆ ಕೈಲಾದ ಸಹಾಯ ಮಾಡಬಹುದು.

ಮುಖ್ಯವಾಗಿ ರಾಜ್ಯ ರಾಜಧಾನಿಗಳ, ದೊಡ್ಡ ನಗರಗಳ ಬಸ್ ನಿಲ್ದಾಣ, ರೈಲು ನಿಲ್ದಾಣ, ಫ್ಲೈ ಓವರ್ ಗಳ ಬಳಿ ಮಲಗುವವರ ಸ್ಥಿತಿ ನಾಯಿಗಿಂತ ಕಡೆಯಾಗಿರುತ್ತದೆ.

ನಾವು ಎಷ್ಟು ಸಾಧ್ಯವೋ, ಎಲ್ಲಿ ಸಾಧ್ಯವೋ, ಎಷ್ಟು ಅನುಕೂಲವೋ ಅದನ್ನು ಬಳಸಿಕೊಂಡು ಇಂತಹವರಿಗೆ ಸಹಾಯ ಮಾಡಲು ಪ್ರಯತ್ನಿಸೋಣ.






ಅದು ಉಪಕಾರವಲ್ಲ ಕರ್ತವ್ಯ ಎಂದು ಭಾವಿಸೋಣ. ದಿನಗೂಲಿ ನೌಕರರು ಸಹ ಇದೇ ವ್ಯಾಪ್ತಿಯಲ್ಲಿ ಬರುತ್ತಾರೆ.

ಇಷ್ಟೆಲ್ಲದರ ನಡುವೆಯೂ ಈ ಸಿನೆಮಾ ಹಾಡು ಗುನುಗುನಿಸುತ್ತಿರಿ......
ನಗುನಗುತಾ ನಲಿ ನಲಿ,
ಏನೇ ಆಗಲಿ.......

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,